ಸಂಪುಟ: 04 ಸಂಚಿಕೆ: 98 ಪುಟಗಳು: 08 ಶುಕ್ರವಾರ 21 ಜೂನ್ 2024

www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833

₹5

ಮುಂಜಾನೆ ಮಾತು

ಸದಾಕಾಲ ಕ್ರಿಯಾಶೀಲರಾಗಿರಿ. ನಿಮ್ಮ ಜವಾಬ್ದಾರಿಗಳನ್ನು ನೀವೇ ಹೊತ್ತುಕೊಳ್ಳಿ. ನಿಮ್ಮ ಕನಸುಗಳಿಗಾಗಿ ಕೆಲಸ ಮಾಡಿ. ಇಲ್ಲವಾದರೆ ನೀವು ನಿಮ್ಮ ಅದೃಷ್ಟವನ್ನು ಬೇರೆಯವರಿಗೆ ಶರಣಾಗಿಸುತ್ತೀರಿ.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ದರ್ಶನ್‌ಗೆ ಮತ್ತೆ 2 ದಿನ ಪೊಲೀಸ್ ಕಸ್ಟಡಿ

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ನಟ ದರ್ಶನ್ ತೂಗುದೀಪ್ ಮತ್ತು ಇತರ ಮೂವರು ಆರೋಪಿಗಳನ್ನು ಮತ್ತೆ ಎರಡು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ನೀಡಿ ಬೆಂಗಳೂರು ಕೋರ್ಟ್ ಗುರುವಾರ ಆದೇಶಿಸಿದೆ. ಆರೋಪಿಗಳ ಪೊಲೀಸ್ ಕಸ್ಟಡಿ ಇಂದು ಅಂತ್ಯಗೊಂಡ ಹಿನ್ನೆಲೆಯಲ್ಲಿ ಪೊಲೀಸರು ಎಲ್ಲಾ ಆರೋಪಿಗಳನ್ನು ಇಂದು ಮಧ್ಯಾಹ್ನ ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಹಾಜರುಪಡಿಸಿದರು ಮತ್ತು ಹೆಚ್ಚಿನ ವಿಚಾರಣೆಗಾಗಿ ದರ್ಶನ್ ಹಾಗೂ ಇತರೆ ಮೂವರು ಆರೋಪಿಗಳನ್ನು ನಾಲ್ಕು ದಿನಗಳ ಕಾಲ ತಮ್ಮ ವಶಕ್ಕೆ ನೀಡುವಂತೆ ಮನವಿ ಮಾಡಿದರು. ಪೊಲೀಸರ ಮನವಿ

ಪುರಸ್ಕರಿಸಿದ ಕೋರ್ಟ್, ದರ್ಶನ್ ಹಾಗೂ ಇತರ ಮೂವರು ಆರೋಪಿಗಳನ್ನು ಎರಡು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ನೀಡಿದೆ. ಪ್ರಕರಣದಲ್ಲಿ ಮೊದಲ ಆರೋಪಿಯಾಗಿರುವ ದರ್ಶನ್ ಸ್ನೇಹಿತೆ ಪವಿತ್ರಾ ಗೌಡ ಸೇರಿದಂತೆ ಇತರ 13 ಆರೋಪಿಗಳನ್ನು ಕೋರ್ಟ್ 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.

ರೇಣುಕಾಸ್ವಾಮಿ ಎಂಬ ವ್ಯಕ್ತಿಯು ಪವಿತ್ರಾ ಗೌಡ ಅವರಿಗೆ ಅಶ್ಲೀಲ ಮೆಸೇಜ್ ಕಳಿಸಿದ್ದಾನೆ ಎಂಬ ಕಾರಣಕ್ಕೆ ಆತನನ್ನು ಚಿತ್ರದುರ್ಗದಿಂದ ಬೆಂಗಳೂರಿಗೆ ಕರೆತಂದು ಹತ್ಯೆ ಮಾಡಲಾಗಿದೆ.

ಈ ಪ್ರಕರಣ ಸಂಬಂಧ ಬೆಂಗಳೂರಿನ ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿದ್ದು, ಪೊಲೀಸರು ಈಗಾಗಲೇ ಸಾಕಷ್ಟು ಸಾಕ್ಷ್ಯಗಳನ್ನು ಕಲೆ ಹಾಕಿದ್ದಾರೆ. ಅನೇಕ ಸ್ಥಳಗಳಿಗೆ ತೆರಳಿ ಮಹಜರು ಮಾಡಲಾಗಿದೆ. ಪವಿತ್ರಾ ಗೌಡ ಮನೆಯಲ್ಲೂ ಮಹಜರು ಮಾಡಲಾಗಿತ್ತು. ತನಿಖೆ ಇನ್ನೂ ಪ್ರಗತಿಯಲ್ಲಿದೆ.

7 ವೇತನ ಆಯೋಗ ಜಾರಿಗೆ ಸಿಎಂಗೆ ಅಧಿಕಾರ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರಿ ನೌಕರರ ವೇತನ ಪರಿಷ್ಕರಣೆಗೆ 7 ವೇತನ ಆಯೋಗದ ವರದಿಯನ್ನು ಜಾರಿ ಮಾಡಲು ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಅಧಿಕಾರ ನೀಡಲಾಗಿದೆ.ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಎಲ್ಲಾ ಸಚಿವರು ಏಳನೇ ವೇತನ ಆಯೋಗದ ವರದಿಯಲ್ಲಿ ಶಿಫಾರಸ್ಸುಗಳನ್ನು ಜಾರಿ ಮಾಡುವುದಕ್ಕೆ ಒಪ್ಪಿಗೆ ನೀಡಿದ್ದು, ಇದನ್ನು ಅಂತಿಮವಾಗಿ ಸಿಎಂ ತೀರ್ಮಾಣ ತೆಗೆದುಕೊಳ್ಳುವುದಕ್ಕೆ ಸಚಿವರು ಒಪ್ಪಿಗೆ ಸೂಚನೆ ನೀಡಿದ್ದಾರೆ ಎನ್ನಲಾಗಿದೆ. ಆಯೋಗದ ಶಿಫಾರಸ್ಸಿನಂತೆ ಕೆಲವು ಸಚಿವರು ಶೇಕಡ ವೇತನ ಹೆಚ್ಚಕ್ಕೆ ಒಪ್ಪಿಗೆ ನೀಡಿದ್ದಾರೆ ಎನ್ನಲಾಗಿದೆ. ಈ ನಡುವೆ ವೇತನ ಹೆಚ್ಚಳದ ಬಗ್ಗೆ ಶೀಘ್ರದಲ್ಲಿ ಅಧಿಸೂಚನೆ ಹೊರಡಿಸಲಾಗಿದೆ ಅಂತ ತಿಳಿದು ಬಂದಿದೆ.

ಚನ್ನಪಟ್ಟಣದಿಂದ ಡಿಕೆಶಿ ಸ್ಪರ್ಧೆ ವಿಚಾರ: ಮಾಜಿ ಸಚಿವ ವ್ಯಂಗ್ಯ

• ಉದಯವಾಹಿನಿ, ಬೆಂಗಳೂರು

ಚನ್ನಪಟ್ಟಣ ಕ್ಷೇತ್ರದ ಉಪಚುನಾವಣೆಯಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಸ್ಪರ್ಧೆ ಮಾಡುವ ವಿಚಾರವಾಗಿ ಪ್ರತಿಕ್ರಿಯಿಸಿರುವ ಮಾಜಿ ಸಚಿವ ಸುರೇಶ್ ಕುಮಾರ್, ಇದು ತುಘಲಕ್ ದರ್ಬಾರ್ ಎಂದು ಕಿಡಿಕಾರಿದ್ದಾರೆ. ಇತಿಹಾಸದಲ್ಲಿ ಓರ್ವ ವ್ಯಕ್ತಿ ರಾಜಧಾನಿಯನ್ನು ಬದಲಾಯಿಸಿದ್ದ. ರಾಜಧಾನಿಯನ್ನು ದೆಹಲಿಯಿಂದ ದೌಲತಾಬಾದ್‌ಗೆ ಬದಲಾಯಿಸಿದ್ದ. ನಂತರ ದೌಲತಾಬಾದ್ ನಿಂದ ದೆಹಲಿಗೆ ರಾಜಧಾನಿಯನ್ನು ವಾಪಾಸ್ ತಂದ. ಇತಿಹಾಸದಲ್ಲಿ ಈ ವಿಲಕ್ಷಣ ವ್ಯಕ್ತಿಯ ಹೆಸರು ಯಾವಾಗಲೂ ನೆನಪಿರುತ್ತದೆ. ಇದನ್ನೇ ತುಘಲಕ್ ದರ್ಬಾರ್ ಅನ್ನುವುದು ಎಂದು ವ್ಯಂಗ್ಯವಾಡಿದ್ದಾರೆ. ಡಿ.ಕೆ.ಶಿವಕುಮಾರ್ ಕನಕಪುರದಿಂದ ಆಯ್ಕೆಯಾಗಿ 2028ರವರೆಗೆ ಶಾಸಕರಾಗಿ ಕರ್ತವ್ಯನಿರ್ವಹಿಸುವ ಅವಕಾಶವಿದೆ. ಚನ್ನಪಟ್ಟಣ ಉಪಚುನಾವಣೆಯಲ್ಲಿ ಸ್ಪರ್ಧಿಸಲು ಹೊರಟಿರುವುದು ಅನಗತ್ಯ ಪ್ರಹಸನ ಇದಕ್ಕೆ ಏನು ಹೇಳಬೇಕು ಸಾರ್ವಜನಿಕರ ಹಣ, ರಾಷ್ಟ್ರದ ಸಂಪತ್ತು ಹೇಗೆ ವೈಯಕ್ತಿಕ ಪ್ರತಿಷ್ಠೆಗೆ ವೆಚ್ಚವಾಗುತ್ತದೆ ಎಂಬುದಕ್ಕೆ ಇದು ಸ್ಪಷ್ಟ ಉದಾಹರಣೆ. ಡಿ.ಕೆ.ಶಿವಕುಮಾರ್ ಅವರ ಈ ನಡೆ ವಿವೇಚನೆ ಮತ್ತು ವಿವೇಕದಿಂದ ಕೂಡಿದ ಅತಿರೇಕದ ನಡೆ. ರಾಹುಲ್ ಗಾಂಧಿಯವರು ಇದಕ್ಕೆ ಒಪ್ಪುತ್ತಾರೆಯೇ ಎಂದು ಪ್ರಶ್ನಿಸಿದ್ದಾರೆ.

ಬೆಂಗಳೂರಿನ ಮ್ಯೂಸಿಯಂ ರಸ್ತೆಯಲ್ಲಿ ಅಗ್ನಿ ಅವಘಡ



• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆ ವ್ಯಾಪ್ತಿಯ ಮ್ಯೂಸಿಯಂ ರಸ್ತೆಯಲ್ಲಿ ಅಗ್ನಿ ಅವಘಡ ಸಂಭವಿಸಿದೆ. ಕಟ್ಟಡ ಒಂದರ ಎಡನೇ ಮಹಡಿಯಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಆದರೆ ಘಟನೆಗೆ ನಿಖರ ಕಾರಣ ತಿಳಿದುಬಂದಿಲ್ಲ. ಘಟನೆಯಲ್ಲಿ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಸ್ಥಳಕ್ಕೆ ಅಗ್ನಿಶಾಮಕ ವಾಹನ ದೌಡಾಯಿಸಿದ್ದು, ಬೆಂಕಿ ನಂದಿಸಿದ್ದಾರೆ.

ಆದರೆ ಅಗ್ನಿ ಅವಘಡಕ್ಕೆ ನಿಖರ ಕಾರಣ ಏನು ಎಂದು ತಿಳಿದುಬಂದಿಲ್ಲ. ಇತ್ತೀಚೆಗೆ ಗುಜರಾತ್‌ನಲ್ಲಿ ಸಂಭವಿಸಿದ್ದ ಅಗ್ನಿದುರಂತ ಹಿನ್ನಲ್ಲೆ ಬೆಂಗಳೂರಿನ ಮಾಲ್, ಗೇಮಿಂಗ್ ಜೋನ್‌ಗಳಲ್ಲಿ ಕಟ್ಟೆಚ್ಚರ ವಹಿಸಲಾಗಿತ್ತು. ಮಾಲ್, ಗೇಮಿಂಗ್ ಜೋನ್‌ಗಳಲ್ಲಿ ಕಟ್ಟೆಚ್ಚರ ವಹಿಸಿವಂತೆ ಡಿಸಿಎಂ ಡಿ.ಕೆ. ಶಿವಕುಮಾರ್ ಸೂಚನೆ ನೀಡಿದ್ದರು

ಹೃದಯಂಗಮ ಯೋಗ ಸಂಗಮ

■ ಯೋಗಾ ಯೋಗ ■ ನಮೋ ಯೋಗ
■ ಜ್ಞಾನಕ್ಕೆ ಯೋಗ ■ ಅಜ್ಞಾನಕ್ಕೆ ರೋಗ

• ಉದಯವಾಹಿನಿ, ಬೆಂಗಳೂರು

ಮೋದಿ ಯೋಗ ಪ್ರದರ್ಶನ

ಪ್ರಧಾನಿ ಮೋದಿ ಅವರ 2 ದಿನಗಳ ಜಮ್ಮು ಮತ್ತು ಕಾಶ್ಮೀರ ಪ್ರವಾಸ ಆರಂಭವಾಗಲಿದೆ. 3ನೇ ಬಾರಿ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಬಳಿಕ ಜಮ್ಮು ಮತ್ತು ಕಾಶ್ಮೀರಕ್ಕೆ ಮೋದಿ ಅವರ ಮೊದಲ ಭೇಟಿಯೂ ಇದಾಗಿದೆ. ಶ್ರೀನಗರದಲ್ಲಿ ಜೂ.21ರಂದು ನಡೆಯಲಿರುವ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಮೋದಿ ಪಾಲ್ಗೊಳ್ಳಲಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ವ್ಯಾಪಕ ಸುರಕ್ಷತಾ ಕ್ರಮ ಕೈಗೊಳ್ಳಲಾಗಿದೆ. ವಿವಿಧ ಹಂತಗಳಲ್ಲಿ ಭದ್ರತೆ ನಿಯೋಜಿಸಲಾಗಿದೆ. ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ದಾಖಲೆ ಪ್ರಮಾಣದ ಮತದಾನವಾಗಿದ್ದು, ಪ್ರಧಾನಿ ಅವರ ಈ ಭೇಟಿಯು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗಮನ ಸೆಳೆದಿದೆ.

ಈ ಹಿನ್ನೆಲೆಯಲ್ಲಿ ಶಿಷ್ಟಾಚಾರದ ಪ್ರಕಾರ, ಹಲವು ಹಂತಗಳಲ್ಲಿ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಕಾಶ್ಮೀರ ವಲಯದ ಐಜಿಪಿ ವಿಧಿ ಕುಮಾರ್ ಬರ್ಡಿ ತಿಳಿಸಿದ್ದಾರೆ. ಭದ್ರತಾ ಕ್ರಮದ ಭಾಗವಾಗಿ ಶ್ರೀನಗರದಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದ್ದು, ಡ್ರೋನ್ ಮತ್ತು ಕ್ವಾಡ್‌ಕಾಪ್ಟರ್ ಕಾರ್ಯಾಚರಣೆಗಳನ್ನು ತಾತ್ಕಾಲಿಕವಾಗಿ ನಿಷೇಧಿಸಲಾಗಿದೆ. ಡ್ರೋನ್ ನಿಯಮಗಳು 2021ರ ನಿಬಂಧನೆಗಳ ಪ್ರಕಾರ ನಿಯಮ ಉಲ್ಲಂಘಿಸಿದವರಿಗೆ ದಂಡ ಹಾಗೂ ಶಿಕ್ಷೆ ವಿಧಿಸಲಾಗುತ್ತದೆ ಎಂದು ಪೊಲೀಸರು ತಿಳಿಸಿದ್ದಾರೆ.

ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಶುಕ್ರವಾರ ರಾಜ್ಯ ಸೇರಿ ದೇಶಾದ್ಯಂತ ಅದ್ದೂರಿಯಾಗಿ ಆಚರಿಸಲು ಸಕಲ ಸಿದ್ಧತೆ ಕೈಗೊಳ್ಳಲಾಗಿದೆ. ಬೆಂಗಳೂರಿನ ಮಾಣಿಕ್ ಷಾ ಪರೇಡ್ ಮೈದಾನದಲ್ಲಿ ನಡೆಯುವ ಯೋಗಾಭ್ಯಾಸ ಕಾರ್ಯಕ್ರಮದಲ್ಲಿ ಕರ್ನಾಟಕ ಮತ್ತು ಗೋವಾ ಎನ್‌ಸಿಸಿ ನಿರ್ದೇಶನಾಲಯದ 8000ಕ್ಕೂ ಅಧಿಕ ಮಂದಿ ಕೆಡೆಟ್‌ಗಳು ಭಾಗವಹಿಸಲಿದ್ದಾರೆ. ರಾಜ್ಯದಲ್ಲಿ ಯೋಗಕ್ಷೇಮ (ವೆಲ್‌ನೆಸ್) ಪ್ರವಾಸೋದ್ಯಮವನ್ನು ಉತ್ತೇಜಿಸಲು ಪ್ರವಾಸೋದ್ಯಮ ಇಲಾಖೆ ಯೋಗ ಪ್ರದರ್ಶನಕ್ಕಾಗಿ 50 ಅಂತಾರಾಷ್ಟ್ರೀಯ ಪ್ರತಿನಿಧಿಗಳನ್ನು ರಾಜ್ಯಕ್ಕೆ ಆಹ್ವಾನಿಸಿದೆ. ಈ ಮೂಲಕ ಯೋಗವನ್ನು ಜಾಗತಿಕವಾಗಿ ವಿಸ್ತರಿಸಲು ಪ್ರಯತ್ನ ನಡೆಸಿದ್ದು, ಅವರನ್ನು ರಾಯಭಾರಿಗಳಾಗಿ ಮಾಡಲಾಗಿದೆ.

1 ಜೂ.21ರ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಜಮ್ಮು-ಕಾಶ್ಮೀರ ಸಜ್ಜು

2 ಶ್ರೀನಗರದಲ್ಲಿ ಬಿಗಿ ಭದ್ರತೆ, ಪ್ರಧಾನಿ ಮೋದಿ ಜೊತೆ 7,000 ಜನರಿಂದ ಯೋಗ ಪ್ರದರ್ಶನ

3 ದಾಲ್ ಸರೋವರದ ಬಳಿ ಭದ್ರತಾ ಸಿಬ್ಬಂದಿ ಗಸ್ತು, ಎಲ್ಲೆಡೆ ಕಟ್ಟೆಚ್ಚರ

ಅಂತಾರಾಷ್ಟ್ರೀಯ ಯೋಗ ದಿನದ ಇತಿಹಾಸ

2014 ರ ಯುನೈಟೆಡ್ ನೇಷನ್ಸ್ ಅಸೆಂಬ್ಲಿಯಲ್ಲಿ ಭಾರತದ ಪ್ರಧಾನಿ ನರೇಂದ್ರ ಮೋದಿಯವರು ತಮ್ಮ ಭಾಷಣದಲ್ಲಿ ಅಂತಾರಾಷ್ಟ್ರೀಯ ಯೋಗ ದಿನದ ಬಗ್ಗೆ ಪ್ರಸ್ತಾಪ ಮಾಡಿದರು. ಈ ಪ್ರಸ್ತಾವನೆಗೆ 177 ಸದಸ್ಯ ರಾಷ್ಟ್ರಗಳಿಂದ ಅನುಮೋದನೆ ಸಿಕ್ಕಿತು. ಆ ಬಳಿಕ 2015 ರ ಜೂನ್ 21 ರಂದು ಮೊದಲ ಬಾರಿಗೆ ಅಧಿಕೃತವಾಗಿ ಅಂತರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಾಯಿತು. ಮೊದಲ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಂದು ಪ್ರಧಾನಿ ಮೋದಿಯವರ ಉಪಸ್ಥಿತಿಯಲ್ಲಿ ಸರಿಸುಮಾರು 36000 ಉನ್ನತ ವ್ಯಕ್ತಿಗಳೊಂದಿಗೆ 35 ನಿಮಿಷಗಳ ಕಾಲ 21 ಯೋಗ ಆಸನಗಳನ್ನು ಪ್ರದರ್ಶಿಸಲಾಯಿತು. ಈ ಬಾರಿ ಜೂನ್ 21 ರಂದು ಹತ್ತನೇಯ ಅಂತರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಾಗುತ್ತಿದೆ.

ದಾಲ್ ಸರೋವರದ ತೀರದಲ್ಲಿ ಯೋಗ

10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಹಿನ್ನೆಲೆಯಲ್ಲಿ ಈ ಬಾರಿ ಪ್ರಧಾನಿ ಮೋದಿ ಅವರು ಯೋಗ ದಿನವನ್ನು ಜಮ್ಮು ಮತ್ತು ಕಾಶ್ಮೀರದಲ್ಲಿ ಆಚರಿಸಲಿದ್ದಾರೆ. ಶ್ರೀನಗರದ ದಾಲ್ ಸರೋವರದ ತೀರದಲ್ಲಿನ ಶೇರ್-ಐ-ಕಾಶ್ಮೀರ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ಪ್ರಧಾನಿ ಮೋದಿ ಅವರೊಂದಿಗೆ 9,000 ಮಂದಿ ಯೋಗ ಪ್ರದರ್ಶನ ನೀಡಲಿದ್ದಾರೆ ಎಂದು ಕೇಂದ್ರ ಸಚಿವ ಜಿತೇಂದ್ರ ಸಿಂಗ್ ತಿಳಿಸಿದ್ದಾರೆ. ಈ ವೇಳೆ ಜಮ್ಮು ಮತ್ತು ಕಾಶ್ಮೀರದ ಎಲ್ಲಾ 20 ಜಿಲ್ಲೆಗಳನ್ನು ವರ್ಚುವಲ್ ಆಗಿ ಸಂಪರ್ಕಿಸುವ ಯೋಜನೆ ಇದೆ ಪ್ರತಿ ಜಿಲ್ಲೆಯಿಂದ 2,000 ಜನರು ಸಂಪರ್ಕ ಸಾಧಿಸಿದರೂ, ಕಾರ್ಯಕ್ರಮದಲ್ಲಿ ಸುಮಾರು 50,000 ಭಾಗವಹಿಸಿದಂತಾಗುತ್ತದೆ ಎಂದು ಸಚಿವರು ವಿವರಿಸಿದ್ದಾರೆ.

ಸ್ವಯಂ ಮತ್ತು ಸಮಾಜಕ್ಕಾಗಿ ಯೋಗ

ಈ ಬಾರಿಯ 10ನೇ ಅಂತಾರಾಷ್ಟ್ರೀಯ ಯೋಗ ದಿನದ ಥೀಮ್ ವಸ್ತು ವಿಷಯ) ಸ್ವಯಂ ಮತ್ತು ಸಮಾಜಕ್ಕಾಗಿ ಯೋಗ' ಎಂದಾಗಿದೆ. ಜೂನ್ 21 ರಂದು ಪ್ರಧಾನಿ ಮೋದಿ ಅವರು ಜಮ್ಮು ಮತ್ತು ಕಾಶ್ಮೀರದಲ್ಲಿ ಈ ವಿಶೇಷ ದಿನವನ್ನು ಆಚರಣೆ ಮಾಡಲಿದ್ದಾರೆ. ವೈಯಕ್ತಿಕ ಮತ್ತು ಸಾಮಾಜಿಕ ಯೋಗಕ್ಷೇಮ ಬೆಳೆಸುವಲ್ಲಿ ಯೋಗದ ಪಾತ್ರವನ್ನು ಎತ್ತಿ ತೋರಿಸುವುದು ಇದರ ಉದ್ದೇಶವಾಗಿದೆ.

ಕರ್ನಾಟಕದಲ್ಲಿ ಆಯುಷ್ ಇಲಾಖೆ ಮತ್ತು ಇತರ ಸಂಸ್ಥೆಗಳ ನೇತೃತ್ವದಲ್ಲಿ ಎಲ್ಲಾ ಸಿದ್ಧತೆ ಕೈಗೊಳ್ಳಲಾಗಿದೆ. ಶುಕ್ರವಾರ ಬೆಳಗ್ಗೆ 7 ಗಂಟೆಗೆ ಕಂಠೀರವ ಕ್ರೀಡಾಂಗಣದಲ್ಲಿ ಪ್ರದಾನ ಸಮಾರಂಭ ನಡೆಯಲಿದೆ. ಶ್ವಾಸಗುರು ವಚನಾನಂದ ಸ್ವಾಮೀಜಿ ಕಾರ್ಯಕ್ರಮದ ನೇತೃತ್ವ ವಹಿಸಲಿದ್ದಾರೆ.

ಕೇಂದ್ರ ಸಚಿವರು, ರಾಜ್ಯ ಸಚಿವರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಬೆಂಗಳೂರಿನ ಶ್ವಾಸ ಯೋಗ ಸಂಸ್ಥೆ ಹಾಗೂ ಹರಿಹರದ ಪಂಚಮಸಾಲಿ ಜಗದ್ಗುರು ಪೀಠದ ಸಹಯೋಗದಲ್ಲಿ ಯೋಗ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ ಗುರುವಾರ ಸಂಜೆ ಆಯೋಜಿಸಲಾಗಿದೆ. ಪ್ರಧಾನ ಕಾರ್ಯಕ್ರಮ ನಡೆಯುವ ರಾಂಚಿಯಲ್ಲಿ ಪ್ರಧಾನಿ ಮೋದಿ ಭಾಗವಹಿಸಲಿದ್ದಾರೆ. ಜಾರ್ಖಂಡ್‌ನ ರಾಂಚಿಯ ಪ್ರಭಾತ್ ತಾರಾ ಕ್ರೀಡಾಂಗಣದಲ್ಲಿ ಬಹುತೇಕ ಎಲ್ಲಾ ಸಿದ್ಧತೆ ಮುಗಿದಿದ್ದು, ಕಾರ್ಯಕ್ರಮ ಪ್ರಧಾನಿಯವರ ಮುಂದಾಳತ್ವದಲ್ಲಿ ನಡೆಯಲಿದೆ. ಸ್ವತಃ ಪ್ರಧಾನಿ ಯೋಗಾಭ್ಯಾಸ ಮಾಡಲಿದ್ದಾರೆ. ಪ್ರಧಾನ ಸಮಾರಂಭದ ವೇದಿಕೆ ಸುಮಾರು 7 ಲಕ್ಷ ಚದರ ಅಡಿ ವಿಸ್ತೀರ್ಣವಿದ್ದು, 47 ಬ್ಲಾಕ್‌ಗಳಾಗಿ ವಿಭಜಿಸಲಾಗಿದೆ. ಯೋಗಾಭ್ಯಾಸ ಮಾಡುವವರಿಗೆ ಯಾವುದೇ ತೊಂದರೆಯಾಗದಂತೆ ವ್ಯವಸ್ಥೆ ಕಲ್ಪಿಸಲಾಗಿದ್ದು, ಎಲ್ಲೆಡೆ ಬಿಗಿ ಭದ್ರತೆ ಒದಗಿಸಲಾಗಿದೆ. ರಬ್ಬರ್ ಯೋಗ ಮ್ಯಾಟ್‌ನ ಬದಲು ಈ ಬಾರಿ ಖಾದಿಯ ಯೋಗ ಮ್ಯಾಟ್‌ಗಳನ್ನು ಬಳಸಲಾಗುತ್ತದೆ. ಹೃದಯಕ್ಕಾಗಿ ಯೋಗ ಎಂಬುದು ಈ ಬಾರಿಯ ಘೋಷವಾಕ್ಯವಾಗಿದೆ. ಪ್ರಧಾನ ಸಮಾರಂಭದಲ್ಲಿ ಹಲವು ರಾಜ್ಯಗಳ ಪ್ರತಿನಿಧಿಗಳು, ವಿವಿಧ ಯೋಗ ಕೇಂದ್ರಗಳ ತರಬೇತುದಾರರು ಸೇರಿ 30ಸಾವಿರಕ್ಕೂ ಅಧಿಕ ಮಂದಿ ಭಾಗವಹಿಸುವ ನಿರೀಕ್ಷೆ ಇದೆ.

ಕೇಂದ್ರ ಬಜೆಟ್ ಪೂರ್ವಭಾವಿ ಸಮಾಲೋಚನಾ ಸಭೆ

ರಾಜ್ಯದ ಪ್ರತಿನಿಧಿಯಾಗಿ ಕೃಷ್ಣ ಬೈರೇಗೌಡ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರ ಅಧ್ಯಕ್ಷತೆಯಲ್ಲಿ ಶುಕ್ರವಾರ ನಡೆಯಲಿರುವ ಬಜೆಟ್ ಪೂರ್ವ ಸಮಾಲೋಚನೆಯಲ್ಲಿ ಭಾಗವಹಿಸಲು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಎಸಿಎಸ್ ಅತೀಕ್ ಅಹಮದ್ ಮತ್ತು ಇತರ ಅಧಿಕಾರಿಗಳೊಂದಿಗೆ ದೆಹಲಿಗೆ ತೆರಳಲಿದ್ದಾರೆ. ಜೂನ್ 4 ರಂದು ಆಯ್ಕೆಯಾದ ಹೊಸ ಸರ್ಕಾರವು ಸುಮಾರು ಒಂದು ತಿಂಗಳ ಅವಧಿಯಲ್ಲಿ ಬಜೆಟ್ ಮಂಡಿಸುವ ನಿರೀಕ್ಷೆಯಿದೆ ಮತ್ತು ಮೊದಲ ಪೂರ್ಣ ಕೇಂದ್ರ ಬಜೆಟ್‌ಗೆ ಸಿದ್ಧತೆಗಳು ನಡೆಯುತ್ತಿವೆ ಎಂದು ಮೂಲಗಳು ತಿಳಿಸಿವೆ. ನಾವು ಈಗ ಕಾರ್ಯಸೂಚಿಯನ್ನು ಸಿದ್ಧಪಡಿಸುತ್ತಿದ್ದೇವೆ ಮತ್ತು ನಾಳೆ ಅದನ್ನು ಕ್ಯಾಬಿನೆಟ್‌ನಲ್ಲಿ ಚರ್ಚಿಸಿ ಅಂತಿಮಗೊಳಿಸುತ್ತೇವೆ. ಹಣಕಾಸು ಸಚಿವರೊಂದಿಗೆ ದೆಹಲಿಯಲ್ಲಿ ನಡೆಯುವ ಪೂರ್ವಭಾವಿ ಸಮಾಲೋಚನೆ ಸಭೆಯಲ್ಲಿ ಕರ್ನಾಟಕಕ್ಕೆ ಪ್ರಾಮುಖ್ಯತೆಯ ವಿಷಯಗಳನ್ನು ಪ್ರಸ್ತಾಪಿಸಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಮೊದಲ ಪೂರ್ವ ಬಜೆಟ್ ಸಮಾಲೋಚನೆಯನ್ನು ಬುಧವಾರ ದೆಹಲಿಯಲ್ಲಿ ನಡೆಸಲಾಯಿತು, ಅಲ್ಲಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ರಾಷ್ಟ್ರದಾದ್ಯಂತದ ಅರ್ಥಶಾಸ್ತ್ರಜ್ಞರೊಂದಿಗೆ ಸಂವಾದ ನಡೆಸಿ ಅವರ ಪ್ರತಿಕ್ರಿಯೆಯನ್ನು ಸಂಗ್ರಹಿಸಿದರು.



ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಕೇಂದ್ರ ಸಚಿವ ನಿರ್ಮಲಾ ಸೀತಾರಾಮನ್ ಅವರು ನವದೆಹಲಿಯಲ್ಲಿ ಮುಂಬರುವ ಸಾಮಾನ್ಯ ಬಜೆಟ್ 2024-25 ಗೆ ಸಂಬಂಧಿಸಿದಂತೆ ಪ್ರಮುಖ ಅರ್ಥಶಾಸ್ತ್ರ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಹಾಗೂ ಹೀಗೂ ವಿಪರ್ಯಾಸ

ಪ್ರಸಿದ್ಧ ಕಥೆಯಂತೆ ರೈತನೊಬ್ಬ ಭೂಮಿ ಮಾರಿದ. ಕೊಂಡ ರೈತ ಭೂಮಿ ಉತ್ತಿದಾಗ ನಿಧಿ ಸಿಕ್ಕಿತು. ಇದು ಮಾರಿದವನದೆಂದ ಕೊಂಡವ. ಕೊಂಡವನದೆಂದ ಮಾರಿದವ!ಇಬ್ಬರೂ ತೀರ್ಮಾನಕ್ಕಾಗಿ ರಾಜನ ಬಳಿ ಹೋದರಂತೆ! ವಿಜಯನಗರ ಸಾಮ್ರಾಜ್ಯದಲ್ಲಿ ಜನ ಪರ ಊರಿಗೆ ಹೋದರೆ ಮನೆಗೆ ಬೀಗ ಹಾಕುತ್ತಿರಲಿಲ್ಲವಂತೆ! ಎಂಥ ಪ್ರಾಮಾಣಿಕತೆ! ಕದ್ದು ಕಿತ್ತು ಕೊಂದು ತಿನ್ನುವ ಈ ಕಾಲವೆಲ್ಲಿ ಆ ಕಾಲವೆಲ್ಲಿ ಎನಬೇಡಿ! ಮೊನ್ನೆ ಬಸ್ಸಿನಲ್ಲಿ ಬಿಟ್ಟು ಹೋದ ಎರಡೂವರೆ ಲಕ್ಷ ರೂಗಳನ್ನು ಚಾಲಕ ಮಂಜುನಾಥ ನವಲಗುಂದ ಪ್ರಯಾಣಿಕ ಸೋಮಶೇಖರ ಪಾಟೀಲನಿಗೆ ದೂರವಾಣಿ ಕರೆ ಮಾಡಿ ರಾಯಚೂರಿಗೆ ಕರೆಸಿ ಕೊಟ್ಟ! ವ್ಯತ್ತಿಯಲ್ಲಿ ಚಾಲಕನಾಗಿದ್ದರೂ ಎಂಥ ಆದರ್ಶ! ಆದರೆ ಎಷ್ಟೋ ಬಾರಿ ಶಿಕ್ಷಕರ ಪೋಲೀಸರ ಮಕ್ಕಳು ದಾರಿತಪ್ಪುತ್ತಾರೆ, ಕಳ್ಳರಾಗುತ್ತಾರೆ. ಅಷ್ಟೇ ಏಕೆ! ದೇವಸ್ಥಾನ ಕಟ್ಟಿದವರು, ಮಠ ಆಶ್ರಮ ಉಳ್ಳವರು, ಉದರನಿಮಿತ್ತ ಬಹುಕೃತವೇಷಡಂಬಕ ಕಾವಿಧಾರಿಗಳು ಸಂಸ್ಕಾರ ಹೀನರೆನಿಸುವರು. ಇತ್ತೀಚೆಗೆ ರಾಮೋಹಳ್ಳಿಯ ಸಿದ್ಧಾರೂಢ ಮಿಷನ್ ಆಶ್ರಮದ ಇಪ್ಪತ್ತೈದರ ಸಂಭ್ರಮದಲ್ಲಿ ಇಂಥ ಜನ ಸ್ವಾಮೀಜಿಗಳ ಪಾದಕಾಣಿಕೆಗಾಗಿ ಇರಿಸಿದ್ದ ಎರಡು ಲಕ್ಷದ ಐವತ್ತೇಳು ಸಾವಿರ ರೂಗಳ ಚೀಲವನ್ನೇ ಕದ್ದರು. ಸುಳಿವು ಸಿಕ್ಕು ದೂರು ನೀಡಿ ವಿಚಾರಿಸಿದಾಗಲೂ ಒಪ್ಪುವ ಮನಸ್ಸಿಲ್ಲ! ಎಂಥ ವಿಪರ್ಯಾಸ! ದೀಪದ ಕೆಳಗೆ ಕತ್ತಲು!!

ಕರ್ನಾಟಕದಲ್ಲಿ ವಾಸ ಮಾಡುವವರು ಕನ್ನಡ ಕಲಿಯಬೇಕು

■ ಬೇರೆ ರಾಜ್ಯಗಳಲ್ಲಿ ದುರಭಿಮಾನಿಗಳಂತೆ ನಾವು ಆಗಬೇಕಿಲ್ಲ ■ ನಾಡದೇವಿ ಭುವನೇಶ್ವರಿ ದೇವಿಯ ಕಂಚಿನ ಪ್ರತಿಮೆ

• ಉದಯವಾಹಿನಿ, ಬೆಂಗಳೂರು

ಕನ್ನಡದ ವಾತಾವರಣ ನಿರ್ಮಾಣ ಮಾಡುವುದು ನಮ್ಮೆಲ್ಲರ ಕರ್ತವ್ಯ.ಆದಕ್ಕಾಗಿ ಇಲ್ಲಿ ವಾಸ ಮಾಡುವವರೆಲ್ಲಾರೂ ಕನ್ನಡವನ್ನು ಕಲಿಯಲೇಬೇಕು. ಹಾಗೆಂದು ನಾವು ಸುಮ್ಮನಿರುವಂತಿಲ್ಲ. ಕನ್ನಡಿಗರು ದುರಭಿಮಾನಿಗಳಲ್ಲ, ಆದರೆ ಕನ್ನಡದ ಬಗ್ಗೆ ಅಭಿಮಾನವನ್ನು ಬೆಳೆಸಿಕೊಳ್ಳಬೇಕು. ಬೇರೆ ರಾಜ್ಯಗಳಲ್ಲಿ ದುರಭಿಮಾನಿಗಳಂತೆ ನಾವು ಆಗಬೇಕಿಲ್ಲ, ಆದರೆ ನಮ್ಮ ಭಾಷೆ, ನೆಲ, ನಾಡಿನ ಬಗೆ ಗೌರವ, ಅಭಿಮಾನವನ್ನು ಬೆಳೆಸಿಕೊಳ್ಳಬೇಕು ಎಂದು ಸಿದ್ದರಾಮಯ್ಯ ಹೇಳಿದರು.

ಉದಯವಾಹಿನಿ ಚಿತ್ರ

ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕರ್ನಾಟಕ ನಾಮಕರಣ ಸುವರ್ಣ ಮಹೋತ್ಸವ ಅಂಗವಾಗಿ ವಿಧಾನಸೌಧದ ಪಶ್ಚಿಮದ್ವಾರದ ಬಳಿ ನಾಡದೇವಿ ಭುವನೇಶ್ವರಿ ದೇವಿಯ ಕಂಚಿನ ಪ್ರತಿಮೆ ನಿರ್ಮಿಸಲು ಭೂಮಿ ಪೂಜೆ ನೆರವೇರಿಸಿದ ನಂತರ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ, ಕನ್ನಡ ಭಾಷೆ, ನೆಲ, ಜಲವನ್ನು ಸಂರಕ್ಷಣೆ ಮಾಡಿಕೊಂಡು ಹೋಗುವ ಕೆಲಸ ಪ್ರತಿಯೊಬ್ಬ ಕನ್ನಡಿಗನ ಜವಾಬ್ದಾರಿ. ಕರ್ನಾಟಕದಲ್ಲಿ ಕನ್ನಡ ವಾತಾವರಣವನ್ನು ನಿರ್ಮಾಣ ಮಾಡುವುದು ಅತ್ಯಂತ ಅವಶ್ಯಕ ಎಂದು ಮುಖ್ಯಮಂತ್ರಿ ಸಿದ್ದಾಮಯ್ಯ ಕರೆ ನೀಡಿದರು.

ಪ್ರತಿಯೊಬ್ಬರೂ ಕೂಡ ಕರ್ನಾಟಕದಲ್ಲಿ ಬಾಳಿ ಬದುಕು ವವರೊಂದಿಗೆ ಕನ್ನಡದಲ್ಲಿಯೇ ಮಾತನಾಡುತ್ತೇನೆ. ಕನ್ನಡ ಬಿಟ್ಟು ಬೇರೆ ಭಾಷೆ ಮಾತನಾಡುವುದಿಲ್ಲ ಎಂದು ತೀರ್ಮಾನ ಮಾಡಬೇಕು. ಕನ್ನಡಿಗರು ಉದಾರಿಗಳು. ಹಾಗಾಗಿಯೇ ಬೇರೆ ಭಾಷೆ ಮಾತನಾಡುವವರೂ ಕೂಡ ಕನ್ನಡ ಕಲಿಯದೆ ಬದುಕುವ ವಾತಾವರಣ ಕರ್ಣಾಟಕದಲ್ಲಿದೆ. ತಮಿಳುನಾಡು, ಆಂಧ್ರ, ಕೇರಳಕ್ಕೆ ಹೋದರೆ ಅವರ ಮಾತೃಭಾಷೆಯಲ್ಲಿಯೇ ಮಾತನಾಡುತ್ತಾರೆ. ನಾವೂ ಕೂಡ ನಮ್ಮ ಮಾತೃಭಾಷೆಯಲ್ಲಿಯೇ ವ್ಯವಹರಿಸಬೇಕು. ಅದು ನಮಗೆ ಹೆಮ್ಮೆಯ ವಿಷಯವಾಗಬೇಕು.

ಅಲ್ಲಿಯವರೆಗೆ ಮೈಸೂರು ರಾಜ್ಯ ಎಂದಿತ್ತು. ತಾಯಿ ಭುವನೇಶ್ವರಿಯ ಪೂಜೆ ಯನ್ನು ಬಹಳ ವರ್ಷಗಳಿಂದ ರಾಜಮಹಾರಾಜರು ಮಾಡಿಕೊಂಡು ಬರುತ್ತಿದ್ದಾರೆ. ಕರ್ನಾಟಕದಲ್ಲಿಯೂ ತಾಯಿ ಭುವನೇಶ್ವರಿಯ ಪೂಜೆ ಮಾಡುತ್ತೇವೆ. ಏಕೀಕರಣದ ನಂತರ ಅದಕ್ಕೂ ಮುನ್ನವೇ ಪೂಜೆ ಮಾಡಿ ಗೌರವಿಸಿ, ಸ್ಮರಿಸುವ ಕೆಲಸ ಮಾಡಿಕೊಂಡು ಬರುತ್ತಿದ್ದೇವೆ ಎಂದರು.

ಅದರಲ್ಲಿ ಕೀಳರಿಮೆ ಅಗತ್ಯವಿಲ್ಲ ಎಂದರು.

ಭುವನೇಶ್ವರಿ ತಾಯಿ ಎಲ್ಲರಿಗೂ ಈ ನಿಟ್ಟಿನಲ್ಲಿ ಎಲ್ಲರಿಗೂ ಸ್ಫೂರ್ತಿ ಕೊಡಲಿ ಎಂದು ಆಶಿಸುತ್ತೇನೆ ಎಂದರು. ನವೆಂಬರ್ 01, 2024 ರೊಳಗೆ ಪೂರ್ಣಗೊಳ್ಳಬೇಕು. ಈಗಾಗಲೇ ಕೆಲಸ ಪ್ರಾರಂಭವಾಗಿದೆ. ಹಣದ ಕೊರತೆಯೂ ಇಲ್ಲ. ಇದೊಂದು ಉತ್ತಮವಾದ ಕೆಲಸ. ವಿಧಾನ ಸೌಧದ ಆವರಣದಲ್ಲಿ ಸುಮಾರು 25 ಅಡಿ ಎತ್ತರ ಇರುವ ಕಂಚಿನ ಪ್ರತಿಮೆ ನಿರ್ಮಾಣವಾಗಲಿದೆ. ಜನರಿಗೆ ಆರ್ಕರ್ಷಣೆಯಾಗುವ ರೀತಿಯಲ್ಲಿ ಇರಬೇಕೆಂದು ಸೂಚಿಸಲಾಗಿದೆ.ಅನೇಕ ರಾಜಕಾರಣಿಗಳ ಪ್ರತಿಮೆಗಳನ್ನು ಸ್ಥಾಪಿಸಿದ್ದೇವೆ. ಪ್ರತಿಮೆ ವಿಧಾನಸೌಧದ ಆಕರ್ಷಣೆಯನ್ನು ಇಮ್ಮಡಿಗೊಳಿಸುತ್ತದೆ ಎಂದು ನಾನು ಭಾವಿಸಿದ್ದೇನೆ ಎಂದರು.

2023, ನವೆಂಬರ್ 01 ರಂದು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣವಾಗಿ 50 ವರ್ಷಗಳ ತುಂಬಿವೆ. ಈ ಸಂದರ್ಭದಲ್ಲಿ ಇಡಿ ವರ್ಷ ಕರ್ನಾಟಕ ಸಂಭ್ರಮ ಎಂಬ ಹೆಸರಿನಡಿ ಹೆಸರಾಯಿತು 'ಕರ್ನಾಟಕ, ಉಸಿರಾಗಲಿ ಕನ್ನಡ ಎಂಬ ಘೋಷವಾಕ್ಯ ವನ್ನು ಇಟ್ಟು ಇಡೀ ವರ್ಷ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ. ನವೆಂಬರ್ 01 2023 ರಂದು ಹಂಪಿಯಿಂದ ಕಾರ್ಯಕ್ರಮ ಪ್ರಾರಂಭವಾಗಿತ್ತು.

ಗದಗಿನಲ್ಲಿಯೂ ದೊಡ್ಡ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ನಾಮಕರಣವಾದ ನಂತರ ಅಂದಿನ ಮುಖ್ಯಮಂತ್ರಿ ದೇವರಾಜ ಅರಸು ಅವರು ಅಲ್ಲಿಗೆ ಭೇಟಿ ನೀಡಿದ್ದರು.

ಅವರ ಕಾಲದಲ್ಲಿಯೇ ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಲಾಗಿದೆ. ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ತಂಗಡಗಿ, ಶಾಸಕರು ಮೊದಲಾದವರು ಉಪಸ್ಥಿತರಿದ್ದರು

ರಾಜ್ಯದ ಜನ ದಂಗೆ ಏಳುವ ಸಮಯ ಬಂದಿದೆ: ಬಿಜೆಪಿ ಆಕ್ರೋಶ

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಕಾರ್ಯಕರ್ತರು, ನಾಯಕರು ಬೆಲೆ ಏರಿಕೆ ವಿರೋಧಿಸಿ ಶಾಂತಿಯುತವಾಗಿ ಸೈಕಲ್ ಮೂಲಕ ಪ್ರತಿಭಟನೆ ಮಾಡುತ್ತಿದ್ದರೆ, ಸರ್ವಾಧಿಕಾರಿ ಸಿದ್ದರಾಮಯ್ಯ ಅವರ ತುಘಲಕ್ ಸರ್ಕಾರ ಬಿಜೆಪಿ ನಾಯಕರು, ಕಾರ್ಯಕರ್ತರನ್ನು ಬಂಧಿಸಿದೆ ಎಂದು ರಾಜ್ಯ ಬಿಜೆಪಿ ಆಕ್ರೋಶ ವ್ಯಕ್ತಪಡಿಸಿದೆ. ಪೆಟ್ರೋಲ್, ಡೀಸೆಲ್ ದರ ಏರಿಕೆ ಖಂಡಿಸಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃವದಲ್ಲಿ ಬಿಜೆಪಿ ಸೈಕಲ್ ಜಾಥಾ ನಡೆಸಲು ಮುಂದಾಗಿತ್ತು. ಬಿಜೆಪಿ ಕಚೇರಿಯಿಂದ ವಿಧಾನಸೌಧದವರೆಗೆ ಸೈಕಲ್ ಜಾಥಾಗೆ ಯತ್ನಿಸಿದ್ದ ಬಿ.ವೈ.ವಿಜಯೇಂದ್ರ, ಸಿ.ಟಿ.ರವಿ, ಅಶ್ವತ್ಥನಾರಾಯಣ ಸೇರಿದಂತೆ ಹಲವು ಬಿಜೆಪಿ ನಾಯಕರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಪ್ರತಿಭಟನೆಗೂ ಅವಕಾಶ ನೀಡದ ಸರ್ಕಾರದ ಕ್ರಮವನ್ನು ಬಿಜೆಪಿ ಖಂಡಿಸಿದೆ. ಪ್ರಜಾಪ್ರಭುತ್ವವ್ಯವಸ್ಥೆಯಲ್ಲಿ ಪ್ರತಿಭಟನೆಗೆ ಅವಕಾಶ ಕೊಡದೆ ಹತ್ತಿಕ್ಕುವ ಕೆಲಸ ಮಾಡುತ್ತಿರುವ ಕಾಂಗ್ರೇಸ್ ಸರ್ಕಾರ ತನ್ನ ಸಂವಿಧಾನ ವಿರೋಧಿ ನೀತಿಯನ್ನು ತೋರಿಸಿದೆ. ನಾಡಿನ ಜನರು ಸರ್ಕಾರದ ವಿರುದ್ಧ ದಂಗೆ ಏಳುವ ಸಮಯ ಸನ್ನಿಹಿತವಾಗಿದೆ ಎಂದು ಕಿಡಿಕಾರಿದೆ

ಜಾಗತಿಕ ಹೂಡಿಕೆದಾರರ ಸಮಾವೇಶ; ಸಿಎಂ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಮುಂದಿನ ವರ್ಷ ಫೆ. 12 ರಿಂದ ಜಾಗತಿಕ ಹೂಡಿಕೆದಾರರ ಸಮಾವೇಶ ನಡೆಯಲಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.ಯುವ ಕನ್ನಡಿಗರ ಕೌಶಲ್ಯಗಳಿಗೆ ತಕ್ಕ ಉದ್ಯೋಗ ಒದಗಿಸುವ, ರಾಜ್ಯದ ಆರ್ಥಿಕ ವ್ಯವಸ್ಥೆಯ ಬೆಳವಣಿಗೆ ನಿಟ್ಟಿನಲ್ಲಿ 'ಗೇಮ್ ಚೇಂಜರ್' ಆಗಬಹುದೆಂಬ ನಿರೀಕ್ಷೆಯಿರುವ 'ಜಾಗತಿಕ ಹೂಡಿಕೆದಾರರ ಸಮಾವೇಶ – 2025' ಮುಂದಿನ ವರ್ಷ ಫೆಬ್ರವರಿ 12 ರಿಂದ 14ರ ವರೆಗೆ ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿದೆ. ಇದರ ಪೂರ್ವಭಾವಿ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದರು.

ಜನರಿಗೆ ಕೊಟ್ಟ ಮಾತು ಉಳಿಸಿಕೊಳ್ಳುವುದು ರಾಜಧರ್ಮ. ನಾವು ಚುನಾವಣಾ ಪೂರ್ವದಲ್ಲಿ ನೀಡಿದ ಭರವಸೆಯಂತೆ ಐದಕ್ಕೆ ಐದೂ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಕ್ಕೆ ಕೊಟ್ಟು ರಾಜಧರ್ಮ ಪಾಲಿಸಿದ್ದೇವೆ. ವಚನ ಪಾಲನೆ ನಮ್ಮ ಆದ್ಯತೆ ಮಾತ್ರವಲ್ಲ, ಬದ್ಧತೆಯೂ ಹೌದು. ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು ವೈಚಾರಿಕತೆ ಮತ್ತು ವೈಜ್ಞಾನಿಕ ಮನೋಭಾವ ಬೆಳೆಯುತ್ತಾ ಹೋಗಬೇಕು ವ್ಯಕ್ತಿಯೊಬ್ಬ ಶಿಕ್ಷಿತನಾಗುತ್ತ ಹೋದಂತೆ ಆತನಲ್ಲಿ ವೈಚಾರಿಕತೆ ಮತ್ತು ವೈಜ್ಞಾನಿಕ ಮನೋಭಾವ ಬೆಳೆಯುತ್ತಾ ಹೋಗಬೇಕು. ಆದರೆ ಶಿಕ್ಷಣ ಪಡೆದವರಲ್ಲೇ ಹೆಚ್ಚು ಮೌಢ್ಯ, ಕರ್ಮ ಸಿದ್ಧಾಂತದ ಮೇಲೆ ನಂಬಿಕೆ ಕಾಣುತ್ತಿರುವುದು ಇಂದಿನ ಕಾಲದ ದುರಂತ.

ಉದಯವಾಹಿನಿ ಚಿತ್ರ

ಮಕ್ಕಳು ಜಾತಿ ಪದ್ಧತಿಯಿಂದ ನಿರ್ಮಾಣವಾಗಿರುವ ಅಸಮಾನತೆಯಿಂದ ಹೊರಬಂದು ವಿಶಾಲ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆಗೈದ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಸಿದ್ದರಾಮಯ್ಯ ಹೇಳಿದರು.

ಉಪಚುನಾವಣೆಗೆ ಸ್ಪರ್ಧೆ; ಮಾರ್ಮಿಕವಾಗಿ ಉತ್ತರಿಸಿದ ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಚನ್ನಪಟ್ಟಣದಿಂದ ಉಪಚುನಾವಣೆಗೆ ಸ್ಪರ್ಧೆ ಬಗ್ಗೆ ಪಕ್ಷ ತೀರ್ಮಾನ ಮಾಡುತ್ತದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ 16 ಸಾವಿರ ಮತಗಳು ಬಂದಿದ್ದವು. ಲೋಕಸಭೆಯಲ್ಲಿ 80 ಸಾವಿರ ಮತಗಳು ಬಂದಿವೆ. ರಾಮನಗರ ಜಿಲ್ಲೆಯ 4 ಸ್ಥಾನಗಳಲ್ಲಿ ಮೂವರು ಕಾಂಗ್ರೇಸ್ ಶಾಸಕರಿದ್ದು ಒಂದನ್ನು ಬದಲಾಯಿಸಬೇಕಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ ಕೆ ಶಿವಕುಮಾರ್ ಅವರು ಮಾರ್ಮಿಕವಾಗಿ ಉತ್ತರಿಸಿದರು.

ವಿಧಾನಸೌಧ ಆವರಣದಲ್ಲಿ ನಡೆದ ನಾಡದೇವಿ ಭುವನೇಶ್ವರಿ ಕಂಚಿನ ಪ್ರತಿಮೆ ಸ್ಥಾಪನೆ ಭೂಮಿಪೂಜೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ದಿನದಿಂದ ಕನ್ನಡದ ವಿಚಾರದಲ್ಲಿ ರಾಜಿಯಾಗದೆ ಕೆಲಸ ಮಾಡುತ್ತಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು. ವಿಧಾನಸೌಧದ ಆವರಣದಲ್ಲಿ ಅಂಬೇಡ್ಕರ್ ಅವರ, ಬಸವಣ್ಣನವರ, ಕೆಂಪೇಗೌಡರು ಸೇರಿದಂತೆ ಅನೇಕ ನಾಯಕರ ಪ್ರತಿಮೆಗಳಿವೆ. ಈ ಶಕ್ತಿ ಕೇಂದ್ರದಲ್ಲಿ ನಾಡ ದೇವಿ ಭುವನೇಶ್ವರಿ ತಾಯಿ ಪ್ರತಿಮೆ ಇರಬೇಕು. ಇಲ್ಲಿಗೆ ಭೇಟಿ ನೀಡುವವರು ದೇವಿಯ ಆಶೀರ್ವಾದ ಪಡೆದುಕೊಳ್ಳಬೇಕು ಎಂಬುದು ನಮ್ಮ ಆಶಯ. ಕರ್ನಾಟಕ ಎಂದು ನಾಮಕರಣ ಮಾಡಿ 50 ವರ್ಷಗಳಾಗಿದ್ದು ಈ ನೆನಪಿಗಾಗಿ 25 ಅಡಿಯ ಕಂಚಿನ ಪ್ರತಿಮೆ ಸ್ಥಾಪಿಸಲಾಗುತ್ತಿದೆ ಎಂದರು. ಬೆಂಗಳೂರಿನಲ್ಲಿ ಕನ್ನಡ ನಾಮಫಲಕ ಕಡ್ಡಾಯ ಮಾಡಿ ಮೊದಲಬಾರಿಗೆ ಕಾನೂನು ಮಾಡಲಾಯಿತು. ಇದಕ್ಕೆ ಅನೇಕ ಕನ್ನಡ ಸಂಘಟನೆಗಳು ಹೋರಾಟ ಮಾಡಿವೆ. ಒಂದಷ್ಟು ಬಾರಿ ಕಾನೂನು ಕೈಗೆ ತೆಗೆದುಕೊಂಡಾಗ ರಾಜಿಯಾಗದೆ ಕೆಲಸ ಮಾಡಿದ್ದೇವೆ. ಜೊತೆಗೆ ಕನ್ನಡ ಉಳಿಸುವ ಕೆಲಸವನ್ನು ಮಾಡಿದ್ದೇವೆ ಎಂದು ಹೇಳಿದರು.

ಲೋಕಸಭಾ ಚುನಾವಣೆ: ಜೆಡಿಎಸ್, ಬಿಜೆಪಿಗೆ ಹೆಚ್ಚು ಸ್ಥಾನ ಬಂದಿದ್ದು ಯಾಕೆ ಗೊತ್ತಾ ಡಿಕೆ ಶಿವಕುಮಾರ್ ಬಿಚ್ಚಿಟ್ಟ ಸತ್ಯವೇನು

ನಾವು ಯಾರು ಶಾಶ್ವತವಲ್ಲ ಆದರೆ ನಾವು ಮಾಡುವ ಕೆಲಸಗಳು ಶಾಶ್ವತವಾಗಿ ಉಳಿಯುತ್ತವೆ. ಉತ್ತಮವಾದ ಆಲೋಚನೆ ಮಾಡಿರುವ ಕನ್ನಡ ಸಂಸ್ಕೃತಿ ಇಲಾಖೆಗೆ ಅಭಿನಂದನೆಗಳು. ಕನ್ನಡ ಬೆಳೆಯಲಿ, ಉಳಿಯಲಿ ಎಂದು ಆಶಿಸಿದರು.

ವಿಧಾನಸೌಧದ ಬಳಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡುವ ವೇಳೆ ನೀಟ್ ವಿಚಾರವಾಗಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಡಿಸಿಎಂ

ಅವರು ನೀಟ್ ಪರೀಕ್ಷೆಯಲ್ಲಿ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಅವರೇ ಅಕ್ರಮ ನಡೆದಿದೆ ಎಂದು ಒಪ್ಪಿಕೊಂಡಿದ್ದಾರೆ. ಈ ವಿಚಾರವಾಗಿ ಸುಪ್ರೀಂ ಕೋರ್ಟ ಎನ್ ಟಿಎ (ನ್ಯಾಷನಲ್ ಟೆಸ್ಟಿಂಗ್ ಏಜೆನ್ಸಿ) ಗೆ ನೋಟಿಸ್ ನೀಡಿರುವುದು ಉತ್ತಮ ನಡೆ. ನಮ್ಮ ದೇಶದ ಮಕ್ಕಳ ಭವಿಷ್ಯ ಮುಖ್ಯವಾದುದು ಎಂದು ಹೇಳಿದರು.

ಬಿಎಂಟಿಸಿ ಬಸ್ ಪ್ರಯಾಣ ದರ ಏರಿಕೆ ಸುಳಿವು ನೀಡಿದ ಸಾರಿಗೆ ಸಚಿವ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಜನರಿಗೆ ಶಾಕ್ ಮೇಲೆ ಶಾಕ್ ಎದುರಾಗಿದೆ. ಪೆಟ್ರೋಲ್, ಡೀಸೆಲ್ ಬೆಲೆ ಏರಿಸಿರುವ ರಾಜ್ಯ ಸರ್ಕಾರ ಇದೀಗ ಸಾರಿಗೆ ದರವನ್ನೂ ಏರಿಸುವ ಬಗ್ಗೆ ಸುಳಿವು ನೀಡಿದೆ.ಅಗತ್ಯ ವಸ್ತುಗಳ ಬೆಲೆ ಏರಿಕೆ ನಡುವೆ ದುಬಾರಿ ದುನಿಯಾದಲ್ಲಿ ಹಣ್ಣು–ತರಕಾರಿ ಬೆಲೆಗಳು ಗಗನಮುಖಿಯಾಗಿವೆ.ಈ ಮಧ್ಯೆ ರಾಜ್ಯ ಸರ್ಕಾರ ಪೆಟ್ರೋಲ್, ಡೀಸೆಲ್ ಮೇಲಿನ ತೆರಿಗೆ ದರವನ್ನು ಹೆಚ್ಚಿಸಿ ಸಾಮಾನ್ಯ ಜನರಿಗೆ ದರ ಏರಿಕೆ ಬಿಸಿ ಮುಟ್ಟಿಸಿದೆ. ಇದೀಗ ಬಸ್ ಪ್ರಯಾಣದರವೂ ಹೆಚ್ಚಳವಾಗುವ ಸಾಧ್ಯತೆ ದಟ್ಟವಾಗಿದೆ. ಕೆ.ಎಸ್.ಆರ್.ಟಿ.ಸಿ, ಬಿಎಂಟಿಸಿ ಬಸ್ ದರ ಏರಿಸುವ ನಿಟ್ಟಿನಲ್ಲಿ ಸಾರಿಗೆ ನಿಗಮಗಳಲ್ಲಿ ಚರ್ಚೆ ನಡೆದಿದೆ ಎನ್ನಲಾಗುತ್ತಿದೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಕಳೆದ ನಾಲ್ಕು ವರ್ಷಗಳಿಂದ ಬಸ್ ಪ್ರಯಾಣದರವನ್ನು ಏರಿಸಿಲ್ಲ. ಈವರೆಗೂ ಪ್ರಯಾಣ ದರ ಹೆಚ್ಚಳ ಮಾಡುವಂತೆ ಯಾವುದೇ ಪ್ರಸ್ತಾವನೆಯೂ ಬಂದಿಲ್ಲ. ಒಂದು ವೇಳೆ ಪ್ರಸ್ತಾವನೆ ಬಂದರೆ ಈ ನಿಟ್ಟಿನಲ್ಲಿ ಪರಿಶೀಲಿಸಿ ನಿರ್ಧರಿದ್ದಲಾಗುವುದು ಎಂದು ಹೇಳಿದ್ದಾರೆ. ಈ ಮೂಲಕ ಬಸ್ ಟಿಕೆಟ್ ದರಗಳು ಏರಿಕೆಯಾಗುವ ಸಾಧ್ಯತೆ ಬಗ್ಗೆ ಸಚಿವರು ಸುಳಿವು ನೀಡಿದಂತಿದೆ.

ಉದಯವಾಹಿನಿ ಚಿತ್ರ

ಸರ್ಕಾರ ಜನರ ಹುಣ್ಣಿನ ಮೇಲೆ ಬರೆ ಹಾಕುತ್ತಿದೆ: ಛಲವಾದಿ ನಾರಾಯಣಸ್ವಾಮಿ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಕಾಂಗ್ರೇಸ್ ಸರಕಾರವು ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಸಿದ್ದು ಖಂಡನೀಯ ಎಂದು ವಿಧಾನಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ಅವರು ತಿಳಿಸಿದರು.ನಗರದ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ತೈಲ ಬೆಲೆ ಏರಿಕೆಯಿಂದ ದವಸಧಾನ್ಯಗಳ ಬೆಲೆ ಏರಿಕೆಯಾಗಿದೆ.ನೀರಿನ ದರ ಏರಿಕೆ ಕುರಿತು ಈಗ ಹೇಳಿಕೆ ಹೊರಬಿದ್ದಿದೆ ಎಂದು ಆಕ್ಷೇಪಿಸಿದರು.

ಸ್ಟಾಂಪ್ ಪೇಪರ್ ಬೆಲೆ ಏರಿಕೆಯಿಂದ ಆಸ್ತಿ ನೋಂದಣಿಗೆ ಹೆಚ್ಚು ಹಣ ಕೊಡಬೇಕಾಗಿದೆ.

'ಕೈ' ನಾಯಕತ್ವ; ರಕ್ಷಾಗೆ ದುಂಬಾಲು

■ ಆಂಜನಪ್ಪ, ರಕ್ಷಾ ರಾಮಯ್ಯ, ಎಂ.ಆರ್.ಸೀತಾರಾಂ ಅವರಿಗೆ ನೀಡಿದ ಬಹಿರಂಗ ಆಹ್ವಾನ

• ಉದಯವಾಹಿನಿ, ಚಿಕ್ಕಬಳ್ಳಾಪುರ

ವಿಧಾನಸಭಾ ಕ್ಷೇತ್ರದ ನಾಯಕತ್ವವಹಿಸಿಕೊಳ್ಳಬೇಕು. ನಿಮಗೆ ಸಹಕಾರ ನೀಡುತ್ತೇವೆ'-ಇದು ಇತ್ತೀಚೆಗೆ ಚಿಕ್ಕಬಳ್ಳಾಪುರ ದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೇಸ್ ಮಾಜಿ ಅಧ್ಯಕ್ಷ ನಂದಿ ಆಂಜನಪ್ಪ, ರಕ್ಷಾ ರಾಮಯ್ಯ ಮತ್ತು ಎಂ.ಆರ್.ಸೀತಾರಾಂ ಅವರಿಗೆ ನೀಡಿದ ಬಹಿರಂಗ ಆಹ್ವಾನ.

ಚಿಕ್ಕಬಳ್ಳಾಪುರ ದಿಂದ ಕಣಕ್ಕೆ

ಉದಯವಾಹಿನಿ ಚಿತ್ರ

ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಶಾಸಕ ಪ್ರದೀಪ್ ಈಶ್ವರ್ ಅವರಿಂದ ಅಂತರ ಕಾಯ್ದುಕೊಂಡಿರುವ ಕಾಂಗ್ರೇಸ್‌ನ ಕೆಲವು ಮುಖಂಡರು 'ನಾಯಕತ್ವ' ವಹಿಸಿಕೊಳ್ಳುವಂತೆ ಲೋಕ ಸಭಾ ಚುನಾವಣೆಯಲ್ಲಿ ಕಾಂಗ್ರೇಸ್‌ನ ಪರಾಜಿತ ಅಭ್ಯರ್ಥಿಯೂ ಆದ ಯುವ ಕಾಂಗ್ರೇಸ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಕ್ಷಾ ರಾಮಯ್ಯ ಮತ್ತು ಅವರ ತಂದೆ ವಿಧಾನ ಪರಿಷತ್ ಸದಸ್ಯ ಎಂ.ಆರ್.ಸೀತಾರಾಮ್ ಅವರಿಗೆ ದುಂಬಾಲು ಬಿದ್ದಿದ್ದಾರೆ ಎನ್ನುತ್ತವೆ ಖಚಿತ ಮೂಲಗಳು.

ಈ ಇಬ್ಬರನ್ನು ಕಾಂಗ್ರೇಸ್‌ನ ಸ್ಥಳೀಯ ಕೆಲವು ನಾಯಕರು ಇತ್ತೀಚೆಗೆ ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಪಕ್ಷದ ಜಿಲ್ಲಾ ಮಾಜಿ ಅಧ್ಯಕ್ಷ, ಮಾಜಿ ಶಾಸಕ, ನಗರಸಭೆಯ ಕೆಲವು ಸದಸ್ಯರು ಈ ನಿಯೋಗದಲ್ಲಿ ಇದ್ದರು. 2018ರ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿಯೇ ಚಿಕ್ಕಬಳ್ಳಾಪುರದಿಂದ ಕಣಕ್ಕೆ ಇಳಿಯುವಂತೆ ರಕ್ಷಾ ರಾಮಯ್ಯ ಅವರನ್ನು ಕಾಂಗ್ರೇಸ್ ನಾಯಕರು ಕೋರಿದ್ದರು. ಆದರೆ ಅವರ ದೃಷ್ಟಿ ಲೋಕಸಭೆ ಚುನಾವಣೆ ಮೇಲಿದ್ದ ಕಾರಣ ಆಹ್ವಾನ ತಿರಸ್ಕರಿಸಿದ್ದರು. ನಂತರ ಪ್ರದೀಪ್ ಈಶ್ವರ್ ಅವರಿಗೆ ಟಿಕೆಟ್ ದೊರೆಯಿತು. ಅವರು ಗೆಲುವು ಸಾಧಿಸಿದರು. ಇದೆಲ್ಲವೂ ಇತಿಹಾಸ. ಪ್ರದೀಪ್ ಈಶ್ವರ್ ಅವರಿಂದ ಅಂತರ ಕಾಯ್ದುಕೊಂಡಿರುವ ಕೆಲವು ನಾಯಕರು ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಜವಾಬ್ದಾರಿವಹಿಸಿಕೊಳ್ಳಬೇಕು ಎನ್ನುವ ಕೋರಿಕೆ ಮುಂದಿಟ್ಟಿದ್ದಾರೆ. ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ರಕ್ಷಾ ಶಾಸಕ ಪ್ರದೀಪ್ ಈಶ್ವರ್ ಮತ್ತು ಕೆಲವು ನಾಯಕರ ನಡುವಿನ ಬಾಂಧವ್ಯ ಹಳಸಿ ವರ್ಷವಾಗಿದೆ. ಈ ಅಸಮಾಧಾನಕ್ಕೆ ಕೆಪಿಸಿಸಿ ಕಚೇರಿಯಲ್ಲಿ ಹಾಗೂ ಸಚಿವ ಡಾ.ಎಂ.ಸಿ.ಸುಧಾಕರ್ ಸಮ್ಮುಖದಲ್ಲಿ ತೇಪೆ ಹಚ್ಚುವ ಪ್ರಯತ್ನಗಳು ಸಹ ನಡೆದಿದ್ದವು.

ಅವರನ್ನು ಚಿಕ್ಕಬಳ್ಳಾಪುರದಿಂದ ಕಣಕ್ಕೆ ಇಳಿಸಬೇಕು ಎನ್ನುವ ಇರಾದೆಯೂ ಈ ಮುಖಂಡರದ್ದು. ಪ್ರದೀಪ್ ಈಶ್ವರ್ ವಿರುದ್ಧದ ಕಾಂಗ್ರೇಸ್ ತಂಡದಲ್ಲಿ ಒಕ್ಕಲಿಗ ಸಮುದಾಯದ ನಾಯಕರ ಸಂಖ್ಯೆಯೇ ಹೆಚ್ಚಿದೆ.

ಬಾಲಾಜಿ ಕರೆತರಲೂ ಯತ್ನ: ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅವರ ಸಹೋದರ ಎಂ.ಸಿ.ಬಾಲಾಜಿ ಅವರಿಗೆ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಜವಾಬ್ದಾರಿವಹಿಸಿಕೊಳ್ಳಬೇಕು ಎಂದು ಸಚಿವರಿಗೆ ಮನವಿ ಮಾಡಲು ಸಹ ಕೆಲವು ನಾಯಕರು ಮುಂದಾಗಿದ್ದಾರೆ. ರಕ್ಷಾ ರಾಮಯ್ಯ ಅವರ ಭೇಟಿಯ ತರುವಾಯ, ಸಚಿವರ ನಿವಾಸಕ್ಕೂ ಮುಖಂಡರು ತೆರಳಿದ್ದಾರೆ. ಆದರೆ ಸಚಿವರು ಭೇಟಿಗೆ ಲಭ್ಯವಾಗಿಲ್ಲ ಎನ್ನುತ್ತವೆ ಮೂಲಗಳು.

ಪ್ರದೀಪ್ ಈಶ್ವರ್ ಗೆಲುವಿನ ನಂತರ ಒಂದೊಂದು ಇಲಾಖೆಯ ಜವಾಬ್ದಾರಿಗಳನ್ನು ಹಂಚಿಕೊಳ್ಳಬೇಕು ಎಂದು ಕೆಲವು ನಾಯಕರು ಪ್ರಯತ್ನಿಸಿದ್ದರು. ಆದರೆ ಅದಕ್ಕೆ ಶಾಸಕರು ಅವಕಾಶ ನೀಡಲಿಲ್ಲ. ಶಾಸಕರಾದ ಕೆಲವು ದಿನಗಳಲ್ಲಿಯೇ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ 'ನಮ್ಮ ಕೆಲಸ ಮಾಡಿ' ಎಂದು ಕೆಲವು ನಾಯಕರು ಬೇಡಿಕೆ ಪಟ್ಟಿ ಇಟ್ಟಿದ್ದರು. ಇದಕ್ಕೆ ಶಾಸಕರು ಆಸ್ಪದ ನೀಡಲಿಲ್ಲ. ಈ ಕಾರಣದಿಂದ ಅವರ ವಿರುದ್ಧ ತಿರುಗಿ ಬಿದ್ದಿದ್ದಾರೆ ಎನ್ನುತ್ತಾರೆ ಶಾಸಕ ಪ್ರದೀಪ್ ಈಶ್ವರ್ ಆಪ್ತರು.

ಕಾಂಗ್ರೇಸ್‌ನಲ್ಲಿಯೇ ಇದ್ದರೂ ಪ್ರಮುಖ' ಮುಖಂಡರು ಲೋಕಸಭೆ ಚುನಾವಣೆಯಲ್ಲಿ 'ಕೈ' ಕೊಟ್ಟರು. ಅವರೇ ಈಗ ಶಾಸಕರ ವಿರುದ್ಧ ಮಾತನಾಡುತ್ತಿದ್ದಾರೆ. ಈ 'ಪ್ರಮುಖ'ರಿಗೆ ಚಿಕ್ಕಬಳ್ಳಾಪುರದ ಜವಾಬ್ದಾರಿ ನೀಡಲಾಗಿತ್ತು. ಶಾಸಕ ಪ್ರದೀಪ್ ಈಶ್ವರ್ ಅವರಿಗೆ ಕ್ಷೇತ್ರದ ಜವಾಬ್ದಾರಿ ನೀಡಿರಲಿಲ್ಲ. ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೇಸ್ 86,224 ಮತ ಪಡೆದಿತ್ತು. ಲೋಕಸಭಾ ಚುನಾವಣೆಯಲ್ಲಿ 77,496 ಮತಗಳನ್ನು ಪಡೆದಿದೆ. ಜೆಡಿಎಸ್ ಮತಗಳು ಸಹ ಬಿಜೆಪಿಗೆ ದೊರೆತ ಕಾರಣ ಚಿಕ್ಕಬಳ್ಳಾಪುರದಲ್ಲಿ ಬಿಜೆಪಿ ಮುನ್ನಡೆ ಪಡೆಯಿತು. ಚಿಕ್ಕಬಳ್ಳಾಪುರದಲ್ಲಿ ಬಿಜೆಪಿ ಲೀಡ್ ಪಡೆದಿದ್ದಕ್ಕೆ ಶಾಸಕರನ್ನೇ ಹೊಣೆ ಮಾಡಲು ಮುಂದಾಗುತ್ತಿದ್ದಾರೆ. ಚಿಕ್ಕಬಳ್ಳಾಪುರ ಕಾಂಗ್ರೇಸ್‌ನ ಕೆಲವು ಮುಖಂಡರು ಲೋಕ ಸಭೆ ಚುನಾವಣೆಯ ಸಮಯದಲ್ಲಿ ಎಲ್ಲಿ ಯಾರನ್ನು ಭೇಟಿ ಮಾಡಿದ್ದಾರೆ ಎನ್ನುವುದು ಮುಂದಿನ ದಿನಗಳಲ್ಲಿ ಬಹಿರಂಗವಾಗಲಿದೆ ಎನ್ನುತ್ತಾರೆ ಶಾಸಕ ಆಪ್ತರು.

> ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಪ್ರದೀಪ್ ಈಶ್ವರ್ 'ನಮಸ್ತೆ ಚಿಕ್ಕಬಳ್ಳಾಪುರ' ಕಾರ್ಯಕ್ರಮದ ಮೂಲಕ ಜನರನ್ನು ತಲುಪುತ್ತಿದ್ದಾರೆ. ವೆಬ್ ಸೈಟ್ ಮೂಲಕ ಬಂದ ಜನರ ದೂರುಗಳು, ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದಾರೆ. ಮತ್ತೊಂದು ಕಡೆ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ಮಕ್ಕಳಿಗೆ ಬಟ್ಟೆ, ಅಮ್ಮ ಆಂಬುಲೆನ್ಸ್ ಸೇರಿದಂತೆ ತಮ್ಮದೇ ಹಾದಿಯಲ್ಲಿ ಜನರನ್ನು ತಲುಪುತ್ತಿದ್ದಾರೆ. ಶಾಸಕರ ಈ ಯಾವ ಕಾರ್ಯಕ್ರಮಗಳತ್ತಲೂ ಅಸಮಾಧಾನಿತ ಮುಖಂಡರು ಸುಳಿದಿಲ್ಲ.

ಶ್ರೀರಾಮನ ಗುಣ ಅಳವಡಿಸಿಕೊಳ್ಳಿ

ಪೇಜಾವರ ಮಠದ ವಿಶ್ವಪ್ರಸನ್ನ ತೀರ್ಥ

ಉದಯವಾಹಿನಿ ಚಿತ್ರ

• ಉದಯವಾಹಿನಿ, ತುಮಕೂರು

ಪ್ರಸ್ತುತದ ಪ್ರಜಾರಾಜ್ಯದಲ್ಲಿ ಎಲ್ಲರು ರಾಮರಾದರೆ ಮಾತ್ರ ರಾಮರಾಜ್ಯ ನಿರ್ಮಾಣ ಸಾಧ್ಯ ಎಂದು ಉಡುಪಿ ಪೇಜಾವರ ಮಠದ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ಅಭಿಪ್ರಾಯ ಪಟ್ಟರು. ನಗರದಲ್ಲಿ ಹಮ್ಮಿಕೊಂಡಿದ್ದ ಗುರುವಂದನಾ ಸಮಾರಂಭದಲ್ಲಿ ಗೌರವ ಸ್ವೀಕರಿಸಿ ಮಾತನಾಡಿದರು.

ಶ್ರೀರಾಮ, ರಾವಣ ಇಬ್ಬರು ಆದರ್ಶ ಪುರುಷರು. ಸಮಾಜದಲ್ಲಿ ಹೇಗೆ ಇರಬೇಕು ಎನ್ನುವುದಕ್ಕೆ ರಾಮ ಆದರ್ಶ, ಹೇಗೆ ಇರಬಾರದು ಎಂಬುವುದಕ್ಕೆ ರಾವಣ ಆದರ್ಶ. ಪ್ರತಿಯೊಬ್ಬರು ರಾಮನ ಗುಣಗಳನ್ನು ಅಳವಡಿಸಿಕೊಳ್ಳಬೇಕು. ರಾಮನಂತೆ ಬದುಕಬೇಕು. ಮುಂದಿನ ಪೀಳಿಗೆಗೆ ರಾಮನ ಆದರ್ಶ ತಿಳಿಸಲು ರಾಮ ಮಂದಿರಬೇಕು. ಇದೇ ಉದ್ದೇಶದಿಂದ ಅಯೋಧ್ಯೆಯಲ್ಲಿ ಮಂದಿರ ನಿರ್ಮಿಸಲಾಗಿದೆ ಎಂದರು. ನಮ್ಮಲ್ಲಿರುವುದನ್ನು ಇನ್ನೊಬ್ಬರ ಜತೆ ಹಂಚಿ ತಿನ್ನುವ, ಇತರರ ಕಷ್ಟಕ್ಕೆ ಸ್ಪಂದಿಸುವ, ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳುವ ಗುಣ ಬೆಳೆಸಿಕೊಳ್ಳಬೇಕು. ಈ ಮುಖಾಂತರ ರಾಮರಾಜ್ಯ ಕಟ್ಟಲು ಕೈಜೋಡಿಸಬೇಕು ಎಂದು ಹೇಳಿದರು. ಸಿದ್ಧಗಂಗಾ ಮಠದ ಸಿದ್ಧಲಿಂಗ ಸ್ವಾಮೀಜಿ, 'ನಮ್ಮಲ್ಲಿ ಗುರುವಿಗೆ ಅತ್ಯಂತ ಶ್ರೇಷ್ಠವಾದ ಸ್ಥಾನ ನೀಡಲಾಗಿದೆ. ಗುರು ಎಂದರೆ ಬೆಳಕು, ಜ್ಞಾನ, ಸೇವೆ. ಸಮಾಜದ ಭಾರ ಹೊತ್ತುಕೊಂಡವರು ನಿಜವಾದ ಗುರು. ಪೇಜಾವರ ಮಠದ ವಿಶ್ವೇಶತೀರ್ಥ ಸ್ವಾಮೀಜಿ ಮಾಡಿದ ಸಂಘಟನೆ, ಸೇವೆ, ತ್ಯಾಗ ನಾವು ನೆನಪಿಸಿಕೊಳ್ಳಬೇಕು. ಅವರು ತುಂಬಾ ಶ್ರದ್ಧೆಯಿಂದ ಕೆಲಸ ಮಾಡುತ್ತಿದ್ದರು' ಎಂದು ಸ್ಮರಿಸಿದರು. ಪ್ರಸನ್ನತೀರ್ಥ ಸ್ವಾಮೀಜಿ ರಾಮ ಮಂದಿರದಲ್ಲಿ 48 ದಿನಗಳ ಕಾಲ ಮಂಗಳ ಪೂಜೆ ಮಾಡಿದ್ದರು. ಧರ್ಮ, ಉಪದೇಶ ಮೀರಿ ಸಮಾಜಕ್ಕೆ ಉತ್ತಮ ಸೇವೆ ಸಲ್ಲಿಸುತ್ತಿದ್ದಾರೆ ಎಂದರು. ಶಾಸಕ ಜಿ.ಬಿ.ಜ್ಯೋತಿಗಣೇಶ್, 'ಪ್ರಸನ್ನತೀರ್ಥ ಸ್ವಾಮೀಜಿ ಹಿಂದೂ ಸಮಾಜದಲ್ಲಿ ಇರುವ ಅಸಮತೋಲನ ಸರಿ ಮಾಡಲು, ಸಮಾಜ ಒಡೆದು ಹೋಗುವುದನ್ನು ತಪ್ಪಿಸಲು, ಧರ್ಮ ಉಳಿಸಲು ಮುಂದಾಗಿದ್ದಾರೆ' ಎಂದು ತಿಳಿಸಿದರು. ಸಮಾರಂಭದ ಪ್ರಯುಕ್ತ ಶಂಕರ ಮಠದಿಂದ ಪ್ರಸನ್ನತೀರ್ಥ ಸ್ವಾಮೀಜಿ ಶೋಭಾಯಾತ್ರೆ ನಡೆಯಿತು. ಬಿ.ಎಚ್.ರಸ್ತೆಯಿಂದ ಸಾಗಿ ಅಶೋಕ ರಸ್ತೆ ಮೂಲಕ ಎಂಪ್ರೆಸ್ ಕಾಲೇಜು ತಲುಪಿತು. ಗುರುವಂದನಾ ಸಮಾರಂಭದ ಸ್ವಾಗತ ಸಮಿತಿ ಅಧ್ಯಕ್ಷ ಡಾ.ಎಸ್.ಪರಮೇಶ್, ಕಾರ್ಯಾಧ್ಯಕ್ಷ ಜಿ.ಕೆ.ಶ್ರೀನಿವಾಸ್, ಕೆಪಿಸಿಸಿ ಉಪಾಧ್ಯಕ್ಷ ಮುರಳೀಧರ್ ಹಾಲಪ್ಪ ಇತರರು ಉಪಸ್ಥಿತರಿದ್ದರು.

ಶಿಥಿಲಗೊಂಡ ಶಾಲೆ, ಕಾಯಂ ಇಲ್ಲದ ಶಿಕ್ಷಕರು

• ಉದಯವಾಹಿನಿ, ಬಾಗೇಪಲ್ಲಿ

ವರ್ಷಗಳ ಹಿಂದೆ ನಿರ್ಮಿಸಿರುವ ಶಾಲೆಗಳು ಬೀಳುವ ಸ್ಥಿತಿಗೆ ತಲುಪಿವೆ. ಕಟ್ಟಡಗಳಲ್ಲಿ ಬಿರುಕು ಕಾಣಿಸಿಕೊಂಡಿದೆ. ಸಿಮೆಂಟ್, ಕಲ್ಲು, ಮಣ್ಣು ಕೆಳಗೆ ಉದುರುತ್ತಿದೆ. ನೀರಿನ ತೇವಾಂಶ ಹಾಗೂ ಮಣ್ಣು ಬೀಳುವ ಕೆಳಗೆ ಶಾಲಾ ವಿದ್ಯಾರ್ಥಿಗಳು...ಹೀಗೆ ತಾಲ್ಲೂಕಿನ 33 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕಟ್ಟಡಗಳು ಶಿಥಿಲಗೊಂಡು ಅಪಾಯದ ಸ್ಥಿತಿಯಲ್ಲಿವೆ. ಮಕ್ಕಳಿಗೆ ಸುರಕ್ಷತೆ ಇಲ್ಲದಂತೆ ಆಗಿದೆ.

ಉದಯವಾಹಿನಿ ಚಿತ್ರ

ತಾಲ್ಲೂಕಿನಲ್ಲಿ 33 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು, 21 ಪ್ರೌಢಶಾಲೆಗಳು ಇವೆ. ಬಹುತೇಕ ಸರ್ಕಾರಿ ಶಾಲೆಗಳನ್ನು ಹೈಟೆಕ್ ಮಾದರಿಯಲ್ಲಿ ನಿರ್ಮಿಸಲಾಗಿದೆ. ಆದರೆ, ನಿರ್ಮಾಣಗೊಂಡು ಕೆಲವೇ ವರ್ಷಗಳಲ್ಲಿ ಶಿಥಿಲಗೊಂಡಿವೆ. ತಾಲ್ಲೂಕಿನ 33 ಸರ್ಕಾರಿ ಶಾಲೆಗಳ ಪೈಕಿ ತರಗತಿ ಕೊಠಡಿಗಳ ಸಂಖ್ಯೆ 131. ಉತ್ತಮ ಸ್ಥಿತಿಯಲ್ಲಿ ಇರುವ ತರಗತಿ ಕೊಠಡಿಗಳು 79 ಹಾಗೂ ಶಿಥಿಲಗೊಂಡು ಅಪಾಯ ಸ್ಥಿತಿಯಲ್ಲಿ ಇರುವ 52 ಕೊಠಡಿಗಳು ಇವೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಕೊಠಡಿಗಳ ಕೊರತೆ ಇದೆ. ಕೆಲ ಶಾಲೆಗಳಲ್ಲಿ ಶಿಥಿಲಾವಸ್ಥೆಯಲ್ಲಿ ಇರುವ ಕೊಠಡಿಗಳನ್ನು ಮುಚ್ಚಲಾಗಿದೆ. ವಿದ್ಯಾರ್ಥಿಗಳ ಕಲಿಕೆಗೆ ತೊಂದರೆ ಆಗದಂತೆ ಶಿಥಿಲಾವಸ್ಥೆ ಕೊಠಡಿಯಲ್ಲಿಯೇ 2 ಅಥವಾ 3 ತರಗತಿ ಮಕ್ಕಳನ್ನು ಸೇರಿಸಿಕೊಂಡು ಪಾಠ ಮಾಡಲಾಗುತ್ತಿದೆ. ಬಹುತೇಕ ಶಾಲೆಗಳಲ್ಲಿ ವಿದ್ಯಾರ್ಥಿಗಳು ಕೂರಲು ಕುರ್ಚಿ, ಡೆಸ್ಕ್ ಇಲ್ಲ. ನೆಲದ ಮೇಲೆ ಕುಳಿತು ಪಾಠ ಕೇಳಬೇಕಾಗಿದೆ. ಮಳೆ ಬಂದರೆ ಶಾಲಾ ಚಾವಣೆಯಿಂದ ನೀರು ಸೋರಿಕೆ ಆಗಿ ಕೊಠಡಿಗಳಲ್ಲಿ ಮಳೆ ನೀರು ಸಂಗ್ರಹವಾಗುತ್ತದೆ. ಸಂಗ್ರಹ ಆಗಿರುವ ನೀರನ್ನು ವಿದ್ಯಾರ್ಥಿಗಳು ಸ್ವಚ್ಛತೆ ಮಾಡಬೇಕಾಗಿದೆ.

> ಶಿಥಿಲಾವ್ಯಸ್ಥೆಯಲ್ಲಿರುವ ಶಾಲಾ ಕಟ್ಟಡ ಕೆಡವಿ ನೂತನ ಕಟ್ಟಡ ನಿರ್ಮಿಸಬೇಕು ಎಂದು ಸಾರ್ವಜನಿಕ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಅಧಿಕಾರಿಗಳಿಗೆ ಸಂಬಂಧಪಟ್ಟ ಮುಖ್ಯ ಶಿಕ್ಷಕರು ಪತ್ರ ಬರೆದರೂ ಸರ್ಕಾರ ನೂತನ ಶಾಲಾ ಕೊಠಡಿ ನಿರ್ಮಿಸಿಲ್ಲ. ಇದರಿಂದ ಭಯದ ವಾತಾವರಣದಲ್ಲಿ ಇದ್ದೇವೆ ಎಂದು ಶಿಕ್ಷಕರು ಹೇಳುತ್ತಾರೆ.

ಕಾಟಾಚಾರಕ್ಕೆ ನಡೆದ ಜನಸ್ಪಂದನ: ನಿರಾಸೆ

• ಉದಯವಾಹಿನಿ, ಕೊರಟಗೆರೆ

ಜಿಲ್ಲಾ ಹಾಗೂ ತಾಲ್ಲೂಕು ಆಡಳಿತದಿಂದ ಪಟ್ಟಣ ದಲ್ಲಿ ಬುಧವಾರ ನಡೆದ ತಾಲ್ಲೂಕು ಮಟ್ಟದ ಜನಸ್ಪಂದನ ಕಾರ್ಯಕ್ರಮವನ್ನು ಆರಂಭವಾದ ಎರಡೇ ಗಂಟೆಯಲ್ಲೇ ಮುಗಿಸಲಾಯಿತು. ಬಹು ನಿರೀಕ್ಷೆಯಿಂದ ಅಹವಾಲು ಹಿಡಿದು ಬಂದಿದ್ದ ಸಾರ್ವಜನಿಕರು ಬೇಸರದಿಂದಲೇ ಮನೆಯತ್ತ ಹೆಜ್ಜೆ ಹಾಕಿದರು.

ಬೆಳಿಗ್ಗೆ 10 ಗಂಟೆಗೆ ಪಟ್ಟಣದ ಮಾರುತಿ ಕಲ್ಯಾಣ ಮಂಟಪದಲ್ಲಿ ಜನಸ್ಪಂದನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಕಾರ್ಯಕ್ರಮಕ್ಕೆ ತಡವಾಗಿ ಬಂದ ಕಾರಣ 11 ಗಂಟೆಗೆ ಕಾರ್ಯಕ್ರಮ ಪ್ರಾರಂಭವಾಯಿತು. ಮೊದಲಿಗೆ ಎಲ್ಲಾ ಇಲಾಖೆಗಳಿಂದ ಹಾಕಲಾಗಿದ್ದ ಮಳಿಗೆಗಳಿಗೆ ಜಿಲ್ಲಾಧಿಕಾರಿ ಭೇಟಿ ನೀಡಿ ಮಾಹಿತಿ ಪಡೆದರು. ಬಳಿಕ ವೇದಿಕೆ ಕಾರ್ಯಕ್ರಮ ಪ್ರಾರಂಭವಾಯಿತು. ಈ ಸಂದರ್ಭದಲ್ಲಿ ಒಂದಷ್ಟು ಫಲಾನುಭವಿಗಳಿಗೆ ಬಿತ್ತನೆ ಬೀಜ, ಸಸಿ, ಆದೇಶ ಪತ್ರ ಸೇರಿದಂತೆ ವಿವಿಧ ಸವಲತ್ತು ವಿತರಣೆ ಮಾಡಿದರು.

ಉದಯವಾಹಿನಿ ಚಿತ್ರ

ಬಹಳಷ್ಟು ಜನರು ಸಮಸ್ಯೆಗಳ ಅರ್ಜಿ ಹಿಡಿದು ಜಿಲ್ಲಾಧಿಕಾರಿಗೆ ನೀಡಲು ಬಂದರು. ಹಲವರಿಂದ ಅಹವಾಲು ಸ್ವೀಕರಿಸಿದ ಜಿಲ್ಲಾಧಿಕಾರಿ ಕೆಲವೇ ನಿಮಿಷದಲ್ಲಿ ಸ್ಥಳದಿಂದ ನಿರ್ಗಮಿಸಿದರು. ಸಮಸ್ಯೆಗಳಿಗೆ ಪರಿಹಾರ ಸಿಗುತ್ತದೆ ಎಂಬ ನಿರೀಕ್ಷೆಯಲ್ಲಿದ್ದವರಿಗೆ ಇದು ನಿರಾಸೆ ಮೂಡಿಸಿತು.

ಈಗಾಗಲೇ ಅನೇಕ ಬಾರಿ ನಮ್ಮ ಕೆಲಸಕ್ಕಾಗಿ ಕಚೇರಿಗೆ ಅರ್ಜಿ ನಿಡಿದ್ದೇವೆ. ಈಗಲು ಅರ್ಜಿ ಕೊಟ್ಟಿದ್ದೇವೆ ಆದರೆ ಇಲ್ಲಿನ ವಾತಾವರಣ ನೋಡಿದರೆ ನಮ್ಮ ಕೆಲಸ ಆಗುತ್ತದೆ ಎಂಬ ಭರವಸೆ ಇಲ್ಲ' ಎಂದು ಕೆಲವರು ಅಭಿಪ್ರಾಯಪಟ್ಟರು.

ಅನೇಕ ಬಾರಿ ಅರ್ಜಿ

> 40ಕ್ಕೂ ಹೆಚ್ಚು ವರ್ಷಗಳಿಂದ ಸರ್ಕಾರಿ ಭೂಮಿಯಲ್ಲಿ ಸಾಗುವಳಿ ಮಾಡಿಕೊಂಡು ಬಂದು ಹಕ್ಕು ಪತ್ರಕ್ಕೆ ಅನೇಕ ಬಾರಿ ಅರ್ಜಿ ಸಲ್ಲಿಸಿದ್ದೇವೆ. ಆದರೂ ಈವರೆಗೆ ಹಕ್ಕುಪತ್ರ ನೀಡಿಲ್ಲ. ಈಗ ಏಕಾಏಕಿ ಸಾಗುವಳಿ ಮಾಡುತ್ತಿರುವ ಜಮೀನು ಅರಣ್ಯ ಇಲಾಖೆಗೆ ಸೇರುತ್ತದೆ ಎಂದು ನಮ್ಮನ್ನು ಒಕ್ಕಲೆಬ್ಬಿಸಲಾಗುತ್ತಿದೆ. ಇಷ್ಟು ವರ್ಷ ಇಲ್ಲದ ಅರಣ್ಯ ಭೂಮಿ ಈಗ ಎಲ್ಲಿಂದ ಬಂತು. ಬಗ್ಗೆ ಅನೇಕ ಬಾರಿ ಅರ್ಜಿ ಕೊಟ್ಟಿದ್ದೇವೆ. ಯಾವುದೇ ಉತ್ತರ ಸಿಕ್ಕಿಲ್ಲ. ಇಂದೂ ಸಹ ನಮ್ಮೂರಿನ ಹಲವು ರೈತರು ಹಕ್ಕು ಪತ್ರಕ್ಕೆ ಅರ್ಜಿ ಸಲ್ಲಿಸಲು ಬಂದಿದ್ದೇವೆ. ನ್ಯಾಯ ಸಿಗುತ್ತದೆ ಎಂಬ ನಂಬಿಕೆಯೇ ಹೊರಟು ಹೋಗಿದೆ' ಎಂದು ಹೊಸಕೋಟೆ ಅಂಜನ್ ಮೂರ್ತಿ ಬೇಸರ ವ್ಯಕ್ತಪಡಿಸಿದರು.

ಪಂ. ಮಟ್ಟಕ್ಕೆ ಬಂದು ಸಮಸ್ಯೆ ಆಲಿಸುವೆ: ಡಿಕೆಶಿ

• ಉದಯವಾಹಿನಿ, ಚನ್ನಪಟ್ಟಣ

ತಾಲ್ಲೂಕಿನಲ್ಲಿ ಹಲವು ಸಮಸ್ಯೆಗಳಿವೆ. ಜನರು ಎದುರಿಸುವ ಸಮಸ್ಯೆಗಳನ್ನು ಅವರಿಂದಲೇ ಆಲಿಸಿ ಪರಿಹರಿಸುವುದಕ್ಕಾಗಿ, ಮುಂದಿನ ದಿನಗಳಲ್ಲಿ ಪ್ರತಿ ಪಂಚಾಯಿತಿ ಮಟ್ಟಕ್ಕೆ ಭೇಟಿ ನೀಡುವೆ. ಸಮಸ್ಯೆಗಳನ್ನು ಹಂತಹಂತವಾಗಿ ಪರಿಹರಿಸಲು ಪ್ರಾಮಾಣಿಕವಾಗಿ ಶ್ರಮಿಸುವೆ' ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

'ಕ್ಷೇತ್ರವನ್ನು ಪ್ರತಿನಿಧಿಸಿದ್ದವರು ತಾಲ್ಲೂಕಿನಲ್ಲಿ ಕೆಡಿಪಿ ಸಭೆಯನ್ನೇ ನಡೆಸಿಲ್ಲ. ಆಶ್ರಯ ಮನೆ ಯೋಜನೆ, ಬಗರ್‌ಹುಕುಂ ಸೇರಿದಂತೆ ವಿವಿಧ ಸಮಿತಿಗಳ ಸಭೆಯನ್ನೇ ಕರೆದಿಲ್ಲ. ಒಟ್ಟಿನಲ್ಲಿ ಕ್ಷೇತ್ರದಲ್ಲಿ ಯಾವುದೇ ಕೆಲಸಗಳಾಗಿಲ್ಲ. ಹಾಗಾಗಿ, ಮುಂದೆ ಪ್ರತಿ ದಿನ ಮೂರು ಪಂಚಾಯಿತಿಗಳಿಗೆ ಭೇಟಿ ನೀಡಿ, ಸ್ಥಳೀಯರ ಸಮಸ್ಯೆಗಳನ್ನು ಕೇಳಿ ಸ್ಥಳದಲ್ಲೇ ಪರಿಹಾರ ಸೂಚಿವೆ' ಎಂದು ನಗರದ ತಾಲ್ಲೂಕು ಪಂ. ಆವರಣದಲ್ಲಿ ಸುದ್

ಅಂತರಾಳದಿಂದ... EDITORIAL

ಭಯೋತ್ಪಾದಕನಿಗೆ ಶ್ರದ್ಧಾಂಜಲಿ
ಕೆನಡಾ ಸಂಸತ್‌ನ ಮೂರ್ಖತನ

ಖಲಿಸ್ತಾನಿ ಉಗ್ರರಿಗೆ ಕೆನಡಾ ಹುಲುಸಾದ ನೆಲ. ಇಲ್ಲಿರುವ ಭಾರಿ ಪ್ರಮಾಣದ ಸಿಕ್ಖ್ ವಲಸಿಗರಲ್ಲಿ ಹಲವು ಪ್ರತ್ಯೇಕತಾವಾದಿಗಳು ಇದರ ಪೋಷಕರು. ಈ ಶ್ರೀಮಂತರ ಹಣಕ್ಕೆ ಆಸೆಪಡುತ್ತಿರುವ ಕೆನಡಾದ ಆಡಳಿತಗಾರರು ಈ ಖಲಿಸ್ತಾನಿ ಚಳವಳಿಯ ಪೋಷಕರೂ ಆಗಿದ್ದಾರೆ ಎನ್ನುವುದರಲ್ಲಿ ಅನುಮಾನವಿಲ್ಲ. ಕೆನಡಾ ಸಂಸತ್ ನಲ್ಲಿ ಖಲಿಸ್ತಾನಿ ಉಗ್ರನಿಗೆ ಶ್ರದ್ಧಾಂಜಲಿ ಅರ್ಪಿಸಿರುವುದು ಖಂಡನೀಯ.

ಕೆನಡಾದಲ್ಲಿದ್ದ ಭಾರತದ ಮೋಸ್ಟ್ ವಾಂಟೆಡ್ ಉಗ್ರ, ಖಲಿಸ್ತಾನಿ ಪರ ಹೋರಾಟಗಾರ ಹರ್ದೀಪ್ ಸಿಂಗ್ ನಿಜ್ಜಾರ್ ಹತ್ಯೆಗೈದು ಒಂದು ವರ್ಷವಾದ ಹಿನ್ನೆಲೆಯಲ್ಲಿ ಕೆನಡಾ ಸಂಸತ್ತು ಮಂಗಳವಾರ ಹೌಸ್ ಆಫ್ ಕಾಮನ್ಸ್‌ನಲ್ಲಿ ಒಂದು ನಿಮಿಷ ಮೌನ ಆಚರಿಸಿ ಆತನಿಗೆ ಗೌರವ ಸಲ್ಲಿಸಿದೆ. ಕಳೆದ ವರ್ಷ ಜೂನ್ 18ರಂದು ಕೆನಡಾದ ಸುರರೆ ನಗರದಲ್ಲಿ ಹರ್ದೀಪ್ ಸಿಂಗ್ ನಿಜ್ಜಾರ್ ಅಪರಿಚಿತರ ಗುಂಡಿಗೆ ಬಲಿಯಾಗಿದ್ದ. ಈ ಘಟನೆ ನಡೆದು ಒಂದು ವರ್ಷವಾದ ಹಿನ್ನೆಲೆಯಲ್ಲಿ ಕೆನಡಾ ಸಂಸತ್ತು ಎದ್ದು ನಿಂತು, ಮೌನ ಆಚರಿಸಿತು. ಇದೊಂದು ವಿಚಿತ್ರ ಬೆಳವಣಿಗೆ. ಹಾಗೆಯೇ ಕೆನಡಾದ ಉದ್ಧಟತನಕ್ಕೆ ಇದು ಸಾಕ್ಷಿ ಕೂಡ. ಭಯೋತ್ಪಾದನೆ ಎಂದರೇನು ಎಂದು ಗೊತ್ತಿಲ್ಲದ, ಖಲಿಸ್ತಾನಿ ಉಗ್ರವಾದದ ರುಚಿ ಕಂಡಿಲ್ಲದ ಕೆನಡಾದಂಥ ದೇಶದ ಮೂರ್ಖ ಆಡಳಿತಗಾರರು ಮಾತ್ರ ಮಾಡಬಹುದಾದ ಸಂಗತಿ ಇದು.

ಉದಯವಾಹಿನಿ ಚಿತ್ರ

ಭಾರತದಲ್ಲಿ ದಶಕಗಳ ಹಿಂದೆ ಉಲ್ಬಣಗೊಂಡು ಇದೀಗ ಉಪಶಮನಗೊಂಡಿರುವ ಹುಣ್ಣನ್ನು ಕೆರೆದು ಮತ್ತೆ ಉಲ್ಬಣಗೊಳಿಸುವ ಕೆಲಸವನ್ನು ಕೆನಡಾ ಮಾಡುತ್ತಿದೆ. ಒಂದು ಕಾಲದಲ್ಲಿ ಅಮೃತಸರದ ಸ್ವರ್ಣಮಂದಿರವನ್ನು ಅಪವಿತ್ರಗೊಳಿಸಿದ, ಖಲಿಸ್ತಾನ್ ಚಳವಳಿಯ ಹೆಸರಲ್ಲಿ ಪಂಜಾಬ್‌ನ ಯುವಜನತೆಯ ಮನಸ್ಸುಗಳನ್ನು ಕೆಡಿಸಿ ಸರ್ವನಾಶ ಮಾಡಿದ ಭಿಂದ್ರಾನ್‌ವಾಲೆಯ ಸಂತಾನಗಳು ಇಂದಿಗೂ ಕೆನಡಾದ ನೆಲದಲ್ಲಿ ಆಶ್ರಯ ಪಡೆದಿವೆ. ಇಂಥ ಡಜನ್‌ಗೂ ಹೆಚ್ಚು ಉಗ್ರರ ಹೆಸರನ್ನು ಭಾರತ ಸರ್ಕಾರ ಕೆನಡಾಗೆ ನೀಡಿದ್ದು, ಅವರನ್ನು ತಮಗೊಪ್ಪಿಸುವಂತೆ ಹೇಳಿದೆ.

ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ಹತ್ಯೆಯನ್ನು ಕೆನಡಾದಲ್ಲಿರುವ ಖಲಿಸ್ತಾನಿಗಳು ಸಂಭ್ರಮಾಚರಣೆ ಮಾಡಿದ ಕೆಲವೇ ದಿನಗಳಲ್ಲಿ ಖಲಿಸ್ತಾನಿ ಉಗ್ರ ಹರ್ದೀಪ್ ಸಿಂಗ್ ನಿಜ್ಜಾರ್‌ನನ್ನು ಕೆನಡಾದ ಸುರರೆ ನಗರದಲ್ಲಿ ಕೊಲೆ ಮಾಡಲಾಗಿತ್ತು. ಪಂಜಾಬಿಗಳೇ ಹೆಚ್ಚಿರುವ ಸುರರೆ ನಗರದ ಗುರುನಾನಕ್ ಸಿಖ್ ಗುರುದ್ವಾರದ ಬಳಿಕ ಖಲಿಸ್ತಾನಿ ಉಗ್ರನ ಹತ್ಯೆ ನಡೆದಿತ್ತು. ಪಂಜಾಬ್‌ನಲ್ಲಿ ಅರ್ಚಕರೊಬ್ಬರ ಕೊಲೆಗೆ ಪಿತೂರಿ ನಡೆಸಿರುವುದು, ಮೂಲಭೂತವಾದದ ಪ್ರಸರಣ ಸೇರಿ ನಾಲ್ಕು ಪ್ರಕರಣಗಳಲ್ಲಿ ಎನ್‌ಐಎ ಈತನ ವಿರುದ್ಧ ತನಿಖೆ ನಡೆಸುತ್ತಿದೆ. ಖಲಿಸ್ತಾನ್ ಟೈಗರ್ ಫೋರ್ಸ್ ಉಗ್ರ ಸಂಘಟನೆಯ ಮುಖ್ಯಸ್ಥನಾಗಿದ್ದ ಈತ ಪ್ರತ್ಯೇಕವಾದಿಗಳಿಗೆ ಹೆಚ್ಚಿನ ನೆರವು ಒದಗಿಸುತ್ತಿದ್ದ. ಭಾರತದಲ್ಲಿ ಹಲವು ಉಗ್ರ ಚಟುವಟಿಕೆಗಳ ಹಿಂದೆ ಈತನ ಕೈವಾಡವಿದೆ. ಕೆನಡಾದಲ್ಲೂ ಸಿಖ್ ಸಮುದಾಯದವರನ್ನು ಎತ್ತಿ ಕಟ್ಟುತ್ತಿದ್ದ. ಹಾಗಾಗಿ ಈತನು ಸೇರಿ ಸುಮಾರು 40 ಉಗ್ರರನ್ನು ಭಾರತವು ಮೋಸ್ಟ್ ವಾಂಟೆಡ್ ಉಗ್ರರ ಪಟ್ಟಿಗೆ ಸೇರಿಸಿತ್ತು. ಇಂಥ ಉಗ್ರನ ಹತ್ಯೆಯಾದರೆ ಕೆನಡಾಕ್ಕೆ ಯಾಕೆ ಹೊಟ್ಟೆನೋವು

ಖಲಿಸ್ತಾನಿ ಉಗ್ರರಿಗೆ ಕೆನಡಾ ಹುಲುಸಾದ ನೆಲ. ಇಲ್ಲಿರುವ ಭಾರಿ ಪ್ರಮಾಣದ ಸಿಕ್ಖ್ ವಲಸಿಗರಲ್ಲಿ ಹಲವು ಪ್ರತ್ಯೇಕತಾವಾದಿಗಳು ಇದರ ಪೋಷಕರು. ಈ ಶ್ರೀಮಂತರ ಹಣಕ್ಕೆ ಆಸೆಪಡುತ್ತಿರುವ ಕೆನಡಾದ ಆಡಳಿತಗಾರರು ಈ ಖಲಿಸ್ತಾನಿ ಚಳವಳಿಯ ಪೋಷಕರೂ ಆಗಿದ್ದಾರೆ ಎನ್ನುವುದರಲ್ಲಿ ಅನುಮಾನವಿಲ್ಲ. ನಿಜ್ಜಾರ್ ಹತ್ಯೆಗೂ ಮೊದಲು ಖಲಿಸ್ತಾನಿ ಉಗ್ರ, ಬಂಧಿತ ಅಮೃತ್‌ಪಾಲ್ ಸಿಂಗ್‌ನ ಆಪ್ತ, ಲಂಡನ್‌ನಲ್ಲಿರುವ ಭಾರತದ ಹೈಕಮಿಷನ್ ಕಚೇರಿ ಮೇಲೆ ಖಲಿಸ್ತಾನಿಗಳು ದಾಳಿ ನಡೆಸಿದ್ದರ ರೂವಾರಿ ಅವತಾರ್ ಸಿಂಗ್ ಖಂಡಾ ಲಂಡನ್‌ನಲ್ಲಿ ಮೃತಪಟ್ಟಿದ್ದ. ಅಮೃತ್‌ಪಾಲ್ ಸಿಂಗ್ ಬಂಧನದ ಬಳಿಕ ಕೆನಡಾದಲ್ಲಿರುವ ಖಲಿಸ್ತಾನಿಗಳು ಇನ್ನಷ್ಟು ತೀವ್ರವಾಗಿ ಉಗ್ರ ಚಟುವಟಿಕೆಗಳಲ್ಲಿ ತೊಡಗಿದ್ದಾರೆ. ಹಿಂದೂ ದೇವಾಲಯಗಳನ್ನು ಧ್ವಂಸ ಮಾಡುವುದು, ಭಾರತೀಯ ರಾಯಭಾರಿಗಳನ್ನು ಬೆದರಿಸುವುದು ಇವರ ಮುಖ್ಯ ಉದ್ಯೋಗ. ಆದರೆ ಅವರು ಕೆನಡಾದ ಪ್ರಜೆಗಳೆಂದೂ, ಅವರ ಪ್ರತಿಭಟನೆಯ ಸ್ವಾತಂತ್ರ್ಯಕ್ಕೆ ತಾನು ಧಕ್ಕೆ ತರುವುದಿಲ್ಲವೆಂದೂ ಕೆನಡಾ ಗಳುಹುತ್ತಲೇ ಇದೆ. ಭಾರತ ತನ್ನ ಸಾರ್ವಭೌಮತೆಯಲ್ಲಿ ಹಸ್ತಕ್ಷೇಪ ಮಾಡುತ್ತಿದೆ ಎಂದು ಪ್ರಲಾಪಿಸುತ್ತಿರುವ ಈ ದೇಶದ ಭಂಡ ನಾಯಕತ್ವದ ವೈಫಲ್ಯದಿಂದಾಗಿ, ಕಳೆದ ವರ್ಷ ಉಭಯ ದೇಶಗಳ ರಾಜತಾಂತ್ರಿಕ ಬಾಂಧವ್ಯವೂ ಹಳಸಿತ್ತು. ಪರಸ್ಪರರ ಹೈಕಮಿಶನರ್‌ಗಳನ್ನು ಹೊರಗೆ ಕಳಿಸುವವರೆಗೆ ಅದು ಹೋಗಿತ್ತು. ಇಲ್ಲೂ ಕೆನಡಾದ್ದೇ ಉಪದ್ವ್ಯಾಪ. ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೊ ಮತ್ತು ಇತರ ಆಡಳಿತಗಾರರು ಅರ್ಥ ಮಾಡಿಕೊಳ್ಳಬೇಕಾದ್ದು ಏನೆಂದರೆ, ಖಲಿಸ್ತಾನಿ ಹಿಂಸಾವಾದಿಗಳನ್ನು ಮುಂದಿಟ್ಟುಕೊಂಡು ಹೊರಟರೆ ಆ ದೇಶವೇ ಹಿಂಸೆಯ ಫಲವನ್ನು ಉಣ್ಣಬೇಕಾದೀತು. ಭಯೋತ್ಪಾದಕ ಹರ್‌ದೀಪ್ ಸಿಂಗ್ ನಿಜ್ಜಾರ್ ಹತ್ಯೆಯಲ್ಲಿ ತನ್ನ ಪಾತ್ರವಿಲ್ಲ ಎಂದು ಭಾರತ ಈಗಾಗಲೇ ಪ್ರತಿಪಾದಿಸಿದೆ. ಭಯೋತ್ಪಾದಕನಿಗೆ ಗೌರವ ಸಲ್ಲಿಸುವ ಮೂಲಕ ಕೆನಡಾ ಯಾವ ಸಂದೇಶ ನೀಡಹೊರಟಿದೆ ಆ ದೇಶವೇ ಹೇಳಬೇಕು. ಉಭಯ ದೇಶಗಳ ನಡುವೆ ಶಾಂತಿ- ಸೌಹಾರ್ದ ಸ್ಥಾಪಿಸಬಯಸುವವರು ಮಾಡುವ ಕೆಲಸವಂತೂ ಇದಲ್ಲ.

ಮಹಾಭಾರತ
ಶಲ್ಯಪರ್ವ

• ಹಿಂದಿನ ಸಂಚಿಕೆಯಿಂದ

ಕೃಷ್ಣನೆಂದದ್ದು ಸರಿ. ದುರ್ಯೋಧನನೇ ಒಂದು ಕೈ ಮೇಲು ಎಂಬುವುದರಲ್ಲಿ ಸಂಶಯವಿಲ್ಲ. ಬಲರಾಮನು ಆನಂದದಿಂದಲೂ ಕೃಷ್ಣನು ಗೂಢದೃಷ್ಟಿಯಿಂದಲೂ ಯುದ್ಧವನ್ನು ನೋಡುತ್ತಿದ್ದರು. ಇಬ್ಬರೂ ಪರಸ್ಪರರನ್ನು ಸುತ್ತಿ ಬರುತಿದ್ದುದು ನೋಡುವುದಕ್ಕೆ ಬಹು ಚೆನ್ನಾಗಿತ್ತು. ಇಬ್ಬರೂ ಯುದ್ಧನಿಯಮಗಳನ್ನು ಶ್ರದ್ಧೆಯಿಂದ ಅನುಸರಿಸುತಿದ್ದರು. ಭೀಮನ ಗದೆಯು ಕೈಯಿಂದ ಕಿತ್ತುಹೋಗುವಂತೆ ದುರ್ಯೋಧನ ಹೊಡೆಯುವನು. ಕೋಪದಿಂದ ಸಿಂಹನಾದ ಮಾಡಿ ಭೀಮನು ಅದನ್ನು ತಡೆದುಕೊಂಡು ತಿರುಗೇಟು ನೀಡುವನು. ಎಲ್ಲೋ ಹೋಗಿ ತನ್ನ ಗದೆಯನ್ನು ತಂದುಕೊಂಡು ದುರ್ಯೋಧನನು ಕೋಪದಿಂದ ತನ್ನ ಬಲವನ್ನೆಲ್ಲ ಬಿಟ್ಟು ಹೊಡೆಯುವನು. ಭೀಮನಿಗೆ ಮರ್ಮಾಘಾತವಾದರೂ ತಡೆದುಕೊಂಡು ತನ್ನ ಗದೆಯನ್ನು ಬೀಸಿ ಎಸೆಯುವನು. ಅದರ ಸಂಘಾತದಿಂದ ಸ್ವಲ್ಪದರಲ್ಲಿ ತಪ್ಪಿಸಿಕೊಂಡ ದುರ್ಯೋಧನನು ಮತ್ತೆ ಮೇಲೇರಿ ಬರುವನು. ಭೀಮ ಎರಡು ಸಲ ಮೂರ್ಛಿತನಾದರೆ, ದುರ್ಯೋಧನನು ಒಮ್ಮೆ ಕೆಳಗೆ ಬಿದ್ದು ಮೂರ್ಛಿತನಾದನು. ಅವನು ಏಳುವವರೆಗೆ ತಾಳಿದ ಭೀಮನು, ಮತ್ತೊಮ್ಮೆ ಅವನನ್ನು ಬೀಳಿಸಿದನು. ಯುದ್ಧವು ಬೀಮನಿಗೆ ತಾನೆಣಿಸಿಕೊಂಡಿದ್ದಷ್ಟು ಸುಲಭವಾಗಿರಲಿಲ್ಲ. ಶಲ್ಯನ ಜೊತೆಗೆ ಎರಡು ಬಾರಿ ಗದಾಯುದ್ಧ ಮಾಡಿ ಅವನನ್ನು ಸೋಲಿಸಿದ್ದರೂ, ದುರ್ಯೋಧನ ಭೀಮನಿಗಿಂತ ಅತಿಶಯ ಕುಶಲಿಯಾಗಿದ್ದನು. ಭೀಮನು ವೀರಾವೇಶದಿಂದ ಹೋರಾಡಿದನು. ದುರ್ಯೋಧನನು ರಂಗದಲ್ಲಿ ನರ್ತಿಸುತ್ತಿರುವಂತೆ ತೋರಿತು. ಅವನ ಪದಾಘಾತಗಳು ಅಷ್ಟು ಚುರುಕಾಗಿಯೂ ಹಗುರವಾಗಿಯೂ ಇದ್ದವು. ಭೀಮನ ಹೆಜ್ಜೆಗಳಿಂದ ಭೂಮಿ ನಡುಗುತಿತ್ತು. ಯುದ್ಧವು ಸಾಗುತಿದ್ದಂತೆ, ಅರ್ಜುನನು ಕೃಷ್ಣನನ್ನು,'' ಇಬ್ಬರಲ್ಲಿ ಯಾರು ಮೇಲು ಯಾರು ಗೆಲ್ಲುವ ಸಾಧ್ಯತೆ ಹೆಚ್ಚು ನಿನಗೇನೆನ್ನಿಸುತ್ತದೆ ಎಂದು ಪ್ರಶ್ನಿಸಿದನು. ಕೃಷ್ಣನು ಹಗುರವಾಗಿ ನಕ್ಕು ''ಇಬ್ಬರೂ ನನ್ನಣ್ಣನ ಶಿಷ್ಯರು ಪರಿಣತರು; ಆದರೆ ದುರ್ಯೋಧನನದೇ ಮೇಲುಗೈ ಎಂಬುದು ನಿನಗೂ ಅರಿವಾಗಿರಬೇಕು. ಭೀಮ ಹೆಚ್ಚು ಶಕ್ತಿಶಾಲಿ ನಿಜ; ಆದರೆ ದುರ್ಯೋಧನನು ಅತುರ, ಕುಶಲ ಹಾಗೂ ವೇಗಶಾಲಿ. ನೋಡು, ಭೀಮನ ಬಲವಾದ ಹೊಡೆತಗಳನ್ನು ಅವನು ಹೇಗೆ ತಪ್ಪಿಸಿಕೊಳ್ಳುತ್ತಿರುವನು! ನ್ಯಾಯವಾದ ರೀತಿಯಲ್ಲಿ ಅವನನ್ನು ಕೊಲ್ಲಲು ಸಾಧ್ಯವಿಲ್ಲ. ಗೆಲ್ಲುವುದಕ್ಕಾಗಿ ಕುತಂತ್ರವನ್ನನುಸರಿಸಬೇಕು. ಈ ದ್ವಂದ್ವವನ್ನು ಏರ್ಪಡಿಸಿರುವ ನಿನ್ನಣ್ಣ ಯುಧಿಷ್ಠಿರ ಒಬ್ಬ ಮೂರ್ಖ. ಕೊನೆಯ ಹಂತದಲ್ಲಿರುವ ದುರ್ಯೋಧನ ತನ್ನೆಲ್ಲ ಕೌಶಲ್ಯವನ್ನು ಬಳಸುತ್ತಾನೆ. ಅದನ್ನು ನೋಡುವುದೇ ಒಂದು ಆನಂದ. ನೋಡುತ್ತ ಗಂಟೆಗಟ್ಟಲೆ ಕುಳಿತಿರಬಹುದು. ಆದರೆ ಭೀಮ ಬೇಗ ಯುದ್ಧವನ್ನು ಮುಗಿಸಬೇಕು; ಹೇಗೆ ಅದನ್ನು ಮಾಡುವನೋ ನೋಡಬೇಕು ಎನ್ನಲು, ಅರ್ಜುನನಿಗೆ ಭೀಮನ ಪ್ರತಿಜ್ಞೆ ನೆನಪಾಯಿತು. ಭೀಮನ ದೃಷ್ಟಿಯು ತನ್ನ ಕಡೆಗೆ ತಿರುಗಿದಾಗ, ಅರ್ಜುನ ತನ್ನ ತೊಡೆಯನ್ನು ತಟ್ಟಿ ತೋರಿಸಿದನು.

ಮುಂದುವರಿಯುವುದು...

ಸಾಮರಸ್ಯ, ವಿಶ್ವಶಾಂತಿಗಾಗಿ ಯೋಗವು ಅತೀ ಅವಶ್ಯಕ

ಎನ್.ಎನ್.ಕಬ್ಬೂರ
• ಉದಯವಾಹಿನಿ, ವಿಶೇಷ

ಯೋಗ ದಿನದ ಪ್ರಯುಕ್ತ ಪ್ರಸ್ತುತ ಲೇಖನ

ಯೋಗವು ಭಾರತದಲ್ಲಿ ಹುಟ್ಟಿಕೊಂಡ ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಅಭ್ಯಾಸವಾಗಿದೆ. 'ಯೋಗ' ಎಂಬ ಪದವು ಸಂಸ್ಕೃತದಿಂದ ಬಂದಿದೆ ಮತ್ತು ದೇಹ ಮತ್ತು ಪ್ರಜ್ಞೆಯ ಒಕ್ಕೂಟವನ್ನು ಸಂಕೇತಿಸುವ, ಸೇರುವುದು ಅಥವಾ ಒಂದಾಗುವುದು ಎಂದರ್ಥ. ಇದನ್ನು ಪ್ರಪಂಚದಾದ್ಯಂತ ವಿವಿಧ ರೂಪಗಳಲ್ಲಿ ಅಭ್ಯಾಸ ಮಾಡಲಾಗುತ್ತಿದೆ ಮತ್ತು ಜನಪ್ರಿಯತೆಯಲ್ಲಿ ಬೆಳೆಯುತ್ತಿದೆ. ಸಾಮರಸ್ಯ ಮತ್ತು ಶಾಂತಿಗಾಗಿ ಯೋಗ ಎಂಬುದು ಯೋಗದ ಪ್ರಮುಖ ಪ್ರಯೋಜನಗಳನ್ನು ಒತ್ತಿಹೇಳುತ್ತದೆ.

ಇತಿಹಾಸ:- ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿಯವರು 2014 ರಲ್ಲಿ ತಮ್ಮ ಯುಎನ್ ಭಾಷಣದಲ್ಲಿ ಜೂನ್ 21 ರಂದು ವಾರ್ಷಿಕ ಯೋಗ ದಿನವನ್ನು ಸೂಚಿಸಿದರು. ಏಕೆಂದರೆ ಇದು ಉತ್ತರ ಗೋಳಾರ್ಧದಲ್ಲಿ ವರ್ಷದ ದೀರ್ಘ ದಿನವಾಗಿದೆ ಮತ್ತು ಪ್ರಪಂಚದ ಅನೇಕ ಭಾಗಗಳಲ್ಲಿ ವಿಶೇಷ ಪ್ರಾಮುಖ್ಯತೆಯನ್ನು ಹಂಚಿಕೊಳ್ಳುತ್ತದೆ. 2015ರಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್ ಅಂತರಾಷ್ಟ್ರೀಯ ಯೋಗ ದಿನವನ್ನು ಗುರುತಿಸಲು 10 ರೂಪಾಯಿಯ ಸ್ಮರಣಾರ್ಥ ನಾಣ್ಯವನ್ನು ಬಿಡುಗಡೆ ಮಾಡಿತು. ಏಪ್ರಿಲ್ 2017ರಲ್ಲಿ ಯುಎನ್ ಪೋಸ್ಟಲ್ ಅಡ್ಮಿನಿಸ್ಟ್ರೇಷನ್ (ಯುಎನ್‌ಪಿಎ) ಅಂತರಾಷ್ಟ್ರೀಯ ಯೋಗ ದಿನವನ್ನು ಗುರುತಿಸಲು ಒಂದೇ ಹಾಳೆಯ ಮೇಲೆ 10 ಆಸನಗಳ ಅಂಚೆ ಚೀಟಿಗಳನ್ನು ಬಿಡುಗಡೆ ಮಾಡಿತು.

ಅಂತರರಾಷ್ಟ್ರೀಯ ಯೋಗ ದಿನದ ಲೋಗೋವಿನ ವಿವಿಧ ಅಂಶಗಳು ಮತ್ತು ಮಹತ್ವ: 1) ಮಾನವನ ಚಿತ್ರ:- ಯೋಗದ ಭಂಗಿಯಲ್ಲಿ ಚಿತ್ರಿಸಲಾದ ಕೇಂದ್ರದಲ್ಲಿರುವ ಮಾನವ ಆಕೃತಿಯು ಯೋಗಾಭ್ಯಾಸವನ್ನು ಸಂಕೇತಿಸುತ್ತದೆ.

2) ಕಿತ್ತಳೆ ಪ್ರಭಾವಲಯ:- ಮಾನವನ ಆಕೃತಿಯ ತಲೆಯ ಸುತ್ತಲಿನ ಕಿತ್ತಳೆ ಪ್ರಭಾವಲಯವು ಜ್ಞಾನೋದಯ, ಆಧ್ಯಾತ್ಮಿಕ ಜಾಗೃತಿ ಅಥವಾ ಯೋಗವು ಬೆಳೆಸಲು ಸಹಾಯ ಮಾಡುವ ಆಂತರಿಕ ಬೆಳಕನ್ನು ಪ್ರತಿನಿಧಿಸುತ್ತದೆ.

3) ಗ್ಲೋಬ್:- ವಿಶ್ವ ಯೋಗ ದಿನದ ಲಾಂಛನದಲ್ಲಿ ಗ್ಲೋಬ್‌ನ ಚಿತ್ರಣವು ಯೋಗದ ಸಾರ್ವತ್ರಿಕತೆಯನ್ನು ಸೂಚಿಸುತ್ತದೆ, ಅಂದರೆ ಇದು ಪ್ರಪಂಚದಾದ್ಯಂತದ ಜನರಿಗೆ ಪ್ರವೇಶಿಸಬಹುದಾದ ಅಭ್ಯಾಸವಾಗಿದೆ.

4) ಎಲೆಗಳು (ಕಂದು ಮತ್ತು ಹಸಿರು):- ಎರಡು ಜೋಡಿ ಎಲೆಗಳು, ಒಂದು ಕಂದು ಮತ್ತು ಒಂದು ಹಸಿರು, ಯೋಗ ಮತ್ತು ಪ್ರಕೃತಿಯ ನಡುವಿನ ಸಂಪರ್ಕವನ್ನು ಪ್ರತಿನಿಧಿಸುತ್ತದೆ. 5) ಕಂದು ಎಲೆಗಳು:- ಲೋಗೋದಲ್ಲಿನ ಕಂದು ಎಲೆಗಳು ಭೂಮಿಯ ಅಂಶವನ್ನು ಸಂಕೇತಿಸುತ್ತವೆ.

6) ಹಸಿರು ಎಲೆಗಳು:- ಲೋಗೋದಲ್ಲಿನ ಹಸಿರು ಎಲೆಗಳು ಪ್ರಕೃತಿ ಮತ್ತು ಹೊಸ ಬೆಳವಣಿಗೆಯನ್ನು ಪ್ರತಿನಿಧಿಸುತ್ತವೆ.

ಯೋಗಾಸನಗಳು:- ಯೋಗದಲ್ಲಿ ವಿವಿಧ ರೀತಿಯ ಆಸನಗಳಿದ್ದು ಅವುಗಳನ್ನು ಈ ರೀತಿ ಪಟ್ಟಿ ಮಾಡಬಹುದು.

1) ನಿಂತು ಮಾಡುವ ಆಸನಗಳು:- ತಾಡಾಸನ, ವೃಕ್ಷಾಸನ, ಪಾದ ಹಸ್ತಾಸನ, ಅರ್ಧ ಚಕ್ರಾಸನ, ತ್ರಿಕೋನಾಸನ.

2) ಕುಳಿತು ಮಾಡುವ ಆಸನಗಳು:- ಭದ್ರಾಸನ, ವಜ್ರಾಸನ, ಅರ್ಧ ಉಷ್ಟ್ರಾಸನ, ಉಷಿಟ್ರಾಸನ, ಶಶಾಂಕಾಸನ, ಉತ್ತಾನ ಮಂಡೂಕಾಸನ, ವಕ್ರಾಸನ. 3) ಹೊಟ್ಟೆಯ ಮೇಲೆ ಮಲಗಿ ಮಾಡುವ ಆಸನಗಳು:- ಮಕರಾನಸ, ಭುಜಂಗಾಸನ, ಶಲಭಾಸನ.

4) ಬೆನ್ನಿನ ಮೇಲೆ ಮಲಗಿ ಮಾಡುವ ಆಸನಗಳು:- ಸೇತುಬಂಧಾಸನ, ಉತ್ತಾನಪಾದಾಸನ, ಅರ್ಧಹಾಲಾಸನ, ಪವನ ಮುಕ್ತಾಸನ, ಶವಾಸನ.

ಇವುಗಳ ಜೊತೆಜೊತೆಗೆ ಕಪಾಲಬಾತಿ, ಪ್ರಾಣಾಯಾಮ ಮತ್ತು ಧ್ಯಾನಗಳನ್ನು ಮಾಡುವುದು ಆರೋಗ್ಯದ ದೃಷ್ಟಿಯಿಂದ ಒಳ್ಳೆಯದು.

ಯೋಗಾಭ್ಯಾಸದ ಪ್ರಯೋಜನಗಳು: 1) ಯೋಗವು ದೈಹಿಕ ಸಾಮರ್ಥ್ಯ ಮತ್ತು ಮಾಂಸಖಂಡ ಹಾಗೂ ಮೂಳೆಗಳ ದೃಢತೆ ಹಾಗೂ ಹೃದಯದ ಆರೋಗ್ಯವನ್ನು ಕಾಪಾಡಲು ಸಹಾಯಕಾರಿಯಾಗಿದೆ.

2) ಮಾನಸಿಕ ಖಿನ್ನತೆ, ಆಯಾಸ, ಆತಂಕ ಮುಂತಾದ ಸಮಸ್ಯೆಗಳ ನಿವಾರಣೆಗೆ ಯೋಗವು ಸಹಾಯಕಾರಿಯಾಗಿದೆ.

3) ಮಧುಮೇಹ, ಉಸಿರಾಟದ ತೊಂದರೆ, ಅಲರ್ಜಿ, ಅಧಿಕ ರಕ್ತ ದೊತ್ತಡ ಮತ್ತು ಜೀವನಶೈಲಿಗೆ ಸಂಬಂಧಿಸಿದ ಹಲವಾರು ರೋಗಗಳ ನಿರ್ವಹಣೆಯಲ್ಲಿ ಇದು ಪ್ರಯೋಜನಕಾರಿಯಾಗಿದೆ.

4) ಮುಟ್ಟು ಮತ್ತು ಮುಟ್ಟು ನಿಲ್ಲುತ್ತಿರುವ ಸಂದರ್ಭದ ಸಮಸ್ಯೆಗಳನ್ನು ನಿಯಂತ್ರಿಸಲು ಯೋಗವು ಸಹಾಯಕಾರಿಯಾಗಿದೆ.

5) ಮುಖ್ಯವಾಗಿ ಯೋಗವು ದೇಹ ಮತ್ತು ಮನಸ್ಸಿನ ಅಡೆತಡೆಗಳನ್ನು ನಿವಾರಿಸಿ, ಉತ್ಸಾಹಭರಿತ ಜೀವನಕ್ಕೆ ಪ್ರೇರಣೆ ನೀಡುವ ಪ್ರಕ್ರಿಯೆಯಾಗಿದೆ.

ಕೊನೆಯ ಮಾತು:- ಯೋಗವು ನಮ್ಮ ಪ್ರಾಚೀನ ಸಂಪ್ರದಾಯದಿಂದ ಅಮೂಲ್ಯ ಕೊಡುಗೆಯಾಗಿದೆ. ಯೋಗವು ಮನಸ್ಸು ಮತ್ತು ದೇಹ, ಆಲೋಚನೆ ಮತ್ತು ಕ್ರಿಯೆಯ ಏಕತೆಯನ್ನು ಒಳಗೊಂಡಿರುತ್ತದೆ. ನಮ್ಮ ಆರೋಗ್ಯ, ನಮ್ಮ ಯೋಗಕ್ಷೇಮಕ್ಕೆ ಮೌಲ್ಯಯುತವಾದ ಒಂದು ಸಮಗ್ರ ವಿಧಾನವಾಗಿದ್ದು, ಯೋಗವೆಂದರೆ ಕೇವಲ ವ್ಯಾಯಾಮವಲ್ಲ, ಇದು ನಮ್ಮೊಂದಿಗೆ, ಜಗತ್ತು ಮತ್ತು ಪ್ರಕೃತಿಯೊಂದಿಗೆ ಏಕತೆಯ ಅರ್ಥವನ್ನು ಕಂಡುಕೊಳ್ಳುವ ಒಂದು ಮಾರ್ಗವಾಗಿದೆ. ಇಂತಹ ಯೋಗವನ್ನು ನಾವು ನೀವೆಲ್ಲ ಅನುಸರಿಸೋಣವೇ....

ಅಂತರಾಷ್ಟ್ರೀಯ ಯೋಗ ದಿನದ ಮಹತ್ವ

- ಯೋಗದ ಅರಿವು ಮತ್ತು ಅಭ್ಯಾಸವನ್ನು ಉತ್ತೇಜಿಸುವ ಮೂಲಕ, ಇದು ಪ್ರಪಂಚದಾದ್ಯಂತ ದೈಹಿಕ ಮತ್ತು ಮಾನಸಿಕ ಯೋಗಕ್ಷೇಮವನ್ನು ಉತ್ತೇಜಿಸುತ್ತದೆ. ಇದು ಪ್ರತಿಯಾಗಿ ಆರೋಗ್ಯಕರ ಜೀವನಶೈಲಿ ಮತ್ತು ತಡೆಗಟ್ಟುವ ಆರೋಗ್ಯ ಅಭ್ಯಾಸಗಳನ್ನು ಉತ್ತೇಜಿಸುವ ಪರಿಣಾಮವನ್ನು ಹೊಂದಿದೆ.
- ಯೋಗವು ಪ್ರಸ್ತುತ ಕ್ಷಣದ ಮೇಲೆ ಕೇಂದ್ರೀಕರಿಸಲು ಮತ್ತು ಒತ್ತಡ ಮತ್ತು ನಕಾರಾತ್ಮಕತೆಯನ್ನು ಬಿಡಲು ನಮಗೆ ಕಲಿಸುತ್ತದೆ. ಇದು ನಮ್ಮ ಜೀವನದಲ್ಲಿ ಶಾಂತಿ ಮತ್ತು ಸಾಮರಸ್ಯವನ್ನು ಕಂಡುಕೊಳ್ಳಲು ನಮಗೆ ಸಹಾಯ ಮಾಡುತ್ತದೆ.
- ಸಂಘರ್ಷ ವಲಯಗಳಲ್ಲಿ ಶಾಂತಿ ಮತ್ತು ಸಾಮರಸ್ಯವನ್ನು ಉತ್ತೇಜ

ಇಂಧನ ಬೆಲೆ ಏರಿಕೆ ಖಂಡಿಸಿ ಬಿಜೆಪಿಯಿಂದ ವಿನೂತನ ಪ್ರತಿಭಟನೆ

ಬೆಲೆ ಏರಿಕೆ , ಹಗರಣ ಹಾಗೂ ನಿರಂತರ ಹತ್ಯೆಗಳ ವಿರುದ್ಧ ಸ್ಪಂದನೆ ಮಾಡದ ಕಾಂಗ್ರೇಸ್ ಸರಕಾರದ ಅಣಕು ಶವಯಾತ್ರೆ

• ಉದಯವಾಹಿನಿ ಮುದ್ದೇಬಿಹಾಳ

ರಾಜ್ಯದಲ್ಲಿ ಕಾಂಗ್ರೇಸ್ ಸರಕಾರ ಪೆಟ್ರೋಲ್ ಡೀಸೆಲ್ ಬೆಲೆ ಏರಿಕೆ ಮಾಡಿದ್ದರ ವಿರುದ್ಧ ಹಾಗೂ ವಾಲ್ಮೀಕಿ ನಿಗಮದ ಹಗರಣ ಮತ್ತು ರಾಜ್ಯದಲ್ಲಿ ನಡೆಯುತ್ತಿರುವ ಹತ್ಯೆಗಳು ಭ್ರಷ್ಟಾಚಾರದ ವಿರುದ್ಧ ಮುದ್ದೇಬಿಹಾಳ ಬಿಜೆಪಿ ಮಂಡಲದಿಂದ ಗುರುವಾರ ವಿನೂತನ ಪ್ರತಿಭಟನೆ ಮಾಡಲಾಯಿತು

ಹತ್ಯೆಗಳ ತನಿಖೆ ಏನಾಯಿತು

ಇಂಧನ ದರ ಏರಿಕೆ ಖಂಡಿಸಿ ಬೈಕ್ ಗೆ ಹಗ್ಗ ಕಟ್ಟಿ ಎಳೆದರೆ ಅಗತ್ಯವಸ್ತುಗಳ ಬೆಲೆ ಏರಿಕೆ ,ಹಗರಣ ರಾಜ್ಯದಲ್ಲಿ ನಡೆಯುತ್ತಿರುವ ನಿರಂತರ ಹತ್ಯೆಗಳ ವಿರುದ್ಧ ಯಾವುದಕ್ಕೂ ಸ್ಪಂದನೆ ಮಾಡದ ರಾಜ್ಯ ಕಾಂಗ್ರೇಸ್ ಸರಕಾರದ ಅಣಕು ಶವಯಾತ್ರೆ ಮಾಡಿ ಶವದ ಮುಂದೆ ಬೋಬ್ಬೆ ಹೊಡೆದು ಅಳುವ ಮೂಲಕ ವಿನೂತನ ಪ್ರತಿಭಟನೆ ಮುದ್ದೇಬಿಹಾಳ ಬಿಜೆಪಿ ಮಂಡಲದಿಂದ ಮಾಡಲಾಯಿತು ಪಟ್ಟಣದ ಬಸವೇಶ್ವರ ವೃತ್ತದಿಂದ ತಹಶೀಲ್ದಾರ ಕಚೇರಿಯ ವರಗೆ ಅಣಕು ಶವಯಾತ್ರೆ ಕಾಂಗ್ರೇಸ್ ಸರಕಾರಕ್ಕೆ ದಿಕ್ಕಾರ ಬೆಲೆ ಏರಿಕೆ ಕಡಿಮೆ ಮಾಡುವ ಕುರಿತು ಕಾಂಗ್ರೇಸ್ ಸರಕಾರಕ್ಕೆ ದಿಕ್ಕಾರ ಕೂಗಿದರು ಸರಕಾರ ಸತ್ತಿದೆ ಎಂದು ಬೋಬ್ಬೆ ಹೊಡೆದರು.

ಈ ವೇಳೆ ಪುರಸಭೆ ಸದಸ್ಯೆ ಸಂಗಮ್ಮ ದೇವರಳ್ಳಿ, ಬಿಜೆಪಿ ಮುಖಂಡ ಶಿವು ಕನ್ನೊಳ್ಳಿ, ಮಾತನಾಡಿ ಬೆಲೆ ಏರಿಕೆ ಖಂಡಿಸಿದರು ವಾಲ್ಮೀಕಿ ನಿಗಮ ಹಗರಣ ತನಿಖೆಗೆ ಆಗ್ರಹಿಸಿದರು.

ಮನವಿ ಪತ್ರವನ್ನು ಪುರಸಭೆ ಸದಸ್ಯೆ ಸಹನಾ ಬಡಿಗೇರ ಓದಿದರು ಮನವಿ ಪತ್ರವನ್ನು ಗ್ರೇಡ್ 2 ತಹಶೀಲ್ದಾರ ಜಿ.ಎನ್ ಕಟ್ಟಿಯವರ ಮೂಲಕ ರಾಜ್ಯಪಾಲರಿಗೆ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಡಾ.ವಿರೇಶ ಪಾಟೀಲ್, ವಿಕ್ರಮ್ ಓಸ್ವಾಲ್, ಉದಯಸಿಂಗ್ ರಾಯಚೂರು, ಶ್ರೀಶೈಲ್ ದೂಡಮನಿ, ರಾಜಶೇಖರ ಹೂಳಿ, ತಾಲ್ಲೂಕು ಕಾರ್ಯದರ್ಶಿ ಸಂಜಯ ಬಾಗೇವಾಡಿ,ರವಿ ತಾಳಿಕೋಟೆ , ಎಸ್

ಉದಯವಾಹಿನಿ ಚಿತ್ರ

ಎಸ್ ಶಿವಣಗಿ, ಶಂಕರ ಡಮನಾಳ, ಗಿರೀಶ ಪಾಟೀಲ್ ಮುರಾಳ, ಸಂತೋಷ ಬಾದರಬಂಡಿ, ರವೀಂದ್ರ ಬಿರಾದಾರ, ಜಗದೀಶ್ ಬಿರಾದಾರ, ಅಶೋಕ ವನಹಳ್ಳಿ , ರಾಮು ಪವಾರ, ಮುತ್ತಣ್ಣ ಹುಗ್ಗಿ, ಹಣಮಂತ ನಲವಡೆ, ರಾಜು ಬಳ್ಳೊಳ್ಳಿ, ಶೇಖರ ಢವಳಗಿ, ವಿಷ್ಣು ಗಂಗಾಪೂರ, ಈಶ್ವರ ಹೂಗಾರ, ಲಕ್ಷ್ಮಣ ಬಿಜ್ಜೂರ, ಶ್ರೀಕಾಂತ್ ಕೋಳೂರು, ಪರಶುರಾಮ ನಾಲತವಾಡ, ಮಂಜುನಾಥ ದೂಡಮನಿ, ಸುಭಾಷ್ ಕಟ್ಟಿಮನಿ ಕಾಳಗಿ, ಅಂಬಿ ಹಂಗರಗಿ, ಡಿ ಎಂ ಹುಣಶ್ಯಾಳ, ಎಂ ಬಿ ಹೊಕ್ರಾಣಿ, ಗುರರಾಜ ಮಾನೆ ,ಪಿ ಜಿ ಬಿರಾದಾರ, ಶರಣಪ್ಪ ನರಸಣಗಿ ಪ್ರೀತಿ ಕಂಬಾರ, ಕಾವೇರಿ,ಕಂಬಾರ,ನಾಗೇಶ ಜಾಧವ, ಶಿವ

> ಪಂಚ ಗ್ಯಾರಂಟಿಯನ್ನು ಜನರು ಕೇಳಿರಲಿಲ್ಲ ತಮ್ಮ ರಾಜಕೀಯ ಬೆಳಿಕಾಳು ಬೇಯಿಸಿಕೊಳ್ಳಲು ಕಾಂಗ್ರೇಸ್ ಗ್ಯಾರಂಟಿ ಘೋಷಿಸಿತು ಈಗ ಗ್ಯಾರಂಟಿ ನೀಡಲು ಅಗತ್ಯ ವಸ್ತುಗಳ ಬೆಲೆ ಯನ್ನು ಗಗನಕ್ಕೇರಿಸಿದೆ ಡಿಸೇಲ್ ಪೆಟ್ರೋಲ್ ಬೆಲೆ ಹೆಚ್ಚು ಮಾಡಿದೆ ಇದರಿಂದ ರಾಜ್ಯದ ಜನಸಾಮಾನ್ಯರಿಗೆ ಆರ್ಥಿಕ ಹೊರೆಯಾಗಿದೆ ರಾಜ್ಯದಲ್ಲಿ ಮುದ್ದೇಬಿಹಾಳ ಮತಕ್ಷೇತ್ರ ಸೇರಿದಂತೆ ಎಲ್ಲಡೆ ಬ್ರಹ್ಮಾಂಡ ಭ್ರಷ್ಟಾಚಾರ ನಡೆದಿದೆ ಎಂದು ರಾಜ್ಯ ಕಾಂಗ್ರೆಸ್ ಸರಕಾರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು **-ಜಗದೀಶ್ ಪಂಪಣ್ಣನವರ,** ಬಿಜೆಪಿ ಮಂಡಲ ಅಧ್ಯಕ್ಷ

> ಸೋಮನಗೌಡ ಬಿರಾದಾರ, ಸಂಗಮೇಶ ಮೇಟಿ ಕಾಂಗ್ರೇಸ್ ಸರಕಾರದಲ್ಲಿ ಭ್ರಷ್ಟಾಚಾರ ಹೆಚ್ಚಾಗಿದೆ ,ಬೆಲೆ ಏರಿಕೆ ಕುರಿತು ಭಾಷಣ ಮಾಡಿದ್ದ ಸಿದ್ದರಾಮಯ್ಯ ಅಧಿಕಾರಕ್ಕೆ ಬಂದ ಮೇಲೆ ಬೆಲೆ ಏರಿಕೆ ಮಾಡಿದ್ದಾರೆ. ಜನರಿಗೆ ಭರವಸೆ ನೀಡಿದ ಗ್ಯಾರಂಟಿ ತಲುಪಿಸಲು ಆಗದೆ ಇದ್ದರೆ ಕೈಬಿಡಿ ಆಂದ್ರ ಪ್ರದೇಶದಲ್ಲಿ ಮಹಿಳೆಯರಿಗೆ ಪ್ರತ್ಯೇಕ ಉಚಿತ ಬಸ್ ಮಾಡಿದ್ದಾರೆ ಆ ಬಸ್ ಬಿಟ್ಟು ಬೇರೆ ಬಸ್‌ನಲ್ಲಿ ಪ್ರಯಣಿಸಿದರೆ ಹಣ ನೀಡಬೇಕು ಅಂತಹ ವ್ಯವಸ್ಥೆ ಇಲ್ಲಿ ಆಗಬೇಕು, ರಾಜ್ಯದಲ್ಲಿ ನಡೆದ ಅನೇಕ ಹತ್ಯೆಗಳ ತನಿಖೆ ಏನಾಯಿತು ತಿಳಿಯದು ರಾಜ್ಯದಲ್ಲಿ ಕಾಂಗ್ರೇಸ್ ಸರಕಾರ ಉರಳುತ್ತದೆ ಮತ್ತೆ ಬಿಜೆಪಿ ಅಧಿಕಾರಕ್ಕೆ ಬರುತ್ತದೆ
> **-ಸಿದ್ದರಾಜ ಹೋಳಿ,** ಬಿಜೆಪಿ ಪಕ್ಷದ ಮುಖಂಡ

ಹತ್ತೂರ, ನಾಗೇಶ ಕವಡಿಮಟ್ಟಿ, ಧೂಳಪ್ಪ ಟಕ್ಕಳಕಿ,ಗುರು ರಾಯಗೂಂಡ, ಶ್ರೀಕಾಂತ್ ಹಿರೇಮಠ ಸೇರಿದಂತೆ ಮುದ್ದೇಬಿಹಾಳ ಮಂಡಲದ ವಿವಿಧ ಮೋರ್ಚಾಗಳ ಪದಾಧಿಕಾರಿಗಳ ಭಾಗವಹಿಸಿದ್ದರು.

ಬಸ್ ಘಟಕ ವ್ಯವಸ್ಥಾಪಕರು ಆಡಿದ್ದೇ ಆಟ ಮಾಡಿದ್ದೆ ಮಾರ್ಗ

• ಉದಯವಾಹಿನಿ ಯಡ್ರಾಮಿ

ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳು ನೀವು ಎಷ್ಟೇ ಕರೆ ಮಾಡಿ ಹೇಳಿ ಮತ್ತು ಮನವಿ ಮಾಡಿದರು ನಾನು ಮಾತ್ರ ಬಸ್ ಯಾವ ಸಮಯಕ್ಕೆ ಕಳಸತ್ತೀವಿ ಅವಾಗ ಬರಬೇಕು ಇಲ್ಲಂದ್ರ ಬಿಡಬೇಕು ಎನ್ನುವ ರೀತಿಯಲ್ಲಿ ಜೇವರ್ಗಿ ಬಸ್ ಘಟಕದ ವ್ಯವಸ್ಥಾಪಕ ಜೇಟ್ಟಿಪ್ಪ ದೊಡಮನಿ ಷಾ ನಾವು ಆಡಿದ್ದೇ ಆಟ ಮಾಡಿದ್ದೆ ಮಾರ್ಗ ಎನ್ನುವ ರೀತಿಯಲ್ಲಿ ವರ್ತಿಸುತ್ತಿದ್ದಾರೆ

ತಾಲ್ಲೂಕಿನ ವಡಗೇರಾ ಗ್ರಾಮಕ್ಕೆ ಬಸ್ ಶಾಲಾ ಮಕ್ಕಳ ಸಮಯಕ್ಕೆ ಬರುತ್ತಿಲ್ಲ ಎಂದು ವಿದ್ಯಾರ್ಥಿಗಳು ಮತ್ತು ಸ್ಥಳೀಯರು ಫೋನ್ ಕರೆ ಮೂಲಕ ಮನವಿ ಮಾಡಿದರು ಮತ್ತು ಮತ್ತು ಮನವಿ ಪತ್ರ ಕೊಟ್ಟರು ಶಾಸಕರ ಕಡೆಯಿಂದ ಫೋನ್ ಕರೆ ಮಾಡಿ ಹೇಳಿಸಿದರು ಗ್ರಾಮದಲ್ಲಿ ತಾತ್ಕಾಲಿಕವಾಗಿ ಬಸ್ ತಡೆದರು ಯಾವುದೇ ಕವಡೆ ಕಾಸಿನ ಕಿಮ್ಮತ ಕೊಡದೆ ಶಾಲಾ ಮಕ್ಕಳ ಸಮಯಕ್ಕೆ ಬಸ್ ಕಳಸದೆ ಬೇಕಾಬಿಟ್ಟಿ ಕಳಸುತ್ತಿರುವುದು ವಡಗೇರಾ ಗ್ರಾಮದ ಸಾರ್ವಜನಿಕರಿಗೂ ಮತ್ತು ವಿದ್ಯಾರ್ಥಿಗಳಿಗೆ ತುಂಬಾ ತೊಂದರೆ ಉಂಟಾಗಿದೆ. ವಡಗೇರಾ ಗ್ರಾಮ ಜೇವರ್ಗಿ ಮತಕ್ಷೇತ್ರದ ಕೊನೆಯ ಹಳ್ಳಿ ದಿವಂಗತ ಧರ್ಮಸಿಂಗ್ ಅವರ ಕಾಲದಿಂದ ಹಿಡಿದು ಇವಾಗ

ಉದಯವಾಹಿನಿ ಚಿತ್ರ

ಅವರ ಸುಪುತ್ರ ಅಜಯಸಿಂಗ್ ಕಾಲದಲ್ಲಿ ಒಂದೆ ಬಸ್ ಸಂಚಾರ ಮಾಡುತ್ತಿದೆ ಮೊದಲು ಸರಿಯಾದ ಸಮಯ ಪಾಲನೆ ಮಾಡಲಾಗುತ್ತಿತ್ತು ಇವಾಗ ನೆನಪು ಆದಾಗ ಬರುತ್ತೆ ಇಲ್ಲವಾದಲ್ಲಿ ಯಡ್ರಾಮಿಯವರೆಗೆ ಬಂದು ಮರಳಿ ಜೇವರ್ಗಿ ಹೋಗುತ್ತೆ ಅದಕ್ಕೆ ಶಾಸಕರು ನಮ್ಮ ಗ್ರಾಮಕ್ಕೆ ಹೆಚ್ಚುವರಿ ಬಸ್ ನಿಮ್ಮ ಕಡೆಯಿಂದ ಕೊಡಕ್ಕಾಗಲ್ಲ ಕಡೆ ಪಕ್ಷ ಇರು ಬಸ್ ಆದರೂ ಸರಿಯಾದ ಸಮಯಕ್ಕೆ ಕಳಸುವಂತೆ ಅಧಿಕಾರಿಗಳಿಗೆ ಸೂಚಿಸಬೇಕು ಎಂದು ವಡಗೇರಾ ಗ್ರಾಮದ ಸಾರ್ವಜನಿಕರ ಮನವಿ ಆಗಿದೆ ಈ ಒಂದು ಮನವಿಗೆ ಶಾಸಕರಾಗಲಿ ಮತ್ತು ಅಧಿಕಾರಿ ಆಗಲಿ ಸ್ಪಂದನೆ ಮಾಡದೆ ಹೋದಲ್ಲಿ ಜೇವರ್ಗಿ ಬಸ್ ಘಟಕ ಮತ್ತು ಶಾಸಕರ ಕಚೇರಿ ಮುಂದೆ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಪತ್ರಿಕೆ ಪ್ರಕಟಣೆ ಮೂಲಕ ಎಚ್ಚರಕೆಯನ್ನು ನೀಡಲಾಗಿದೆ.

ಹದಗೆಟ್ಟ ರಸ್ತೆಗಳು, ವಾಹನ ಸವಾರರ ಸಂಚಾರಕ್ಕೆ ಸಂಚಕಾರ

• ಉದಯವಾಹಿನಿ ಶಿರಹಟ್ಟಿ

ರಾಜ್ಯದಲ್ಲಿಯೇ ಹಿಂದುಳಿದ ತಾಲ್ಲೂಕು ಎಂಬ ಹಣೆಪಟ್ಟಿ ಕಟ್ಟಿಕೊಂಡಿರುವ ತಾಲ್ಲೂಕು ಕೇಂದ್ರವು ಇಲ್ಲಗಳ ಮಧ್ಯಯೇ ಸಾಗುತ್ತಿದೆ. ಮೂಲ ಸೌಕರ್ಯಗಳಿಂದ ವಂಚಿತವಾದ ತಾಲ್ಲೂಕಿನ ಜನರು ಸುಗಮ ಸಂಚಾರವಿಲ್ಲದೆ ಜೀವ ಕೈಯಲ್ಲಿ ಹಿಡಿದುಕೊಂಡು ಪ್ರಯಾಣಿಸುತ್ತಿದ್ದಾರೆ. ತಾಲ್ಲೂಕಿನ ಬಹುತೇಕ ಗ್ರಾಮೀಣ ಪ್ರದೇಶದ ರಸ್ತೆಗಳು ಹದಗೆಟ್ಟಿದ್ದು, ವಾಹನ ಸವಾರರ ಸಂಚಾರಕ್ಕೆ ಸಂಚಕಾರ ತಂದೊಡ್ಡಿವೆ.

ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಈ ಕುರಿತು ನಿರ್ಲಕ್ಷ್ಯ ವಹಿಸುತ್ತಿದ್ದು, ಸಾರ್ವಜನಿಕರ ಶಾಪಕ್ಕೆ ಗುರಿಯಾಗಿದ್ದಾರೆ.

ಓವರ್ ಲೋಡ್ ವಿಥೌಟ್ ಪಾಸ್: ತಾಲ್ಲೂಕಿನಲ್ಲಿ ಹೆಚ್ಚಾಗಿರುವ ಕ್ರಷರ್‌ಗಳ ಹಾವಳಿ, ಅಕ್ರಮ ಮರಳು ದಂದೆಯಿಂದ ಓವರ್ ಲೋಡ್ ಹೊತ್ತ ಟಿಪ್ಪರ್‌ಗಳು ಹಗಲಿರುಳು ಸಂಚರಿಸುತ್ತಿವೆ. ಮಣಬಾರವನ್ನು ಹೊತ್ತು ಸಾಗುವ ಟಿಪ್ಪರ್‌ಗಳ ಸಂಚಾರದಿಂದ ರಸ್ತೆಗಳಲ್ಲಿ ತಗ್ಗು ಗುಂಡಿಗಳು ಮನೆ ಮಾಡಿವೆ. ಕೊಗನೂರು ಗ್ರಾಮದ

ಉದಯವಾಹಿನಿ ಚಿತ್ರ

ರಸ್ತೆಯಲ್ಲಂತೂ ಮೊಣಕಾಲದವರೆಗೆ ಗುಂಡಿಗಳು ಬಿದ್ದರೂ ಯಾರೊಬ್ಬ ಜನಪ್ರತಿನಿಧಿಯಾಗಲಿ, ಅಧಿಕಾರಿಯಾಗಲಿ ದುರಸ್ತಿ ಮಾಡುವ ಗೋಜಿಗೆ ಹೋಗುತ್ತಿಲ್ಲ.

ತಾಲ್ಲೂಕಿನಲ್ಲಿ ಅಲ್ಪಸ್ವಲ್ಪ ಉಳಿದ ಡಾಂಬರ್ ರಸ್ತೆಗಳು ಮಳೆ ಹಾಗೂ ಟಿಪ್ಪರ್ ಸಂಚಾರದಿಂದ ಕಿತ್ತು ಹೋಗಿವೆ. ಪ್ರಸ್ತುತ ಮಳೆಗಾಲ ಇರುವುದರಿಂದ ಮಳೆ ನೀರು ರಸ್ತೆಯ ಗುಂಡಿಗಳಲ್ಲಿ ಶೇಖರಣೆಗೊಂಡು ಅದನ್ನು ಇಮ್ಮಡಿಗೊಳಿಸುತ್ತಿದೆ.

ಹೀಗೆ ಬಹುತೇಕ ಗ್ರಾಮೀಣ ಪ್ರದೇಶದ ರಸ್ತೆಗಳು ಕಿತ್ತು ಹೋಗಿ ಕಚ್ಚಾ ರಸ್ತೆಗಳಾಗಿ ಮಾರ್ಪಾಡಾಗಿವೆ. ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇಂತಹ ರಸ್ತೆಯಲ್ಲಿಯೇ ನಿತ್ಯ ಸಂಚರಿಸಿದರೂ ಜಾಣಕುರುಡುತನ ಪ್ರದರ್ಶನ ಮಾಡುತ್ತಿರುವುದು ಅವರ ಬೇಜವ್ದಾರಿ ಆಡಳಿತಕ್ಕೆ ಹಿಡಿದ ಕೈಗನ್ನಡಿಯಾಗಿದೆ.

ರಸ್ತೆ ಅಭಿವೃದ್ಧಿ ಪಡಿಸುವಂತೆ ಹಲವು ಬಾರಿ ಮನವಿ ಮಾಡಿದರೂ ಜನಪ್ರತಿನಿಧಿಗಳು ಅಧಿಕಾರಿಗಳು ಸ್ಪಂದಿಸಿಲ್ಲ. ಶೀಘ್ರದಲ್ಲಿ ದುರಸ್ತಿ ಮಾಡಿದರೆ ಅನುಕೂಲ ಎಂದು ತಂಗೋಡ ಗ್ರಾಮಸ್ಥರು ಆರೋಪಿಸಿದರು.

ಹದಗೆಟ್ಟ ಗ್ರಾಮೀಣ ರಸ್ತೆಗಳು

ತಾಲ್ಲೂಕಿನ ತಂಗೋಡ, ಕೊಗನೂರು, ತೊಳಲಿ, ಚವಡಾಳ, ಗೋವನಕೊಪ್ಪ, ಅಲಗಿಲವಾಡ, ವಡವಿ, ಸುಗನ, ಮಾಗಡಿ ಸೇರಿದಂತೆ ಬಹುತೇಕ ಗ್ರಾಮೀಣ ಪ್ರದೇಶದಿಂದ ಜಿಲ್ಲಾ ಮುಖ್ಯ ರಸ್ತೆ, ರಾಜ್ಯ ಹೆದ್ದಾರಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳು ಹದಗೆಟ್ಟಿವೆ. ರಸ್ತೆಯುದ್ದಕ್ಕೂ ತಗ್ಗು ಗುಂಡಿಗಳು ಬಿದ್ದು, ವಾಹನ ಸವಾರರು ಕೈಯಲ್ಲಿ ಜೀವ ಹಿಡಿದು ಪ್ರಯಾಣಿಸುವ ಪರಿಸ್ಥಿತಿ ಎದುರಾಗಿದೆ.

ನಗರದ ಕುಡಿಯುವ ನೀರಿಗಾಗಿ ಜನತೆ ಆತಂಕ ಪಡಬೇಕಿಲ್ಲ: ಮಂಜುನಾಥ್

• ಉದಯವಾಹಿನಿ ಸಿಂಧನೂರಿನ

ತುರವಿಹಾಳ ಕೆರೆ, ಸಣ್ಣಕೆರೆ, ದೊಡ್ಡ ಕೆರೆಗೆ ತುಂಗಭದ್ರ ಎಡದಂಡೆ ಕಾಲುವೆಯಿಂದ ಬಿಡುಗಡೆ ಗೊಳಿಸಲಾಗಿರುವ ಕುಡಿಯುವ ನೀರನ್ನು ತುಂಬುವ ಪ್ರಕ್ರಿಯೆಯು ದಿನಾಂಕ18/06/2024 ರಿಂದ ಚಾಲನೆಯಲ್ಲಿದೆ.

ನಗರಸಭೆಯ ನೀರು ಸರಬರಾಜು ಸಿಬ್ಬಂದಿಗಳು ಹಗಲು ರಾತ್ರಿ ಎನ್ನದೆ ಕೆರೆಗೆ ನೀರು ತುಂಬಿಸುತ್ತಿದ್ದಾರೆ, ತುರುವಿಹಾಳ ಕೆರೆಯಲ್ಲಿ ಹೀಗಿರುವ 650 ಎಚ್‌ಪಿ ಮೋಟಾರ್ ಪಂಪ್‌ಗಳ ಜೊತೆಗೆ ಹೆಚ್ಚುವರಿಯಾಗಿ 250ಎಚ್‌ಪಿ ಮೋಟಾರ್ ಪಂಪ್‌ಗಳನ್ನು ಎಡದಂಡೆ ಕಾಲುವೆಗೆ ಅಳವಡಿಸಲಾಗಿದೆ,

ಸಂಪೂರ್ಣ ಕೆರೆ ತುಂಬಲು 28 ದಿನಗಳು ಬೇಕಾಗಿದ್ದು ಸಿಂಧನೂರು ತಾಲ್ಲೂಕಿಗೆ ಐದು ದಿನಗಳ ವರೆಗೆ ಮಾತ್ರ ಕೆರೆ ತುಂಬುವ ಅವಕಾಶವನ್ನು ನೀಡಿದ್ದಾರೆ ಹೀಗಾಗಿ ಸಿಬ್ಬಂದಿಗಳು ಶ್ರಮವಹಿಸಿ

ಉದಯವಾಹಿನಿ ಚಿತ್ರ

ಕೆರೆಗೆ ನೀರನ್ನು ತುಂಬುತ್ತಿದ್ದಾರೆ, ಕೆರೆ ತುಂಬುವಿಕೆ ಪ್ರಕ್ರಿಯೆಯನ್ನು ಮಾನ್ಯ ಯೋಜನಾ ನಿರ್ದೇಶಕರಾದ ಶ್ರೀ ಜಗದೀಶ ಗಂಗಣ್ಣನವರು, ಜಿಲ್ಲಾ ನಗರ ಅಭಿವೃದ್ಧಿ ಕೋಶ ರಾಯಚೂರು ಹಾಗೂ ಮಾನ್ಯ ತಾಲ್ಲೂಕು ದಂಡಾಧಿಕಾರಿಗಳಾದ ಶ್ರೀ ಅರುಣ್ ದೇಸಾಯಿ ರವರು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ.

ಮಾನ್ಯ ಶಾಸಕರು ನಗರಸಭೆಯ ಸರ್ವ ಸದಸ್ಯರು ಕೆರೆ ತುಂಬಿವಿಕೆ ಪ್ರಕ್ರಿಯೆಯನ್ನು ಪರಿಶೀಲಿಸಿ ಮೇಲ್ವಿಚಾರಣೆ ನಡೆಸಿದ್ದಾರೆ.

ಕುಡಿಯುವ ನೀರು ತುಂಬುವ ಪ್ರಕ್ರಿಯೆಗೆ ಚಾಲನೆ

ತುರುವಿಹಾಳ ಕೆರೆಯ ಜೊತೆಗೆ ಗ್ರಾವಿಟಿ ಮೂಲಕ ಸಿಂಧನೂರಿನ ಸಣ್ಣ ಮತ್ತು ದೊಡ್ಡ ಕೆರೆಯನ್ನು ಕೂಡ ತುಂಬಿಸುವ ಪ್ರಕ್ರಿಯೆ ಚಾಲನೆಯಲ್ಲಿದೆ ಹಾಗಾಗಿ ಜನತೆ ಕುಡಿಯುವ ನೀರಿಗಾಗಿ ಯಾವುದೇ ಆತಂಕ ಪಡಬೇಕಾಗಿಲ್ಲ, ತುಂಗಭದ್ರಾ ಎಡದಂಡೆ ಕಾಲುವೆಯಿಂದ ಹೊಸದಾಗಿ ನೀರು ಬಂದಿದ್ದು ನೀರನ್ನು ಶುದ್ಧೀಕರಿಸಿ ಸರಬರಾಜು ಮಾಡಲಾಗುತ್ತಿದೆ ಆದರೂ ಆರೋಗ್ಯದ ಹಿತದೃಷ್ಟಿಯಿಂದ ನೀರನ್ನು ಸೋಸಿ ಕಾಯಿಸಿ ಹಾರಿಸಿ ಕುಡಿಯಲು ಸಾರ್ವಜನಿಕರಲ್ಲಿ ಕೋರಿದೆ. ಸರಬರಾಜು ಮಾಡುತ್ತಿರುವ ನೀರನ್ನು ಪರೀಕ್ಷೆಗೆ ಒಳಪಡಿಸಿ ನೀರು ಕುಡಿಯಲು ಯೋಗ್ಯವಿದೆ ಎಂದು ಸಂಬಂಧಿಸಿದ ಅಧಿಕಾರಿಗಳು ದೃಢೀಕರಿಸಿದ್ದಾರೆ. ಕೆರೆ ತುಂಬುವಿಕೆ ಪ್ರಕ್ರಿಯೆಯನ್ನು ಯಾವುದೇ ಸಾರ್ವಜನಿಕರು ಮುಕ್ತವಾಗಿ ಬಂದು ಪರಿಶೀಲಿಸಬಹುದಾಗಿದೆ.

ಫೋನ್ ಪೇ ವೆರಿಫೈ ಹೆಸರಲ್ಲಿ 40 ಲಕ್ಷ ವಂಚನೆ: ಬಂಧನ

• ಉದಯವಾಹಿನಿ ಬೀದರ್

ಫೋನ್ ಪೇ ವೇರಿಫೈ' ಹೆಸರಲ್ಲಿ ರಾಜ್ಯದ ವಿವಿಧ ಜಿಲ್ಲೆಗಳ 79 ಜನರಿಂದ 40 ಲಕ್ಷ ವಂಚಿಸಿದ ಆರೋಪಿಯನ್ನು ಬೀದರ್ ಜಿಲ್ಲಾ ಪೊಲೀಸರು ಬಂಧಿಸಿ, ಆತನ ಬಳಿ ಯಿಂದ ಆರು ಮೊಬೈಲ್ ಗಳು, 45 ಸಿಮ್ ಕಾರ್ಡ್‌ಗಳನ್ನು ಬುಧವಾರ ಜಪ್ತಿ ಮಾಡಿಕೊಂಡಿದ್ದಾರೆ. ನಗರದ ಕೆಎಚ್‌ಬಿ ಕಾಲೊನಿ ನಿವಾಸಿ ಶಿವಪ್ರಸಾದ ಶಂಕ್ರೆಪ್ಪ ಮಾಡಗಿ ಬಂಧಿತ ಆರೋಪಿ.

ಜನರಿಂದ ವಂಚಿಸಿದ 40 ಲಕ್ಷವನ್ನು ಐಷಾರಾಮಿ ಜೀವನ ನಡೆಸಲು ಖರ್ಚು ಮಾಡಿದ್ದಾನೆ. ಪೊಲೀಸರು 12 ಸಾವಿರವಷ್ಟೇ ಆತನ ಬಳಿಯಿಂದ ಜಪ್ತಿ ಮಾಡಿದ್ದಾರೆ.

ವಿವಿಧ ಇಲಾಖೆಗಳ ಸರ್ಕಾರಿ ನೌಕರರ ದತ್ತಾಂಶ ಗಳನ್ನು ಗೂಗಲ್‌ನಲ್ಲಿ ಸರ್ಚ್ ಮಾಡಿ, ಅವರ ಮೊಬೈಲ್ ಸಂಖ್ಯೆಗಳನ್ನು ಸಂಗ್ರಹಿಸಿ, ಅವರಿಗೆ ಕರೆ ಮಾಡಿ ವಂಚಿಸುತ್ತಿದ್ದ. ತಾನು ಎಸ್‌ಬಿಐ ಮುಖ್ಯ ಕಚೇರಿಯಿಂದ ಕರೆ ಮಾಡುತ್ತಿದ್ದೇನೆ ಎಂದು ಹೇಳಿ, ಫೋನ್ ಪೇನಲ್ಲಿ ಯುಪಿಐ ಐ.ಡಿ ವೇರಿಫೈ ಮಾಡಿ, ಹಣದ ಲಿಮಿಟ್ ಸೆಟ್ ಮಾಡಲು ಹೇಳುತ್ತಿದ್ದ. ಅವರ ಮೂಲಕವೇ ಎಲ್ಲಾ ಮಾಡಿಸಿ, ಚಿನ್ನಾಭರಣ ಹಾಗೂ ಮೊಬೈಲ್ ಮಳಿಗೆಗಳ ಯುಪಿಐಗೆ ಹಣ ವರ್ಗಾಯಿಸಿ, ಸ್ಕ್ರೀನ್ ಶಾಟ್ ತರಿಸಿಕೊಳ್ಳುತ್ತಿದ್ದ. ಬಳಿಕ ಅದನ್ನು ಮಳಿಗೆಯವರಿಗೆ ತೋರಿಸಿ ಚಿನ್ನದ ನಾಣ್ಯ ಹಾಗೂ ಮೊಬೈಲ್‌ಗಳನ್ನು ಖರೀದಿಸಿ, ಒಎಲ್‌ಎಕ್ಸ್ ನಲ್ಲಿ ಮಾರಾಟ ಮಾಡಿ ಐಷಾರಾಮಿ ಜೀವನ ನಡೆಸುತ್ತಿದ್ದ' ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚನ್ನಬಸವಣ್ಣ ಎಸ್.ಎಲ್. ತಿಳಿಸಿದ್ದಾರೆ. 'ಮೇ 29ರಂದು ಬಸವಕಲ್ಯಾಣ ತಾಲ್ಲೂಕಿನ ಯಳವಂತಗಿ ಗ್ರಾಮದ ಸಂಗಪ್ಪ ಮಾದಪ್ಪ ಕಲ್ಯಾಣ ಅವರಿಗೆ 75 ಸಾವಿರ ವಂಚಿಸಿದ್ದ. ಸಂಗಪ್ಪ ಅವರು ಈ ಕುರಿತು ಠಾಣೆಗೆ ದೂರು ನೀಡಿದ್ದರು. ಮುಡಬಿ ಪೊಲೀಸ್ ಠಾಣೆಯಲ್ಲಿ ಐ.ಟಿ ಕಾಯ್ದೆ ಅಡಿ ವಂಚನೆ ಪ್ರಕರಣ ದಾಖಲಿಸಿಕೊಂಡು, ತನಿಖೆಗೆ ವಿಶೇಷ ತಂಡ ರಚಿಸಲಾಗಿತ್ತು. ಸೈಬರ್ ಪೊಲೀಸರ ನೆರವಿನಿಂದ ಆರೋಪಿಯನ್ನು ಬಂಧಿಸಲಾಗಿದೆ.

ದಕ್ಷಿಣ ಕನ್ನಡ: ಎರಡಂಕಿಗೆ ಇಳಿದ ಮಲೇರಿಯ

• ಉದಯವಾಹಿನಿ ಮಂಗಳೂರು

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	10:30 ರಿಂದ 12:00
ಗುಳಿಕ ಕಾಲ	ಬೆಳಿಗ್ಗೆ	07:30 ರಿಂದ 09:00
ಯಮಗಂಡ ಕಾಲ	ಮಧ್ಯಾಹ್ನ	03:00 ರಿಂದ 04:30

ಮೇಷ ವ್ಯಾಪಾರಕ್ಕೆ ಸಂಬಂಧಿಸಿದ ಹೊಸ ಯೋಜನೆಗಳಿಗೆ ಸಕಾರಾತ್ಮಕವಾಗಿ ಮತ್ತು ತ್ವರಿತವಾಗಿ ಪ್ರತಿಕ್ರಿಯಿಸಿ. ಅವರು ನಿಮ್ಮ ಪರವಾಗಿರುತ್ತವೆ. ನೀವು ಪರಿಶ್ರಮದ ಮೂಲಕ ಅವುಗಳನ್ನು ನನಸು ಮಾಡಿಕೊಳ್ಳಬೇಕು.

ವೃಷಭ ಒಳ್ಳೆಯ ದಿನ ಕಾನೂನು ಸಲಹೆ ಪಡೆಯಲು ವಕೀಲರನ್ನು ಭೇಟಿ ಮಾಡಿ. ಈ ದಿನ ನಿಮ್ಮ ಎಂದಿನ ವೈವಾಹಿಕ ಜೀವನದಲ್ಲಿ ವಿಶೇಷವಾಗಿರುತ್ತದೆ, ನೀವು ಇಂದು ಅಸಾಮಾನ್ಯವಾದದ್ದೇನಾದರೂ ಅನುಭವಿಸುತ್ತೀರಿ.

ಮಿಥುನ ನಿಮ್ಮ ದೈಹಿಕ ರಚನೆಯನ್ನು ಕಾಯ್ದುಕೊಳ್ಳಲು ನೆರವಾಗುವ ಕೆಲವು ಕ್ರೀಡಾ ಚಟುವಟಿಕೆಗಳನ್ನು ನೀವು ಇಂದು ಆನಂದಿಸಬಹುದು. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ.

ಕರ್ಕಾಟಕ ನೀವು ನಿಮ್ಮ ಮನೆಯ ಯಾವುದೇ ಸದಸ್ಯರಿಂದ ಹಣವನ್ನು ಸಾಲ ತೆಗೆದುಕೊಂಡಿದ್ದರೆ ಅದನ್ನು ಇಂದು ಮರುಪಾವತಿಸಿ ಇಲ್ಲದಿದ್ದರೆ ನಿಮ್ಮ ವಿರುದ್ಧವಾಗಿ ಕಾನೂನು ಪ್ರಕರಣ ಮಾಡಬಹುದು.

ಸಿಂಹ ಮಕ್ಕಳ ಅವರ ಸಾಧನೆಗಳಿಂದ ನೀವು ಹೆಮ್ಮೆ ಪಡುವಂತೆ ಮಾಡಬಹುದು. ವ್ಯಾಪಾರ ಸಹವರ್ತಿಗಳು ಬೆಂಬಲ ನೀಡುತ್ತಾರೆ ಮತ್ತು ನೀವು ಬಾಕಿಯಿರುವ ಕೆಲಸಗಳನ್ನು ಪೂರ್ಣಗೊಳಿಸಲು ಒಟ್ಟಿಗೆ ಕೆಲಸ ಮಾಡುತ್ತೀರಿ.

ಕನ್ಯಾ ಇಂದಿನ ದಿನದಲ್ಲಿ ನೀವು ತುಂಬಾ ಕಾರ್ಯನಿರತರಾಗಿರುತ್ತೀರಿ ಆದರೆ ಸಂಜೆಯ ಸಮಯದಲ್ಲಿ ನೀವು ಇಷ್ಟಪಡುವ ಕೆಲಸಗಳಿಗಾಗಿಯೂ ನಿಮ್ಮ ಹತ್ತಿರ ಸಾಕಷ್ಟು ಸಮಯ ಉಳಿದಿರುತ್ತದೆ.

ತುಲಾ ಇಂದು ನಿಮ್ಮ ಮನಸ್ಸು ಶಾಂತವಾಗಿರುತ್ತದೆ, ಅದು ದಿನವಿಡೀ ನಿಮಗೆ ಪ್ರಯೋಜನವನ್ನು ನೀಡುತ್ತದೆ. ನೀವು ಇಂದು ನಿಮ್ಮ ಸಂಗಾತಿಯ ಒಂದು ನಿಜವಾಗಿಯೂ ಅದ್ಭುತ ಸಂಜೆ ಕಳೆಯಲು ಇರಬಹುದು.

ವೃಶ್ಚಿಕ ನಿಮ್ಮ ಆರೋಗ್ಯದ ಬಗ್ಗೆ ಚಿಂತಿಸುವುದು ನಿಮ್ಮ ಕಾಯಿಲೆಯನ್ನು ಇನ್ನಷ್ಟು ಉಲ್ಬಣಿಸಬಹುದಾದ್ದರಿಂದ ಹಾಗೆ ಮಾಡಬೇಡಿ. ಹೂಡಿಕೆ ಶಿಫಾರಸು ಮಾಡಲಾಗಿದ್ದರೂ ಸರಿಯಾದ ಸಲಹೆ ಪಡೆಯಬೇಕು.

ಧನಸ್ಸು ನಿಮ್ಮ ಮುಗ್ಧವರ್ತನೆ ಕುಟುಂಬದ ಸಮಸ್ಯೆಯನ್ನು ಪರಿಹರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ನೀವು ಯಾವಾಗಲೂ ಪರಸ್ಪರ ಪ್ರೀತಿಯಲ್ಲಿದ್ದೀರೆಂದು ಅನಿಸುವುದರಿಂದ ಭೌತಿಕ ಅಸ್ತಿತ್ವಕ್ಕೆ ಯಾವುದೇ ಮಹತ್ವ ವಿರುವುದಿಲ್ಲ.

ಮಕರ ಇತರರನ್ನು ಟೀಕಿಸುವ ನಿಮ್ಮ ಅಭ್ಯಾಸದಂದಾಗಿ ಇಂದು ನೀವೇ ಕೆಲವು ಟೀಕೆಗಳನ್ನು ಎದುರಿಸುವ ಸಾಧ್ಯತೆಗಳಿವೆ. ನಿಮ್ಮ ಹಾಸ್ಯಪ್ರಜ್ಞೆ ಜಾಗೃತವಾಗಿರಲಿ ಮತ್ತು ನಿಮ್ಮ ಸ್ವರಕ್ಷಣೆ ಕಡಿಮೆಯಿರಲಿ.

ಕುಂಭ ಒಬ್ಬ ಹಳೆಯ ಸ್ನೇಹಿತ ದಿನದ ಅಂತ್ಯದಲ್ಲಿ ಭೇಟಿ ನೀಡುತ್ತಾರೆ. ನೀವು ಪ್ರಣಯದ ಮನೋಭಾವ ಹೊಂದಿರುತ್ತೀರಿ– ನೀವು ಮತ್ತು ನಿಮ್ಮ ಪ್ರೀತಿಪಾತ್ರರಿಗಾಗಿ ವಿಶೇಷ ಯೋಜನೆಗಳನ್ನು ಮಾಡಲು ಮರೆಯಬೇಡಿ.

ಮೀನ ಮನೋಬಲದ ನಿಮ್ಮ ಕೊರತೆ ನಿಮ್ಮನ್ನು ಭಾವನಾತ್ಮಕ ಮತ್ತು ಮಾನಸಿಕ ವರ್ತನೆಯ ಬಲಿಪಶುವಾಗಿ ಮಾಡಬಹುದು. ನೀವು ಹಣಕಾಸಿನ ಲಾಭ ತರುವ ಅದ್ಭುತವಾದ ಹೊಸ ಕಲ್ಪನೆಗಳನ್ನು ಪ್ರಸ್ತುತಪಡಿಸುತ್ತೀರಿ.

ಮರದ ಕೆಳಗಡೆ ಪಾಠ ಪ್ರವಚನ: ವಿದ್ಯಾರ್ಥಿಗಳ ಗೋಳು

ಇದೇನು ಪುರಾಣದ ಕಥೆಯಲ್ಲ, 21ನೇ ಶತಮಾನದಲ್ಲೂ ವಿದ್ಯಾರ್ಥಿಗಳು ಬಯಲಿನಲ್ಲಿ ಕುಳಿತು ಪಾಠ ಕಲಿಯಬೇಕಾದ ದುಸ್ಥಿತಿ

ಇಲಿಯಾಸ್ ಪಟೇಲ್. ಬ
- ಉದಯವಾಹಿನಿ ಯಾದಗಿರಿ

ಮರದ ಕೆಳಗೆ ಪಾಠ ಹಾಗಂತ ಇದೇನು ಪುರಾಣದ ಕಥೆಯಲ್ಲ. 21ನೇ ಶತಮಾನದಲ್ಲು ವಿದ್ಯಾರ್ಥಿಗಳು ಬಯಲಿನಲ್ಲಿ ಕುಳಿತು ಪಾಠ ಕಲಿಯಬೇಕಾದ ದುಸ್ಥಿತಿ ಇದೆ. ಈ ಮಕ್ಕಳಿಗೆ ನಿತ್ಯವೂ ನಡೆಯುತ್ತೆ ಮರದ ನೆರಳಲ್ಲಿ ನಡೆಯುತ್ತೆ ಪಾಠ-ಪ್ರವಚನ. ಒಂದೇ ಕೊಠಡಿಯಲ್ಲಿ ನಡೆಯುತ್ತೆ ತರಗತಿ. ಶಾಲೆಯಲ್ಲಿನ ಮೂಲಭೂತ ಸೌಕರ್ಯದ ಕೊರತೆಯಿಂದ ಮಕ್ಕಳು ಸರ್ಕಾರಿ ಶಾಲೆ ಬಿಟ್ಟು ಹೋಗ್ತಿದ್ದಾರೆ.

ಇನ್ನಾದ್ರೂ ಒಂದು ಕೊಠಡಿ ನಿರ್ಮಿಸಿಕೊಡಿ ಅಂತಾ ಗ್ರಾಮಸ್ಥರು ಸರ್ಕಾರದ ಅಂಗಲಾಚ್ತಿದ್ದಾರೆ. ಜನ ಪ್ರತಿನಿಧಿಗಳಿಗೆ ಇದೆಲ್ಲಾ ಕಾಣ್ತಾ ಇಲ್ಲ ಅನ್ನೋದೇ ಒಂದು ದೊಡ್ಡ ದುರಂತವಾಗಿದೆ. ಇದು ಗಿರಿನಾಡು ಯಾದಗಿರಿ ಜಿಲ್ಲೆಯ ವಡಗೇರಾ ತಾಲ್ಲೂಕಿನ ಗುಂಡ್ಲೂರು ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯೊಂದರ ದುಸ್ಥಿತಿ. ರಾಜ್ಯದ್ಯಂತ ಈಗಾಗಲೇ ಶಾಲೆ ಆರಂಭವಾಗಿವೆ, ಸರ್ಕಾರ ಶಾಲೆಗೆ ಬನ್ನಿ ಅಂತ ಒಂದು ಕಡೆ ಹೇಳಿದರೆ, ಈ ನಡುವೆ ಸರ್ಕಾರಿ ಶಾಲೆಯಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕಾರ್ಯಗಳು, ಮೂಲಭೂತ ಸೌಕರ್ಯಗಳ ಬಗ್ಗೆ ಚಿಂತನೆ ಮಾಡುವ ಕೆಲಸಕ್ಕೆ ಯಾರೂ ಕೂಡ ಮುಂದಾಗ್ತಿಲ್ಲ. ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಒಂದರಿಂದ ಐದನೇ ತರಗತಿಯವರೆಗೆ ಇದ್ದು ಕೇವಲ ಎರಡು ಕೊಠಡಿಗಳಿವೆ.

ಮಳೆ ನೀರು ಬಂದ್ರೆ ತುಂಬಿಕೊಳ್ಳುತ್ತೆ ಜ್ಞಾನ ದೇಗುಲ: ಶಾಲೆಯ ಕೊಠಡಿಗೆ ನೀರು ರಜೆ ಫಿಕ್ಸ್!

ಈ ಶಾಲೆಯಲ್ಲಿ 90. ಮಕ್ಕಳು ವಿದ್ಯಾಭ್ಯಾಸ ಮಾಡುತ್ತಾರೆ ಈ ಶಾಲೆಯಲ್ಲಿ ಎರಡು ಕೋಣೆಗಳಿದ್ದು ಒಂದು ಕೋಣೆಯಲ್ಲಿ ಪಾಠ ಮಾಡುವುದರ ಜೊತೆಗೆ ಅಲ್ಲಿಯೇ ಸ್ವಲ್ಪ ಜಾಗದಲ್ಲಿ ಶಾಲೆಗೆ ಸಂಬಂಧಿಸಿದ ದಾಖಲಾತಿ ಪುಸ್ತಕ ಇನ್ನಿತರ ವಸ್ತುಗಳನ್ನು ಇಡುವ ವ್ಯವಸ್ಥೆ ಮತ್ತು ಕಾರ್ಯಾಲಯ ಇದರಲ್ಲಿಯೇ ಮಾಡಿಕೊಂಡಿದ್ದಾರೆ, ಪಕ್ಕದ ಇನ್ನೊಂದು ಕೋಣೆ ಇದೆ ಅಲ್ಲಿ ಬೆಳಗ್ಗೆಯಿಂದ ಬಿಸಿ ಊಟ ಮಾಡುವ ಕಾರಣ ಮಧ್ಯಾಹ್ನದವರೆಗೆ ಮಕ್ಕಳಿಗೆ ಮರದ ಕೆಳಗೆ ಪಾಠ ಭೋಧನೆ ಹೇಳಿಕೂಡುತ್ತಾರೆ ಬಿಸಿ ಊಟದ ಅಡುಗೆ ಮುಗಿದ ಮೇಲೆ ಮಧ್ಯಾಹ್ನದಿಂದ ಅಡುಗೆ ಕೋಣೆಯಲ್ಲಿಯೇ ಮಕ್ಕಳಿಗೆ ಪಾಠ ಬೋಧನೆ ಮಾಡುತ್ತಾರೆ ಅಲ್ಲಿ ಪಕ್ಕದಲ್ಲಿಯೇ ಅಡುಗೆ ಅನಿಲ ಗ್ಯಾಸ್ ಸಿಲೆಂಡರ್‌ಗಳು ಇವೆ ಮಕ್ಕಳು ಜೀವ ಕೈಯಲ್ಲಿ ಹಿಡಿದುಕೊಂಡು ಪಾಠ ಕೇಳುತ್ತಾರೆ. ಮಳೆ ಬಂದರಂತು ಒಂದೇ ಕೋಣೆಯಲ್ಲಿ ಎಲ್ಲಾ ಮಕ್ಕಳನ್ನು ಕೊಡಿಸುತ್ತಾರೆ. ಐದನೇ ತರಗತಿವರೆಗೆ ಮಂಜೂರಾಗಿರುವ ತರಗತಿಗಳಿಗೆ ತಕ್ಕಂತೆ ಶಾಲಾ ಕೊಠಡಿಗಳು ಇಲ್ಲದಿರುವುದು ಶಿಕ್ಷಕರಲ್ಲಿ ಹಾಗು ಅಧಿಕಾರಿಗಳು ಮತ್ತು ಶಾಲಾ ಕೊಣೆಗಳ ಕೊರತೆಯಿದ್ದರೂ ಅಧಿಕಾರಿಗಳು ದಿವ್ಯ ನಿರ್ಲಕ್ಷ್ಯ ವಹಿಸುತ್ತಿರುವುದು ಸಾರ್ವಜನಿಕ ವಲಯದಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ.

ಉದಯವಾಹಿನಿ ಚಿತ್ರ

ಸರಕಾರಿ ಬಯಲು ಶಾಲೆಯ ಕಥೆ

ಉದಯ ವಾಹಿನಿ ಹೈಲೆಟ್ಸ್
- ಸರಕಾರಿ ಶಾಲೆಯ ದುಸ್ಥಿತಿ
- ಶಾಲೆ ಆರಂಭ ಮರದ ಕೆಳಗೆ ಪಾಠಪ್ರವಚನ
- ವಡಗೇರಾ ತಾಲ್ಲೂಕಿನ ಬಯಲು ಶಾಲೆಯ ಕಥೆ
- ಪ್ರತಿನಿಧಿಗಳು ದಿವ್ಯ ನಿರ್ಲಕ್ಷ್ಯ, ವಿದ್ಯಾರ್ಥಿಗಳ ಪ್ರತಿ ನಿತ್ಯ ಗೋಳು

ಕೂಡಲೆ ಅಧಿಕಾರಿಗಳು ಮತ್ತು ಶಾಸಕರು ಶಾಲೆಗೆ ಭೇಟಿ ನೀಡಿ ಪರಿಶೀಲನೆ ಮಾಡಿ ಮಕ್ಕಳಿಗೆ ಸೂಕ್ತ ಶಾಲಾ ಕಟ್ಟಡ ಹಾಗೂ ಶಾಲೆಗೆ ತಡೆಗೋಡೆ, ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಮುಂದಾಗಬೇಕು ಒಂದು ವೇಳೆ ವಿಳಂಬ ಮಾಡಿದ್ದಲ್ಲಿ ರಾಜ್ಯ ರೈತ ಸಂಘ ಹಸಿರು ಸೇನೆ ವತಿಯಿಂದ ಶಾಲೆಗೆ ಬೀಗ ಜಡಿದು ಪಾಲಕರು ಮಕ್ಕಳೊಂದಿಗೆ ಉಪವಾಸ ಸತ್ಯಾಗ್ರಹ ಮಾಡಲಾಗುವುದು.

– ಮಲ್ಲಣ್ಣಗೌಡ ಹಗರಟಗಿ, (ರೈತ ಸಂಘದ ಜಿಲ್ಲಾಧ್ಯಕ್ಷ)

ರಾಜ್ಯ ಮಕ್ಕಳ ಹಕ್ಕು ಆಯೋಗದ ಸದಸ್ಯರ ಭೇಟಿ

- ಶಿವರಾಜಕುಮಾರ ವಾಲಿಕಾರ
- ಉದಯವಾಹಿನಿ ಇಂಡಿ

ರಾಜ್ಯ ಮಕ್ಕಳ ಆಯೋಗದ ಸದಸ್ಯ ಶಶಿಧರ ಕೊಸಂಬೆಯವರು ಇಂಡಿ ಪಟ್ಟಣಕ್ಕೆ ಭೇಟಿ ನೀಡಿ ಇಂಡಿಯ ಡಾ|| ಪ್ರೀತಿ ಕೋಳೆಕರ, ಡಾ|| ಭಾರತಿ ಗಜಾಕೋಶ, ಡಾ|| ಮಯೂರಿ ಧನಶೆಟ್ಟಿ ಆಸ್ಪತ್ರೆಗಳಿಗೆ ಭೇಟಿ ಗರ್ಭಪಾತ ನಡೆಸುವ ಸ್ಕ್ಯಾನಿಂಗ್ ಸೆಂಟರ್ ಕುರಿತು ತಪಾಸಣೆ ಮಾಡಿದರು.

ಮತ್ತು ಪಿಸಿಪಿಎನ್‌ಡಿಟಿ ಸ್ಕ್ಯಾನಿಂಗ್ ಕಾಯ್ದೆ ಅನ್ವಯ ಸಂಬಂದಿತ ಪ್ರತಿಯೊಂದು ಆಸ್ಪತ್ರೆಯವರು ಪಾಲಿಸಬೇಕು. ಕಾಯ್ದೆ ಉಲ್ಲಂಘಿಸಿದವರಿಗೆ ಸಂಬಂದಿತ ಅಧಿಕಾರಿಗಳಿಗೆ ಕ್ರಮ ಕೈಗೊಳ್ಳಲು ತಿಳಿಸಲಾಗಿದೆ ಎಂದರು. ದವಾಖಾನೆಗಳ ರಿನ್ಯೂವಲ್ ಮಾಡಿಸಬೇಕು, ಆಸ್ಪತ್ರೆಯಲ್ಲಿ ಕಡ್ಡಾಯವಾಗಿ ಸಿ.ಸಿ.ಟಿ.ವಿ ಅಳವಡಿಸಬೇಕು ಎಂದು ಸಲಹೆ ನೀಡಿದರು. ಸ್ಕ್ಯಾನಿಂಗ್ ಮಾಡುವ ಮಸೀನು ಪರಿಶೀಲಿಸಿ ಅಲ್ಲಿ ಗರ್ಭಪಾತ ನಡೆಯುವದೇ ಎಂದು ಪರಿಶೀಲಿದರು.

ಉದಯವಾಹಿನಿ ಚಿತ್ರ

ಆಸ್ಪತ್ರೆ ಮತ್ತು ವಸತಿ ನಿಲಯಕ್ಕೆ ಭೇಟಿ

ಸ್ಕ್ಯಾನಿಂಗ್ ಮಾಡುವ ಮಶೀನು ಮತ್ತು ಪ್ರತಿದಿನ ಎಷ್ಟು ರೋಗಿಗಳು ಬರುತ್ತವೆ ಎಂಬುದನ್ನು ದಿನ ನಿತ್ಯದ ಡೈರಿ ಇಡಬೇಕು ಸೇರಿದಂತೆ ಇನ್ನಿತರ ಗರ್ಭಪಾತ ನಡೆಸದಂತೆ ಕುರಿತು ಪರಿಶೀಲನೆ ನಡೆಸಿದರು. ಪಟ್ಟಣದ ಡಿ.ದೇವರಾಜ ಅರಸು ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡಿ ವಿದ್ಯಾರ್ಥಿನಿಯರಿಗೆ ತೊಂದರೆಗಳನ್ನು ಕೇಳಿದರು. ವಸತಿ ನಿಲಯದಲ್ಲಿ ನೀಡುವ ಊಟ, ಸ್ನಾನಗೃಹ, ಕುಡಿಯುವ ನೀರಿನ ವ್ಯವಸ್ಥೆ, ಅಡುಗೆ ಕೋಣೆ ಸೇರಿದಂತೆ ಎಲ್ಲವನ್ನು ಪರಿಶೀಲಿಸಿದರು.

ವಿದ್ಯಾರ್ಥಿನಿಯರು ವಸತಿ ನಿಲಯದ ಮುಂದೆ ಕೆಎಸ್ ಆರ್ ಟಿಸಿ ಬಸ್ಸು ನಿಲುಗಡೆ ಯಾಗುವಂತೆ ಕೇಳಿಕೊಂಡರು. ವಸತಿ ನಿಲಯದಲ್ಲಿ ಕಂಪ್ಯೂಟರ್ ವ್ಯವಸ್ಥೆ ಬೇಕು ಮತ್ತು ಪ್ರತಿ ದಿನ ನೀರು ಬರುವದಿಲ್ಲ, ನೀರಿನ ವ್ಯವಸ್ತೆ ಯಾಗಬೇಕು ಎಂದರು. ಕುಡಲೇ ಸಂಬಂದಿತ ಅಧಿಕಾರಿಗಳಿಗೆ ಮಾತನಾಡಿ ವ್ಯವಸ್ಥೆ ಸರಿಪಡಿಸಲು ಕೇಳಿಕೊಂಡರು.

ಕಂದಾಯ ಉಪವಿಬಾಗಾಧಿಕಾರಿ ಅಬೀದ್ ಗದ್ಯಾಳ, ತಹಶೀಲ್ದಾರ ಮಂಜುಳಾ ನಾಯಕ, ವಿಜಯಪುರ ಸಿಡಿಪಿಒ ಬಸವರಾಜ ಜಿಗಳೂರ ಮತ್ತಿತರಿದ್ದರು.

ಗೋವಾಗೆ ಅಕ್ರಮವಾಗಿ ಸಾಗಿಸುತ್ತಿದ್ದ ಕಪ್ಪೆಗಳ ರಕ್ಷಣೆ

- ಉದಯವಾಹಿನಿ ಕಾರವಾರ

ಗೋವಾಕ್ಕೆ ಅಕ್ರಮವಾಗಿ ಸಾಗಿಸುತ್ತಿದ್ದ ಇಂಡಿಯನ್ ಬುಲ್ ಫ್ರಾಗ್ ಜಾತಿಗೆ ಸೇರಿದ ಕಪ್ಪೆಗಳನ್ನು ಕಾರವಾರದ ಅರಣ್ಯಾಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಈ ಸಂಬಂಧ ಚಾಲಕ ಮತ್ತು ನಿರ್ವಾಹಕರನ್ನು ಬಂಧಿಸಲಾಗಿದೆ.

ಕಾರವಾರ-ಸದಾಶಿವಗಡ ನಡುವಿನ ಕಾಳಿ ಸೇತುವೆ ಮೇಲೆ ಖಾಸಗಿ ಬಸ್ ತಡೆದು ಲಗೇಜ್ ಜಾಗದಲ್ಲಿ ಚೀಲದಲ್ಲಿ ಸಂಗ್ರಹಿಸಿಟ್ಟಿದ್ದ ಕಪ್ಪೆಗಳನ್ನು ವಶಕ್ಕೆ ಪಡೆಯಲಾಗಿದೆ. ಅರಣ್ಯಾಧಿಕಾರಿಗಳ ಪ್ರಕಾರ, ಗೋವಾಕ್ಕೆ ಭೇಟಿ ನೀಡುವ ವಿದೇಶಿಯರು ಈ ಬುಲ್ ಫ್ರಾಗ್‌ಗಳನ್ನು ವಿಶೇಷ ಖಾದ್ಯವನ್ನಾಗಿ ಇಷ್ಟಪಡುತ್ತಾರೆ. ಹೆಚ್ಚಿನ ಬೇಡಿಕೆಯಿಂದಾಗಿ, ಈ ಜಾತಿಯ ಕಪ್ಪೆಯನ್ನು ಹಿಡಿದು ಗೋವಾದ ರೆಸಾರ್ಟ್‌ಗಳಿಗೆ ಮಾರಾಟ ಮಾಡುವ ಜನರ ದೊಡ್ಡ ಜಾಲವಿದೆ' ಎಂದು ಅರಣ್ಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಬಂಧಿತ ಗೋವಾ ನಿವಾಸಿಗಳಾದ ಚಾಲಕ ಸಿದ್ದೇಶ್ ದೇಸಾಯಿ ಮತ್ತು ಕಂಡಕ್ಟರ್ ಜಾನು ಲೂಲಿಮ್ ವಿರುದ್ಧ ವನ್ಯಜೀವಿ ಕಾಯ್ದೆಯಡಿ ಪ್ರಕರಣ ದಾಖಲಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ.

ಕೆನರಾ ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ ವಸಂತ್ ರೆಡ್ಡಿ ಮಾತನಾಡಿ, ಇದು ಎರಡನೇ ಪ್ರಕರಣವಾಗಿದೆ. ಹಿಂದಿನದು 2017-2018ರಲ್ಲಿ ವರದಿಯಾಗಿತ್ತು. ಅವರು (ಸ್ಮಗ್ಲರ್‌ಗಳು) ಮತ್ತೆ ಬರುತ್ತಾರೆ ಎಂದು ನನಗೆ ತಿಳಿದಿತ್ತು. ನಾವು ಅಲರ್ಟ್ ಆಗಿದ್ದೇವೆ ಮತ್ತು ಅಪರಾಧಿಗಳನ್ನು ಹಿಡಿಯಲು ಸನ್ನದ್ಧರಾಗಿದ್ದೆವು ಎಂದು ಅವರು ಹೇಳಿದರು.

ನಿದ್ದೆಗೆಟ್ಟು ಕೆರೆ ತುಂಬಿಸಿದ ಪ.ಪಂ ಮುಖ್ಯಾಧಿಕಾರಿ

- ಉದಯವಾಹಿನಿ ಬಳಗಾನೂರು

ರಾಯಚೂರು ಸೇರಿ ಇತರೆ ಜಿಲ್ಲೆಗಳಿಗೆ ನೀರಿನ ಅಭಾವ ಉಂಟಾಗಿರುವ ಹಿನ್ನೆಲೆಯಲ್ಲಿ ತುಂಗಭದ್ರ ಜಲಾಶಯದಿಂದ ಎಡದಂಡೆ ಮುಖ್ಯ ಕಾಲುವೆಯ ನೀರು ಹರಿಸಲಾಗುತ್ತಿದ್ದು. ಈ ಹಿನ್ನಲೆಯಲ್ಲಿ ಪಪಂ ವ್ಯಾಪ್ತಿಯ ನಾರಾಯಣ ನಗರಕ್ಯಾಂಪಿನ ಕೆರ ತುಂಬಿಸಲು ನಾಲೆಯ 65 ನೇ ಡಿಸ್ಟಿಬ್ಯೂಟರನಿಂದ ನೀರು ಹರಿಸಿ ಕೆರೆ ತುಂಬಿಸುವ ಹಿನ್ನಲೆಯಲ್ಲಿ ಪ.ಪಂ ಮುಖ್ಯಾಧಿಕಾರಿ ಕಳಕಮಲ್ಲೇಶ ಗರಡಿ ತಂಡ ಯೋಜನೆ ರೂಪಿಸಿ ಕೆಲಸ ಆರಂಭಿಸಿದ ಸ್ಥಳಕ್ಕೆ ಜಿಲ್ಲಾ ಯೋಜನಾ ನಿರ್ದೇಶಕ ಜಗದೀಶ ಗಂಗಣ್ಣನವರು ಭೇಟಿ ನೀಡಿ ಪರೀಶಿಲಿಸಿದರು.

ಉದಯವಾಹಿನಿ ಚಿತ್ರ

ನಂತರ ಮಾತನಾಡಿದ ಅವರು ಕೆರೆ ಅಭಿವೃದ್ಧಿಗಾಗಿ ಯೋಜನೆಗಳನ್ನು ರೂಪಿಸಿ, ಜನತೆಗೆ ಕುಡಿಯುವ ನೀರಿನ ಅಭಾವವಾಗದಂತೆ ಮುನ್ನೆಚ್ಚರಿಕೆ ವಹಿಸಿ. ಕರ್ತವ್ಯದಲ್ಲಿ ನಿರಂತರವಾಗಿ ಕಾರ್ಯ ನಿರ್ವಹಿಸುತ್ತಿರುವ ಪಪಂ ಮುಖ್ಯಾಧಿಕಾರಿ ಕಳಕಮಲ್ಲೇಶ ಗರಡಿ ಸೇರಿ ಪಪಂ ಇತರ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಕರ್ತವ್ಯ ನಿಷ್ಠೆಗೆ ಪ್ರಶಂಸೆ ವ್ಯಕ್ತಪಡಿಸಿದರು. ಅಧಿಕಾರಿಗಳ ಆದೇಶದಂತೆ ಪಪಂ ಮುಖ್ಯಾ ಧಿಕಾರಿ ಗರಡಿ ತಂಡ ರಾತ್ರಿ ನಾರಾಯಣನಗರ ಕ್ಯಾಂಪ್ ಕೆರೆಯನ್ನು ನಿದ್ದೆಗೆಟ್ಟು ತುಂಬಿಸಿದ್ದಾರೆ. ಕಾಲುವೆಗೆ ನೀರು ಹರಿ ಬಿಡುತಿದ್ದಂತೆ ಕ್ಯಾಂಪಿನ ಜನತೆಯ ಸಹಕಾರದೊಂದಿಗೆ ತ್ಯಾಜ್ಯವನ್ನು ತರೆವು ಗೊಳಿಸುತ್ತ ಸುಮಾರು 4-5 ಕೀಲೋಮೀಟರ್ ಕಾಲುವೆ ಮೂಲಕ ನೀರು ಹರಿಸುತ್ತ ಕರೆ ತುಂಬಿಸಿದ್ದಾರೆ. ಕ್ಯಾಂಪಿನ ಜನತೆಗೆ ಸುಮಾರು 4-5 ತಿಂಗಳು ನೀರಿನ ಕೊರತೆಯಾಗದಂತೆ ನೀಗಿಸಬಹುದಾಗಿದೆ.

ಜನತಾ ದರ್ಶನ ಕಾರ್ಯಕ್ರಮದಲ್ಲಿ, ಸಾರ್ವಜನಿಕರಿಂದ ಹಲವಾರು ಅಹವಾಲು

- ಉದಯವಾಹಿನಿ ಸಿರುಗುಪ್ಪ

ನಗರದ ತಹಶೀಲ್ದಾರರ ಕಛೇರಿಯ ಸಭಾಂಗಣದಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ ಹಾಗೂ ನಗರಸಭೆ ವತಿಯಿಂದ ನಡೆದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಶಾಸಕ ಬಿ.ಎಮ್.ನಾಗರಾಜ ಅವರ ಉಪಸ್ಥಿತಿಯಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ ಮಿಶ್ರಾ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶರಣಪ್ಪ ಸಂಕನೂರು ಅವರು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

ಉದಯವಾಹಿನಿ ಚಿತ್ರ

ನಡವಿ ಗ್ರಾಮಕ್ಕೆ ಮಂಜೂರಾದ ಪ್ರಾಥಮಿಕ ಆರೋಗ್ಯ ಕೇಂದ್ರದ ಕಾಮಗಾರಿಗೆ ಚಾಲನೆ ನೀಡುವಂತೆ ನಡವಿ ಗ್ರಾಮಸ್ಥರು ಮನವಿ ಸಲ್ಲಿಸಿದರು. ಬಲಕುಂದಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮೈಲಾಪುರ ಕ್ಯಾಂಪ್, ಬಾಲಾಜಿ ಕ್ಯಾಂಪ್, ಬೆನಕಗುಂಡಿ ವಲಯ ಮತ್ತು ಎಸ್.ಸಿ ಕಾಲೋನಿಗಳಿಗೆ ಉಂಟಾಗುವ ನೀರಿನ ಕೊರತೆ ನೀಗಿಸಬೇಕು. ದೇಶನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ 5ನೇ ವಾರ್ಡಿಗೆ ಬರುವ ಹಳೇ ದೇಶನೂರು ಗ್ರಾಮಕ್ಕೆ ನಿರಂತರ ವಿದ್ಯುತ್ ಜ್ಯೋತಿ ಕಲ್ಪಿಸಿ ಅಲ್ಲಿನ ಕುಡಿಯುವ ನೀರಿನ ಪೂರೈಕೆ ಮಾಡಿ ಸಮಸ್ಯೆ ನೀಗಿಸುವುದು, ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ನಂದಿನಿ ಕ್ಷೀರ ಮಳಿಗೆ ಸ್ಥಾಪಿಸ

ಫಿಲಿಪ್ಪೀನ್ಸ್ ನೌಕಾ ಸಿಬ್ಬಂದಿ ಜೊತೆ ಚೀನಾ ಸಮುದ್ರ ಕಾಳಗ

● ಕಾರ್ಯತಂತ್ರದ ದೃಷ್ಟಿಯಿಂದ ಬಹಳ ಸೂಕ್ಷ್ಮವಾಗಿರುವ ದಕ್ಷಿಣ ಚೀನಾ ಸಮುದ್ರದಲ್ಲಿ ನಡೆದ ಈ ನಾಟಕೀಯ ಘಟನೆ

ಮನೀಲಾ: ಆಕ್ಕಪಕ್ಕದ ದೇಶಗಳ ಜತೆ ಕಾಲುಕೆರೆದು ಜಗಳಕ್ಕೆ ಹೋಗುವುದರಲ್ಲಿ ನಿಸ್ಸೀಮನಾಗಿರುವ ಚೀನಾ, ಸಮುದ್ರದ ನಡುವೆಯೂ ಫಿಲಿಪ್ಪೀನ್ಸ್ ನ ನೌಕಾ ಪಡೆ ಹಡಗಿನ ಸಿಬ್ಬಂದಿ ಜತೆ ಗುದ್ದಾಡಿದೆ. ಚಾಕುಗಳು, ಕೊಡಲಿ ಹಾಗೂ ಇತರೆ ಆಯುಧಗಳನ್ನು ಝಳಪಿಸುವ ಮೂಲಕ ಚೀನಾ ಕರಾವಳಿ ಕಾವಲು ಪಡೆ ಸಿಬ್ಬಂದಿ, ಫಿಲಿಪ್ಪೀನ್ಸ್ ನೌಕಾ ಪಡೆ ಹಡಗಿನ ಜತೆ ಘರ್ಷಣೆ ನಡೆಸಿದೆ. ಕಾರ್ಯತಂತ್ರದ ದೃಷ್ಟಿಯಿಂದ ಬಹಳ ಸೂಕ್ಷ್ಮವಾಗಿರುವ ದಕ್ಷಿಣ ಚೀನಾ ಸಮುದ್ರದಲ್ಲಿ ನಡೆದ ಈ ನಾಟಕೀಯ ಘಟನೆಯ ವಿಡಿಯೋವನ್ನು ಫಿಲಿಪ್ಪೀನ್ಸ್ ಬಿಡುಗಡೆ ಮಾಡಿದೆ.

ವಿವಾದಿತ ಸೆಕೆಂಡ್ ಥಾಮಸ್ ಶಾವೊಲ್‌ನಲ್ಲಿ ಉದ್ದೇಶಪೂರ್ವಕವಾಗಿ ನಿಲ್ಲಿಸಲಾಗಿರುವ ಯುದ್ಧ ನೌಕೆ ಸಿಯೆರ್ರಾ ಮಾಡ್ರೆಯಲ್ಲಿ ಬೋಟ್‌ಗಳನ್ನು ಸೇರಿಸಲು ಫಿಲಿಪ್ಪೀನ್ಸ್ ಪಡೆಗಳು ಪ್ರಯತ್ನ ನಡೆಸಿದ್ದವು. ಆಗ ಈ ಘರ್ಷಣೆ ನಡೆದಿದೆ ಚೀನಾ ಕರಾವಳಿ ಕಾವಲು ಪಡೆಯ ಸುಮಾರು ಎಂಟು ಬೋಟ್‌ಗಳು ಫಿಲಿಪ್ಪೀನ್ಸ್‌ನ ಗಾಳಿ ತುಂಬಿಸಬಹುದಾದ ಎರಡು ದೋಣಿಗಳಿಗೆ ಪದೇ ಪದೇ ಡಿಕ್ಕಿ ಹೊಡೆದಿವೆ. ಚೀನಾ ಸಿಬ್ಬಂದಿ ಮಚ್ಚು, ಚಾಕು ಹಾಗೂ ಸುತ್ತಿಗೆಗಳಿಂದ ಅವರ ಹಡಗುಗಳಿಗೆ ಹಾನಿ ಮಾಡಿದ್ದಾರೆ.

ಚೀನಾ ವಿರುದ್ಧ ಕಿಡಿ

ಈ ಮುಖಾಮುಖಿ ಸಂದರ್ಭದಲ್ಲಿ ತನ್ನ ಕರಾವಳಿ ಕಾವಲುಗಾರರು ವೃತ್ತಿಪರತೆ ಹಾಗೂ ಸಂಯಮದಿಂದ' ವರ್ತಿಸಿದ್ದಾರೆ ಎಂದು ಚೀನಾ ಹೇಳಿಕೊಂಡಿದೆ. ಫಿಲಿಪ್ಪೀನ್ಸ್ ಸಿಬ್ಬಂದಿ ವಿರುದ್ಧ ಯಾವುದೇ ನೇರ ಕ್ರಮಗಳನ್ನು ಕೈಗೊಂಡಿಲ್ಲ ಎಂದಿದೆ. ಇದು ಕಡಲ್ಗಳ್ಳತನಕ್ಕೆ ಸಮನಾಗಿದೆ ಎಂದು ಚೀನಾ ವಿರುದ್ಧ ಫಿಲಿಪ್ಪೀನ್ಸ್ ಕಿಡಿಕಾರಿದೆ. ಚೀನಾ ಲೂಟಿ ಮಾಡಿದ ತನ್ನ ರೈಫಲ್ಸ್ ಹಾಗೂ ಇತರೆ ಸಾಮಗ್ರಿಗಳನ್ನು ವಾಪಸ್ ನೀಡುವಂತೆ ಅದು ಆಗ್ರಹಿಸಿದೆ.

- ದಕ್ಷಿಣ ಚೀನಾ ಸಮುದ್ರದ ವಿವಾದಾತ್ಮಕ ಸೆಕಂಡ್ ಥಾಮಸ್ ಶಾವೊಲ್‌ನಲ್ಲಿ ಸೋಮವಾರ ಘರ್ಷಣೆ
- ನಿಲ್ಲಿಸಿರುವ ಹಡಗಿಗೆ ಶಸ್ತ್ರಾಸ್ತ್ರ ಹಾಗೂ ಇತರೆ ಸಾಮಗ್ರಿಗಳನ್ನು ಪೂರೈಸಲು ಬಂದಿದ್ದ ಫಿಲಿಪ್ಪೀನ್ಸ್ ದೋಣಿಗಳು
- ತಮ್ಮ ಬೋಟ್‌ಗಳಿಂದ ಡಿಕ್ಕಿ ಹೊಡೆಸಿ, ದಾಂಧಲೆ ನಡೆಸಿದ ಚೀನೀ ಪಡೆಗಳಿಂದ ರೈಫಲ್‌ಗಳ ಲೂಟಿ

ರೈಫಲ್‌ಗಳನ್ನು ಕದ್ದ ಚೀನಾ

ವಾಗ್ವಾದ ಹಾಗೂ ಸತತ ಡಿಕ್ಕಿಗಳ ಬಳಿಕ, ಚೀನೀ ಕರಾವಳಿ ಪಡೆ ಸಿಬ್ಬಂದಿ ಫಿಲಿಪ್ಪೀನ್ಸ್ ನೌಕಾ ಪಡೆಯ ಹಡಗಿನ ಒಳಗೆ ಜಿಗಿದು, ಪ್ಯಾಕ್ ಮಾಡಿ ಇರಿಸಲಾಗಿದ್ದ ಎಂಟು ಎಂ4 ರೈಫಲ್‌ಗಳು, ನೇವಿಗೇಷನ್ ಸಾಧನಗಳು ಮತ್ತು ಇತರೆ ಸಾಮಗ್ರಿಗಳನ್ನು ವಶಪಡಿಸಿಕೊಂಡಿದ್ದಾರೆ. ಅವರು ಫಿಲಿಪ್ಪೀನ್ಸ್‌ನ ಅನೇಕ ನೌಕಾ ಸಿಬ್ಬಂದಿ ಜತೆ ಕೈ ಕೈ ಮಿಲಾಯಿಸಿದ್ದು, ಅವರಲ್ಲಿ ಹಲವರಿಗೆ ಗಾಯಗಳಾಗಿವೆ. ಒಬ್ಬ ಸಿಬ್ಬಂದಿ ಬಲಗೈ ಹೆಬ್ಬೆರಳನ್ನೇ ಕಳೆದುಕೊಂಡಿದ್ದಾರೆ ಎಂದು ಭದ್ರತಾ ಅಧಿಕಾರಿಗಳು ತಿಳಿಸಿದ್ದಾರೆ.

ಚಾಕು, ಕೊಡಲಿ ಝಳಪಿಸಿದ ಚೀನಾ ಸೇನೆ

ಸೆಕೆಂಡ್ ಥಾಮಸ್ ಶಾವೊಲ್ ತನ್ನ ಜಾಗ ಎಂದು ಚೀನಾ ಪ್ರತಿಪಾದಿಸುತ್ತಿದೆ. ಅಲ್ಲಿ ನಿಲ್ಲಿಸಲಾಗಿರುವ ಫಿಲಿಪ್ಪೀನ್ಸ್ ಹಡಗಿಗೆ ಶಸ್ತ್ರಾಸ್ತ್ರಗಳು ಹಾಗೂ ಆಹಾರಗಳು ಸೇರಿದಂತೆ ಇತರೆ ಯಾವುದೇ ಸಾಮಗ್ರಿಗಳನ್ನು ಪೂರೈಕೆ ಮಾಡದಂತೆ ಫಿಲಿಪ್ಪೀನ್ಸ್ ನೌಕಾ ಪಡೆಯನ್ನು ತಡೆಯಲು ಚೀನಾ ಸಿಬ್ಬಂದಿ ದಾಳಿ ನಡೆಸಿದ್ದಾರೆ. ಫಿಲಿಪ್ಪೀನ್ಸ್ ಸೇನೆ ಬಿಡುಗಡೆ ಮಾಡಿರುವ ವಿಡಿಯೋದಲ್ಲಿ, ಚೀನೀ ಪಡೆಗಳು ನೌಕಾ ಸಿಬ್ಬಂದಿ ಕಡೆಗೆ ಚಾಕು, ಕತ್ತಿಗಳನ್ನು ತೋರಿಸಿ ಬೆದರಿಸಿರುವುದು ಕಾಣಿಸಿದೆ. ಫಿಲಿಪ್ಪೀನ್ಸ್‌ನ ಎರಡು ನೌಕಾ ಪೂರೈಕೆ ದೋಣಿಗಳನ್ನು ಅವರ ಬೋಟ್‌ಗಳು ಸುತ್ತುವರಿದಿವೆ. ಎರಡೂ ಕಡೆಯ ಸಿಬ್ಬಂದಿ ವಾಗ್ವಾದ ನಡೆಸುವಾಗ ಸೈರನ್ ಮೊಳಗುವುದು ಕೇಳಿಸಿದೆ. ಕೋಲಿನಿಂದ ಫಿಲಿಪ್ಪೀನ್ಸ್ ದೋಣಿಗಳಿಗೆ ಹೊಡೆದು, ಅವುಗಳನ್ನು ಹಿಡಿದುಕೊಂಡಿರುವುದು ವಿಡಿಯೋದಲ್ಲಿ ಸೆರೆಯಾಗಿದೆ.

ಅತಿ ಉಷ್ಣಾಂಶ : ಮೆಕ್ಕಾದಲ್ಲಿ 900 ದಾಟಿದ ಸಾವಿನ ಸಂಖ್ಯೆ

ಮೆಕ್ಕಾ: ಮುಸ್ಲಿಂ ಸಮುದಾಯದ ಪವಿತ್ರ ಕ್ಷೇತ್ರವಾದ ಮೆಕ್ಕಾದಲ್ಲಿ ಇತ್ತೀಚೆಗೆ ಸಂಭವಿಸಿದ ಅತಿ ಉಷ್ಣಾಂಶದಿಂದ ಉಂಟಾದ ಸಾವಿನ ಸಂಖ್ಯೆ 900 ದಾಟಿದೆ. ಈಗಾಗಲೇ ಮೃತಪಟ್ಟಿರುವ 900 ಮಂದಿಯಲ್ಲಿ ಭಾರತದವರು 68 ಮಂದಿಯಿದ್ದು, ಅವರಲ್ಲಿ ಕರ್ನಾಟಕದ ರಾಯಚೂರು, ಬೆಂಗಳೂರು ಹಾಗೂ ಚಿತ್ರದುರ್ಗದ ತಲಾ ಒಬ್ಬರು ಸೇರಿದ್ದಾರೆಂದು ಮೂಲಗಳು ತಿಳಿಸಿವೆ.

ಮೆಕ್ಕಾಗಿಂತ 8 ಕಿಲೋಮೀಟರ್ ದೂರದ ಮೀನಾ ನಗರದಲ್ಲಿ ಬೆಂಗಳೂರಿನ ಇಬ್ಬರು ಯಾತ್ರಿಕರು ಸಾವನ್ನಪ್ಪಿದ್ದಾರೆ. ಮೃತರನ್ನು ಆರ್.ಟಿ ನಗರದ ಕೌಸರ್ ರುಕ್ಸಾನ (69) ಮತ್ತು ಫ್ರೆಝರ್ ಟೌನ್‌ನ ಮೊಹಮದ್ ಇಲಿಯಾಸ್ (50) ಎಂದು ಗುರುತಿಸಲಾಗಿದೆ. ಮೆಕ್ಕಾದಲ್ಲೇ ಅಂತ್ಯಕ್ರಿಯೆಗೆ ಸಿದ್ಧತೆ ನಡೆಸಲಾಗಿದೆ.

ಉಳಿದಂತೆ ಕರ್ನಾಟಕದ ಉಳಿದ ಯಾತ್ರಿಕರು ಸುರಕ್ಷಿತವಾಗಿದ್ದಾರೆ ಎಂದು ಹಜ್ ಕಮಿಟಿ ಕಾರ್ಯನಿರ್ವಾಹಕ ಅಧಿಕಾರಿ ಸರ್ರಾಜ್ ಖಾನ್ ಮಾಹಿತಿ ನೀಡಿದ್ದಾರೆ. ಈ ಬಾರಿ ಕರ್ನಾಟಕದಿಂದ 10,300 ಮಂದಿ ಹಜ್ ಯಾತ್ರೆಗೆ ತೆರಳಿದ್ದರು. ಇವರೊಂದಿಗೆ ರುಕ್ಸಾನ ಸಹ ಕುಟುಂಬದ ಜೊತೆಗೆ ಹಜ್ ಯಾತ್ರೆಗೆ ತೆರಳಿದ್ದರು.

ಎಎಪಿ ಸುದ್ದಿ ಸಂಸ್ಥೆಗೆ ಸೌದಿ ಅರೇಬಿಯಾದ

ರಾಜತಂತ್ರಜ್ಞರೊಬ್ಬರು ನೀಡಿರುವ ಮಾಹಿತಿಯ ಪ್ರಕಾರ, ಮೃತಪಟ್ಟವರಲ್ಲಿ ಹೆಚ್ಚಿನವರು ಈಜಿಪ್ಟ್ ದೇಶಕ್ಕೆ ಸೇರಿದವರಾಗಿದ್ದಾರೆ. ಈಗಾಗಲೇ ಮೃತಪಟ್ಟಿರುವ 900ರಷ್ಟು ಜನರಲ್ಲಿ ಸುಮಾರು 600 ಮಂದಿ ಈಜಿಪ್ಟ ರಾಷ್ಟ್ರದವರೇ ಆಗಿದ್ದಾರೆ ಎಂದು ಹೇಳಿದ್ದಾರೆ. ಎಎಪಿ ಕಲೆ ಹಾಕಿರುವ ಮಾಹಿತಿಯ ಪ್ರಕಾರ, ಸದ್ಯಕ್ಕೆ ಮೃತಪಟ್ಟವರ ಸಂಖ್ಯೆ 922 ಎಂದು ಹೇಳಲಾಗಿದೆ.

ಈಜಿಪ್ಟ್ ಹೊರತಾಗಿ, ಜೋರ್ಡನ್, ಇಂಡೋನೇಷ್ಯಾ, ಇರಾನ್, ಸೆನೆಗಲ್, ಟ್ಯುನೇಷಿಯ ಹಾಗೂ ಇರಾಕ್‌ನ ಸ್ವಾಯತ್ತ ಪ್ರಾಂತ್ಯವಾದ ಖುರ್ದಿಸ್ತಾನ್‌ನಿಂದ ಬಂದಿರುವವರು ಸೇರಿದ್ದಾರೆ. ಇವರಲ್ಲಿ 68 ಭಾರತೀಯರೂ ಸೇರಿರುವುದಾಗಿ, ತಮ ಹೆಸರನ್ನೇಳಲು ಇಚ್ಛಿಸದ ರಾಜತಂತ್ರಜ್ಞರೊಬ್ಬರು ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ. ಭಾರತದಿಂದ ಈ ಬಾರಿ ಮೆಕ್ಕಾಕ್ಕೆ ಹೋದವರಲ್ಲಿ ಅನೇಕರು ವಯಸ್ಸಾದವರಾಗಿದ್ದರು. ಹಾಗಾಗಿ, ಅವರಲ್ಲಿ ಕೆಲವರ ಸಾವು ಸಹಜ ಸಾವು ಆಗಿದ್ದರೆ ಉಳಿದವರು ವಾತಾವರಣದಲ್ಲಿನ ಉಷ್ಣಾಂಶ ಹಾಗೂ ಇನ್ನಿತರ ಕಾರಣಗಳಿಂದ ಮೃತಪಟ್ಟಿದ್ದಾರೆ ಎಂದು ಹೇಳಲಾಗಿದೆ.

ಮರಣ ಸಂಖ್ಯೆ ಹೆಚ್ಚಿದ್ದು ಏಕೆ?

ಪ್ರತಿ ವರ್ಷದಂತೆ ಈ ವರ್ಷವೂ ಲಕ್ಷಾಂತರ ಮಂದಿ ಯಾತ್ರಿಕರು ಹಜ್ ಯಾತ್ರೆ ಹಮಿಕೊಂಡಿದ್ದರು. ವಿವಿಧ ದೇಶಗಳಿಂದ ಸುಮಾರು 16 ಲಕ್ಷ ಯಾತ್ರಿಕರು ಬಂದಿದ್ದರು. ಈ ವೇಳೆ ಮಿತಿಮೀರಿದ ತಾಪಮಾನ ಏರಿಕೆಯಿಂದ 645 ಮಂದಿ ಯಾತ್ರಿಕರು ಮೃತಪಟ್ಟಿದ್ದು, 2700ಕ್ಕೂ ಹೆಚ್ಚು ಮಂದಿ ಅಸ್ವಸ್ಥರಾಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ. ನೋಂದಣಿ ಮಾಡಿಕೊಳ್ಳದೇ ಹಜ್ ಯಾತ್ರೆಗೆ ಬರುವವರಿಗೆ ಸೂಕ್ತ ಎಸಿ ಸೌಲಭ್ಯ ಇರುವುದಿಲ್ಲ, ಸೂರು ಸಿಗುವುದಿಲ್ಲ. ಈ ಕಾರಣದಿಂದ ಸಾವಿನ ಸಂಖ್ಯೆ ಹೆಚ್ಚಾಗಿದೆ ಎಂದು ಮೂಲಗಳು ತಿಳಿಸಿವೆ.

ಉತ್ತರ ಪ್ರದೇಶದಲ್ಲಿ ಉಪಚುನಾವಣೆಯ ಗಾಳಿ

ಲಖನೌ: ಲೋಕಸಭಾ ಚುನಾವಣೆ ಫಲಿತಾಂಶ ಹೊರಬಿದ್ದ ಬಳಿಕವೂ ಇದೀಗ ಉತ್ತರ ಪ್ರದೇಶದಲ್ಲಿ ಉಪಚುನಾವಣೆಯ ಗಾಳಿ ಬೀಸಿದೆ. ರಾಜ್ಯದ ಖಾಲಿಯಿರುವ 10 ವಿಧಾನಸಭಾ ಸ್ಥಾನಗಳಿಗೆ ಉಪಚುನಾವಣೆಗೆ ವೇದಿಕೆ ಸಿದ್ಧವಾಗಿದೆ. 10 ವಿಧಾನಸಭಾ ಸ್ಥಾನಗಳಿಗೆ ನಡೆಯಲಿರುವ ಉಪಚುನಾವಣೆಗೆ ಬಹುಜನ ಸಮಾಜ ಪಾರ್ಟಿ ಸಿದ್ಧತೆ ಆರಂಭಿಸಿದೆ.

ಇತ್ತ ಬಿಜೆಪಿಯೂ ಲೋಕಸಭಾ ಚುನಾವಣೆಯಲ್ಲಿ ಸೋತ ಸೇಡು ತೀರಿಸಿಕೊಳ್ಳಲು ಸಂಪೂರ್ಣ ಸಜ್ಜಾಗಿದ್ದು, ಎಸ್ಪಿ ಮತ್ತು ಕಾಂಗ್ರೇಸ್ ಮೈತ್ರಿಗೆ ತೀವ್ರ ಪೈಪೋಟಿ ನೀಡಲು ತಯಾರಿ ನಡೆಸುತ್ತಿದೆ ಎಂದು ರಾಜಕೀಯ ವಲಯದಲ್ಲಿ ಚರ್ಚೆ ನಡೆಯುತ್ತಿದೆ.

ಈ ಬಾರಿ ಲೋಕಸಭಾ ಚುನಾವಣೆಯ ಜೊತೆಗೆ ಉತ್ತರ ಪ್ರದೇಶದ ನಾಲ್ಕು ವಿಧಾನಸಭಾ ಸ್ಥಾನಗಳಿಗೆ ಉಪಚುನಾವಣೆಯೂ ನಡೆದಿತ್ತು. ಈ ಎಲ್ಲಾ ಕ್ಷೇತ್ರಗಳಲ್ಲೂ ತನ್ನ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದ ಬಿಎಸ್ಪಿ, ಎಲ್ಲಾ ಕ್ಷೇತ್ರಗಳಲ್ಲೂ ಸೋಲು ಅನುಭವಿಸಿತ್ತು. ಆದರೆ, ಇದೀಗ ಮತ್ತೆ ಧೈರ್ಯ ಕಳೆದುಕೊಳ್ಳದೇ, ಪಕ್ಷ ಇದೀಗ 10 ವಿಧಾನಸಭಾ

ಸ್ಥಾನಗಳಿಗೆ ನಡೆಯಲಿರುವ ಉಪಚುನಾವಣೆಗೆ ಸಿದ್ಧತೆ ಆರಂಭಿಸಿದೆ. ಶೀಘ್ರದಲ್ಲೇ ಉತ್ತರ ಪ್ರದೇಶದಲ್ಲಿ ತೆರವಾಗಿರುವ 10 ವಿಧಾನಸಭಾ ಸ್ಥಾನಗಳಿಗೆ ಉಪಚುನಾವಣೆ ನಡೆಯಲಿದೆ.

ಬಿಎಸ್‌ಪಿ ಮೂಲಗಳ ಪ್ರಕಾರ, ಪಕ್ಷ ತನ್ನದೇ ಸ್ವಂತ ಅಭ್ಯರ್ಥಿಗಳನ್ನು ಈ ಬಾರಿ ಕಣಕ್ಕಿಳಿಸಲಿದೆ. ಆದರೆ, ಬಿಜೆಪಿಯಿಂದ ಪ್ರಸ್ತಾಪ ಬಂದಲ್ಲಿ, 2027ರಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಯಲ್ಲಿ ಬಿಎಸ್‌ಪಿ ಬಿಜೆಪಿಗೆ ಬೆಂಬಲ ಸೂಚಿಸುವ ಸಾಧ್ಯತೆ ಇದೆ ಎಂದು ಮೂಲಗಳು ಹೇಳಿವೆ. ಯಾಕೆಂದರೆ ಎಸ್‌ಪಿ ಹಾಗೂ ಕಾಂಗ್ರೇಸ್‌ನ ಮೈತ್ರಿಯಿಂದಾಗಿ 2024ರ ಲೋಕಸಭಾ ಚುನಾವಣೆಯಲ್ಲಿ ಎರಡೂ ಪಕ್ಷಗಳು ದೊಡ್ಡ ಹೊಡೆತ ತಿಂದಿವೆ. ಇಂತಹ ಪರಿಸ್ಥಿತಿಯಲ್ಲಿ ಬಿಜೆಪಿ ಹಾಗೂ ಬಿಎಸ್‌ಪಿ ಮೈತ್ರಿ ಮಾಡಿಕೊಳ್ಳುವ ಸಾಧ್ಯತೆ ಇದೆ.

ಬಿಸಿಗಾಳಿಗೆ ತತ್ತರಿಸಿದ ಉತ್ತರ ಭಾರತ

ನವದೆಹಲಿ: ಉತ್ತರ ಮತ್ತು ಪೂರ್ವ ಭಾರತ ಈ ಬಾರಿ ಹಿಂದೆಂದೂ ಕಂಡರಿಯದಷ್ಟು ಉಷ್ಣ ಹವೆಗೆ ಸಾಕ್ಷಿಯಾಗಿದೆ. ಶಾಖದ ಹೊಡೆತದಿಂದ ಜನರ ಸಾವುನೋವುಗಳು ಹೆಚ್ಚಾಗುತ್ತಿವೆ. ಬಿಸಿಲಿನ ತಾಪದಿಂದ ಸಂಕಷ್ಟಕ್ಕೆ ಒಳಗಾಗಿರುವವರ ನೆರವಿಗೆ ಕೇಂದ್ರ ಸರ್ಕಾರ ಬಂದಿದೆ. ರೋಗಿಗಳ ರಕ್ಷಣೆ ಹಾಗೂ ನೆರವಿಗೆ ಧಾವಿಸುವಂತೆ ಹಾಗೂ ವಿಶೇಷ ಘಟಕಗಳನ್ನು ಸ್ಥಾಪಿಸುವಂತೆ ಕೇಂದ್ರ ಸರ್ಕಾರದ ಒಡೆತನದ ಎಲ್ಲ ಆಸ್ಪತ್ರೆಗಳಿಗೆ ಸಲಹೆ ಹಾಗೂ ಸೂಚನೆ ನೀಡಿದೆ.

ನೆರವಿಗೆ ಧಾವಿಸಿದ ಕೇಂದ್ರ ಸರ್ಕಾರ

ಪಂಜಾಬ್, ಹರಿಯಾಣ, ಚಂಡೀಗಢ, ದೆಹಲಿ, ಉತ್ತರ ಪ್ರದೇಶ ಮತ್ತು ಉತ್ತರ ರಾಜಸ್ಥಾನದ ಹಲವು ಭಾಗಗಳಲ್ಲಿ ಗರಿಷ್ಠ ತಾಪಮಾನವು 43 ರಿಂದ 45 ಡಿಗ್ರಿ ಸೆಲ್ಸಿಯಸ್‌ನಷ್ಟಿದೆ. ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಕಳೆದ ಎರಡು ದಿನಗಳಲ್ಲಿ ಹೀಟ್ ಸ್ಟ್ರೋಕ್ ಮತ್ತು ಶಾಖದ ಬಳಲಿಕೆಯಿಂದ ಹಲವಾರು ಸಾವುಗಳು ಸಂಭವಿಸಿವೆ. ಆಸ್ಪತ್ರೆಗೆ ದಾಖಲಾಗುವವರ ಸಂಖ್ಯೆಯಲ್ಲಿ ಭಾರಿ ಹೆಚ್ಚಳವಾಗಿದೆ ಎಂದು ವರದಿಗಳು ಹೇಳುತ್ತಿವೆ. ದೆಹಲಿಯಲ್ಲಿ ತಾಪಮಾನ ಹೆಚ್ಚುತ್ತಿರುವ ಪರಿಣಾಮ ಈಗ ಮೃತ ದೇಹಗಳು ಪತ್ತೆಯಾಗಲು ಆರಂಭವಾಗಿವೆ. ಬಿಸಿಲಿನ ತಾಪ ಇದೀಗ ಮಾರಕವಾಗಿ ಪರಿಣಮಿಸಿದೆ. ಇದು ಪ್ರತಿದಿನ ಜನರ ಪ್ರಾಣ ತೆಗೆಯುತ್ತಿದೆ. ದೆಹಲಿಯಲ್ಲಿ ತೀವ್ರ ಬಿಸಿಲಿನ ತಾಪ ಮತ್ತು ಶಾಖದ ಅಲೆಯಿಂದ ಸಾವಿನ ಸಂಖ್ಯೆ ನಿರಂತರವಾಗಿ ಹೆಚ್ಚುತ್ತಿದೆ. ಕಳೆದ 48 ಗಂಟೆಗಳಲ್ಲಿ 50 ಮೃತದೇಹಗಳು ಪತ್ತೆಯಾಗಿರುವುದರಿಂದ ದೆಹಲಿಯಲ್ಲಿ ಸಂಚಲನ ಉಂಟಾಗಿದೆ.

9 ದಿನಗಳಲ್ಲಿ 192 ನಿರಾಶ್ರಿತರು ಬಿಸಿಲಿಗೆ ಪ್ರಾಣ ಕಳೆದುಕೊಂಡಿದ್ದಾರೆ. ಅಧಿಕಾರಿಗಳ ಪ್ರಕಾರ, 48 ಗಂಟೆಗಳ ಅವಧಿಯಲ್ಲಿ ದೆಹಲಿಯ ವಿವಿಧ ಭಾಗಗಳಿಂದ ಅವಕಾಶ ವಂಚಿತ ಸಾಮಾಜಿಕ-ಆರ್ಥಿಕ ಹಿನ್ನೆಲೆಗೆ ಸೇರಿದ 50 ಜನರ ಮೃತದೇಹಗಳನ್ನು ವಶಪಡಿಸಿಕೊಳ್ಳಲಾಗಿದೆ. ಇದೆಲ್ಲವೂ ವಿಪರೀತ ಶಾಖದಿಂದಾಗಿ ಉಂಟಾಗಿದೆ. ಕಳೆದ 48 ಗಂಟೆಗಳಲ್ಲಿ ರಾಷ್ಟ್ರ ರಾಜಧಾನಿಯಾದ್ಯಂತ 50 ಶವಗಳು ಪತ್ತೆಯಾಗಿವೆ. ಆದರೆ ಸಾವಿನ ಕಾರಣವನ್ನು ಇನ್ನೂ ಕಂಡುಹಿಡಿಯಲಾಗಿಲ್ಲ.

ತಮಿಳುನಾಡಿನಲ್ಲಿ ನಕಲಿ ಮದ್ಯ ಸೇವಿಸಿ ಮೃತಪಟ್ಟವರ ಸಂಖ್ಯೆ 33ಕ್ಕೆ ಏರಿಕೆ

ಕಲ್ಲುಕುರಿಚಿ: ತಮಿಳುನಾಡಿನ ಕಲ್ಲುಕುರಿಚಿ ಜಿಲ್ಲೆಯ ಕರುಣಾಪುರಂನಲ್ಲಿ ನಕಲಿ ಮದ್ಯ ಸೇವಿಸಿ ಸಾವನ್ನಪ್ಪಿರುವವರ ಸಂಖ್ಯೆ 33 ಕ್ಕೆ ಏರಿಕೆಯಾಗಿದೆ.ನಕಲಿ ಮದ್ಯ ಸೇವನೆಯಿಂದ 20 ಮಂದಿ ಅಸ್ವಸ್ಥರಾಗಿದ್ದು, ಈ ಪೈಕಿ 7 ಜನರ ಸ್ಥಿತಿ ಗಂಭೀರವಾಗಿದ್ದು, ಸಾವಿನ ಸಂಖ್ಯೆ ಹೆಚ್ಚಾಗುವ ಕಳವಳ ವ್ಯಕ್ತವಾಗಿದೆ.

ಘಟನೆಗೆ ಸಂಬಂಧಿಸಿದಂತೆ ಕೆ.ಕಣ್ಣಾಕುಟ್ಟಿ(49) ಎಂಬುವರನ್ನು ಬಂಧಿಸಲಾಗಿದ್ದು, 200 ಲೀ. ನಕಲಿ ಮದ್ಯ ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಕರುಣಾಪುರಂನ ದಿನಗೂಲಿ ಕಾರ್ಮಿಕರು ಸೇರಿ 60ಕ್ಕೂ ಹೆಚ್ಚು ಜನ ಮಂಗಳವಾರ ರಾತ್ರಿ ಪ್ಯಾಕೆಟ್‌ನಲ್ಲಿ ಅಕ್ರಮವಾಗಿ ಮಾರಾಟ ಮಾಡುತ್ತಿದ್ದ ಮದ್ಯವನ್ನು ಸೇವಿಸಿದ್ದು, ಮನೆಗೆ ತಲುಪಿದ ನಂತರ ಮದ್ಯ ಸೇವಿಸಿದ ಹೆಚ್ಚಿನವರಲ್ಲಿ ತಲೆ ತಿರುಗುವಿಕೆ, ವಾಂತಿ, ಹೊಟ್ಟೆನೋವು ಮತ್ತು ಕಣ್ಣುಗಳಲ್ಲಿ ಉರಿಯುವಿಕೆ ಯಂತಹ ಸಮಸ್ಯೆಗಳು ಕಂಡುಬಂದಿವೆ.

ಕೂಡಲೇ ಅವರನ್ನು ಕಲ್ಲುಕುರಿಚಿ ಸರ್ಕಾರಿ ವೈದ್ಯಕೀಯ ಆಸ್ಪತ್ರೆ ಹಾಗೂ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆಗೆ ದಾಖಲಿಸಲಾಗಿದೆ. ಚಿಕಿತ್ಸೆ ಫಲಕಾರಿಯಾಗದೆ ನಿನ್ನೆ 10 ಜನ ಸಾವನ್ನಪ್ಪಿದ್ದು, ತಡರಾತ್ರಿ ಆರು ಮಂದಿ

ಅಣ್ಣಾಮಲೈ ಖಂಡನೆ

ನಕಲಿ ಮದ್ಯ ಹಾವಳಿ ತಡೆವಟ್ಟುವಲ್ಲಿ ಡಿಎಂಕೆ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಅಬಕಾರಿ ಸಚಿವ ಎಸ್.ಮುತ್ತುಸ್ವಾಮಿ ರಾಜೀನಾಮೆ ನೀಡಬೇಕೆಂದು ತಮಿಳುನಾಡು ರಾಜ್ಯ ಬಿಜೆಪಿ ಮುಖಂಡ ಅಣ್ಣಾಮಲೈ ಆಗ್ರಹಿಸಿದ್ದಾರೆ. ಘಟನೆಗೆ ತೀವ್ರ ಖಂಡನೆ ವ್ಯಕ್ತಪಡಿಸಿರುವ ಅವರು, ದುರಂತದಲ್ಲಿ ಮಡಿದವರ ಕುಟುಂಬದವರಿಗೆ ಸಂತಾಪ ಸೂಚಿಸಿದ್ದಾರೆ.

ಸಾವನ್ನಪ್ಪಿದ್ದಾರೆ.ಇಂದು ಬೆಳಿಗ್ಗೆ ಸಾವಿನ ಸಂಖ್ಯೆ 33 ಕ್ಕೆ ಏರಿಕೆಯಾಗಿದೆ. 20 ಜನರಿಗೆ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಮುಂದುವರೆಸಲಾಗಿದೆ. ಘಟನೆಗೆ ಸಂಬಂಧಿಸಿದಂತೆ ಮಹಿಳೆ ಸೇರಿ ಮೂವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

ಪ್ರಕರಣ ಸಿಐಡಿ ತನಿಖೆಗೆ

ನಕಲಿ ಮದ್ಯ ದುರಂತಕ್ಕೆ ಮುಖ್ಯಮಂತ್ರಿ ಸ್ಟಾಲಿನ್ ಆಘಾತ ವ್ಯಕ್ತಪಡಿಸಿದ್ದು, ದುರಂತದಲ್ಲಿ ಮೃತಪಟ್ಟವರಿಗೆ ಸಂತಾಪ ಸೂಚಿಸಿದ್ದಾರೆ. ಪ್ರಕರಣ ಕುರಿತು ಸಿಬಿ-ಸಿಐಡಿ ತನಿಖೆಗೆ ಆದೇಶಿಸಿದ್ದಾರೆ. ಕಲ್ಲುಕುರಿಚಿ ದುರಂತ ತೀವ್ರ ಆಘಾತ ಉಂಟುಮಾಡಿದ್ದು, ಆರೋಪಿಯನ್ನು ಬಂಧಿಸಲಾಗಿದೆ. ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲ

ಅಫ್ಘಾನ್ ವಿರುದ್ಧ ಅಬ್ಬರಿಸಿದ ಸೂರ್ಯ-ಪಾಂಡ್ಯ!

ನಿಧಾನಗತಿಯ ಪಿಚ್‌ಗಳಲ್ಲಿ ನಡೆಯುತ್ತಿದೆ ಸೂಪರ್-8 ಪಂದ್ಯಗಳು, ಗರಿಷ್ಠ ಮೊತ್ತ ಕಲೆ ಹಾಕಿದ ಟೀಂ ಇಂಡಿಯಾ!

2024ರ ಟಿ20 ವಿಶ್ವಕಪ್‌ನಲ್ಲಿ ಸೂಪರ್ 8 ಪಂದ್ಯಗಳಿಗೆ ಟೀಂ ಇಂಡಿಯಾ ಸಿದ್ಧವಾಗಿದೆ. ಸೂಪರ್-8 ಪಂದ್ಯಗಳು ವೆಸ್ಟ್ ಇಂಡೀಸ್ ನಿಧಾನಗತಿಯ ಪಿಚ್‌ಗಳಲ್ಲಿ ನಡೆಯುತ್ತಿದೆ. ಆದರೆ ಟೂರ್ನಿಯಲ್ಲಿ ಮೊದಲ ಬಾರಿಗೆ ವೆಸ್ಟ್ ಇಂಡೀಸ್ ನಲ್ಲಿ ಆಡುವುದರ ಜೊತೆಗೆ ಇನ್ನು ಕೆಲವು ಅಂಶಗಳು ಟೀಂ ಇಂಡಿಯಾವನ್ನು ಕಾಡುತ್ತಿವೆ. ಗ್ರೂಪ್ ಹಂತದಲ್ಲಿ ನ್ಯೂಜಿಲೆಂಡ್ ಅನ್ನು ಸೋಲಿಸಿ ಸೂಪರ್ 8 ತಲುಪಿದ್ದ ಅಫ್ಘಾನಿಸ್ತಾನವನ್ನು ಟೀಂ ಇಂಡಿಯಾ ಎದುರಿಸುತ್ತಿದೆ. ಈ ಪಂದ್ಯಕ್ಕೆ ಬಾರ್ಬಡೋಸ್‌ನ ಬ್ರಿಡ್ಜ್ ಟೌನ್ ಕ್ರೀಡಾಂಗಣ ಆತಿಥ್ಯವಹಿಸಿದೆ. ಇನ್ನೂ ಟಾಸ್ ಗೆದ್ದ ಟೀಂ ಇಂಡಿಯಾ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿತ್ತು. ಇನ್ನೂ ಈ ಟೂರ್ನಿಯಲ್ಲೇ ಇದೇ ಭಾರತ ಗರಿಷ್ಠ ಮೊತ್ತ ಕಲೆ ಹಾಕಿದೆ. 20 ಓವರ್‌ಗಳಲ್ಲಿ ಟೀಂ ಇಂಡಿಯಾ 7 ವಿಕೆಟ್ ಕಳೆದುಕೊಂಡು 181 ರನ್‌ಗಳಿಸಿತು

ವಿರಾಟ್ ಬದಲು ರೋಹಿತ್ ಬೇಗ ಔಟ್!

ರೋಹಿತ್ ಮತ್ತು ವಿರಾಟ್ ತಂಡಕ್ಕೆ ಆರಂಭಿಕರಾಗಿ ಬಂದ್ರು. ಮೊದಲ ಮೂರು ಪಂದ್ಯಗಳಲ್ಲಿ ವಿರಾಟ್ ಕೊಹ್ಲಿ ಬೇಗ ಔಟಾಗ್ತಿದ್ರು. ಆದರೆ ಈ ಪಂದ್ಯದಲ್ಲಿ ರೋಹಿತ್ ಶರ್ಮಾ ದೊಡ್ಡ ಹೊಡೆತಕ್ಕೆ ಯತ್ನಿಸಿ ಔಟಾದ್ರು. ಭಾರತ ತಂಡ 11 ರನ್‌ಗಳಿಸಿದ್ದಾಗ ನಾಯಕ ರೋಹಿತ್ ಶರ್ಮಾ 8 ರನ್‌ಗಳಿಸಿ ತಮ್ಮ ಇನ್ನಿಂಗ್ಸ್ ಮುಗಿಸಿದ್ರು.

ಮೂರು ವಿಕೆಟ್ ಉರುಳಿಸಿದ ರಶೀದ್ ಖಾನ್!

ಟೀಂ ಇಂಡಿಯಾ 7ನೇ ಓವರ್‌ನಲ್ಲಿ 2ನೇ ವಿಕೆಟ್ ಕಳೆದುಕೊಳ್ತು. ರಿಷಬ್ ಪಂತ್ 20 ರನ್ ಬಾರಿಸಿ ಎಲ್‌ಬಿ ಡಬ್ಲ್ಯೂ ಆದರು. ವಿರಾಟ್ ಕೊಹ್ಲಿ ಕೂಡ 24 ಎಸೆತಗಳಲ್ಲಿ 24 ರನ್ ಬಾರಿಸಿ ಔಟಾದರು. ಶಿವಂ ದುಬೆ 10 ರನ್ ಬಾರಿಸಿ ಔಟಾಗಿದ್ದಾರೆ. ಟೀಂ ಇಂಡಿಯಾದ ಪ್ರಮುಖ 3 ವಿಕೆಟ್ ಉರುಳಿಸುವಲ್ಲಿ ರಶೀದ್ ಖಾನ್ ಯಶಸ್ವಿಯಾಗಿದ್ದಾರೆ.

ಟೀಂ ಇಂಡಿಯಾ ಪ್ಲೇಯಿಂಗ್ 11: ರೋಹಿತ್ ಶರ್ಮಾ (ಸಿ), ವಿರಾಟ್ ಕೊಹ್ಲಿ, ರಿಷಭ್ ಪಂತ್ (ಡಬ್ಲ್ಯೂ), ಸೂರ್ಯಕುಮಾರ್ ಯಾದವ್, ಶಿವಂ ದುಬೆ, ಹಾರ್ದಿಕ್ ಪಾಂಡ್ಯ, ರವೀಂದ್ರ ಜಡೇಜಾ, ಅಕ್ಷರ್ ಪಟೇಲ್, ಕುಲದೀಪ್ ಯಾದವ್, ಅರ್ಶ್‌ದೀಪ್ ಸಿಂಗ್, ಜಸ್ಪ್ರೀತ್ ಬುಮ್ರಾ,

ಅಫ್ಘಾನಿಸ್ತಾನ ಪ್ಲೇಯಿಂಗ್ 11: ರಹಮಾನುಲ್ಲಾ ಗುರ್ಬಾಜ್ (ಡಬ್ಲ್ಯೂ), ಇಬ್ರಾಹಿಂ ಝುದ್ರಾನ್, ನಜಿಬುಲ್ಲಾ ಝುದ್ರಾನ್, ಹಜರತುಲ್ಲಾ ಝುಝೈ, ಗುಲ್ಬದಿನ್ ನೈಬ್, ಅಜ್ಮತುಲ್ಲಾ ಒಮರ್ಝೈ, ಮೊಹಮ್ಮದ್ ನಬಿ, ರಶೀದ್ ಖಾನ್ (ಸಿ), ನೂರ್ ಅಹ್ಮದ್, ನವೀನ್-ಉಲ್-ಹಕ್, ಫರೂಲ್ಹಕ್

ಆಸರೆಯಾದ ಸೂರ್ಯ!

ಒಂದು ಕಡೆ ವಿಕೆಟ್ ಉರುಳುತ್ತಿದ್ರೆ ಇತ್ತ ಸೂರ್ಯ ಕುಮಾರ್ ಯಾದವ್ ಟೀಂ ಇಂಡಿಯಾಗೆ ಆಸರೆಯಾದ್ರು. ಭರ್ಜರಿ ಅರ್ಧ ಶತಕ ಬಾರಿಸುವ ಮೂಲಕ ಟೀಂ ಇಂಡಿಯಾ ಬಿಗ್ ಸ್ಕೋರ್ ಕಲೆ ಹಾಕುವಲ್ಲಿ ಪ್ರಮುಖ ಪಾತ್ರ ವಹಿಸಿದ್ರು. ಸೂರ್ಯ ಕುಮಾರ್ ಯಾದವ್ 53 ರನ್‌ಗಳಿಸಿ ಔಟಾದ್ರು. ಇನ್ನೂ ಪಾಂಡ್ಯ ಕೂಡ ಭರ್ಜರಿ ಬ್ಯಾಟಿಂಗ್ ಮಾಡಿದ್ರು. 24 ಬಾಲ್‌ಗಳಲ್ಲಿ 34 ರನ್‌ಗಳಿಸಿ ಔಟಾದ್ರು. ಜಡೇಜಾ 7 ರನ್‌ಗಳಿಸಿ ಔಟಾದ್ರು. ಕೊನೆಯಲ್ಲಿ ಅಕ್ಷರ್ ಪಟೇಲ್ 12 ರನ್‌ಗಳಿಸಿದ್ರು.

ದ್ರಾವಿಡ್, ಗಂಗೂಲಿ ಮತ್ತು ಕೊಹ್ಲಿಗೆ ಬಹಳ ವಿಶೇಷವಾದ ದಿನ

ಜೂನ್ 20 ಭಾರತೀಯ ಕ್ರಿಕೆಟ್ ತಂಡದ ಹಿರಿಯ ಆಟಗಾರರಾದ ವಿರಾಟ್ ಕೊಹ್ಲಿ, ರಾಹುಲ್ ದ್ರಾವಿಡ್ ಮತ್ತು ಸೌರವ್ ಗಂಗೂಲಿ ಅವರಿಗೆ ಬಹಳ ವಿಶೇಷವಾದ ದಿನವಾಗಿದೆ. ಅದೆ ನೆಂದರೆ ಜೂನ್ 20 ರಂದು ಈ ಮೂವರು ಕ್ರಿಕೆಟಿಗರು ಮೊದಲ ಬಾರಿಗೆ ಟೀಂ ಇಂಡಿಯಾದ ಜೆರ್ಸಿಯನ್ನು ಧರಿಸಿದ್ದರು.

ಈ ಮೂವರೂ ಆಟಗಾರರು ಕ್ರಿಕೆಟ್ ಲೋಕದಲ್ಲಿ ಸಂಚಲನ ಮೂಡಿಸಿ ದಾಖಲೆಗಳ ಸರಮಾಲೆ ನಿರ್ಮಿಸಿದ್ದಾರೆ. ಈ ಮೂವರು ಆಟಗಾರರು ಭಾರತ ತಂಡದ ನಾಯಕರೂ ಆಗಿದ್ದರು. ಇದೆಲ್ಲದರ ಜೊತೆಗೆ ಕಾಕತಾಳೀಯವೆಂಬಂತೆ ಈ ಮೂವರು ಜೂನ್ 20ರಂದು ಚೊಚ್ಚಲ ಅಂತರಾಷ್ಟ್ರೀಯ ಟೆಸ್ಟ್ ಪಂದ್ಯವನ್ನಾಡಿದರು ಎಂಬುದು ವಿಶೇಷ ಸಂಗತಿಯಾಗಿದೆ. ಟೀಂ ಇಂಡಿಯಾದ ಮಾಜಿ ನಾಯಕ ಸೌರವ್ ಗಂಗೂಲಿ 20 ಜೂನ್ 1996 ರಂದು ಟೆಸ್ಟ್ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದರು. ಗಂಗೂಲಿ ತಮ್ಮ ಚೊಚ್ಚಲ ಪಂದ್ಯವನ್ನು ಇಂಗ್ಲೆಂಡ್ ವಿರುದ್ಧ ಲಾರ್ಡ್ಸ್‌ನಲ್ಲಿ ಆಡಿದ್ದರು. ಅಲ್ಲದೆ ತಾವು ಆಡಿದ ಮೊದಲ ಪಂದ್ಯದಲ್ಲೇ ಶತಕ ಸಿಡಿಸಿ ಮಿಂಚಿದ್ದರು.

ಸೌರವ್ ಗಂಗೂಲಿ ಟೆಸ್ಟ್ ಕ್ರಿಕೆಟ್‌ನಲ್ಲಿ ಒಟ್ಟು 16 ಶತಕಗಳನ್ನು ಬಾರಿಸಿದ್ದಾರೆ ವಿಶೇಷವೆಂದರೆ ಗಂಗೂಲಿ

ಶತಕ ಬಾರಿಸಿರುವ ಯಾವುದೇ ಪಂದ್ಯದಲ್ಲೂ ಟೀಂ ಇಂಡಿಯಾ ಸೋಲನ್ನು ಎದುರಿಸಿಲ್ಲ.

ಒಟ್ಟಾರೆ ಗಂಗೂಲಿ ತಮ್ಮ ಟೆಸ್ಟ್ ವೃತ್ತಿಜೀವನದಲ್ಲಿ ಒಟ್ಟು 113 ಪಂದ್ಯಗಳನ್ನು ಆಡಿದ್ದಾರೆ. ಇದರಲ್ಲಿ ಅವರು 7212 ರನ್ ಬಾರಿಸಿದ್ದಾರೆ. ಇನ್ನು ಏಕದಿನ ಪಂದ್ಯಗಳ ಬಗ್ಗೆ ಮಾತನಾಡುವುದಾದರೆ, ಸೌರವ್ ಗಂಗೂಲಿ 311 ಪಂದ್ಯಗಳನ್ನು ಆಡಿದ್ದಾರೆ. ಇದರಲ್ಲಿ ಅವರು 22 ಶತಕ ಮತ್ತು 72 ಅರ್ಧ ಶತಕಗಳೊಂದಿಗೆ ಒಟ್ಟು 11363 ರನ್ ಕಲೆಹಾಕಿದ್ದಾರೆ. ಏಕದಿನ ಪಂದ್ಯಗಳಲ್ಲಿ ಅವರ ಅತ್ಯುತ್ತಮ ಸ್ಕೋರ್ 183 ರನ್.

ಭಾರತ ತಂಡದ ಗೋಡೆ ಎಂದೇ ಖ್ಯಾತರಾಗಿರುವ ಕನ್ನಡಿಗ ರಾಹುಲ್ ದ್ರಾವಿಡ್ ಪ್ರಸ್ತುತ ಟೀಂ ಇಂಡಿಯಾದ ಕೋಚ್ ಆಗಿದ್ದಾರೆ. ರಾಹುಲ್ ದ್ರಾವಿಡ್ ಕೂಡ ಸೌರವ್ ಗಂಗೂಲಿ ಅವರೊಂದಿಗೆ ಇಂಗ್ಲೆಂಡ್ ವಿರುದ್ಧ ಲಾರ್ಡ್ಸ್ ಮೈದಾನದಲ್ಲಿ ಟೆಸ್ಟ್ ಪಂದ್ಯಕ್ಕೆ ಪಾದಾರ್ಪಣೆ ಮಾಡಿದರು.

ಟಿ20 ವಿಶ್ವಕಪ್ ಬಳಿಕ ಈ 3 ಬಲಿಷ್ಠ ತಂಡಗಳನ್ನು ಎದುರಿಸಲಿದೆ ಭಾರತ

ಟಿ20 ವಿಶ್ವಕಪ್ ಬಳಿಕ ಟೀಂ ಇಂಡಿಯಾ ಯಾವ ತಂಡಗಳನ್ನು ಎದುರಿಸಲಿದೆ ಈ ವರ್ಷ ಎಷ್ಟು ಪಂದ್ಯಗಳು ನಡೆಯಲಿವೆ ಎಂಬುದರ ಬಗ್ಗೆ ಬಿಸಿಸಿಐ ಖಚಿತ ಮಾಹಿತಿ ನೀಡಿದೆ. ಅಂದರೆ ಮುಂದಿನ ಫೆಬ್ರವರಿ 2025 ರವರೆಗಿನ ಭಾರತ ತಂಡದ ವೇಳಾಪಟ್ಟಿಯನ್ನು ಬಿಸಿಸಿಐ ಬಹಿರಂಗಪಡಿಸಿದೆ.

● ಮುಂದಿನ ಫೆಬ್ರವರಿ 2025 ರವರೆಗಿನ ಭಾರತ ತಂಡದ ವೇಳಾಪಟ್ಟಿ

ಪ್ರಸ್ತುತ ಅಮೆರಿಕ ಹಾಗೂ ವೆಸ್ಟ್ ಇಂಡೀಸ್ ಆತಿಥ್ಯದಲ್ಲಿ 9ನೇ ಆವೃತ್ತಿಯ ಟಿ20 ವಿಶ್ವಕಪ್ ನಡೆಯುತ್ತಿದೆ. ಈ ಮಿನಿ ವಿಶ್ವಸಮರದಲ್ಲಿ ಸೂಪರ್ 8 ಸುತ್ತಿಗೆ ಅರ್ಹತೆ ಪಡೆದಿರುವ ಟೀಂ ಇಂಡಿಯಾ ತನ್ನ ಮೊದಲ ಪಂದ್ಯದಲ್ಲಿ ಅಫ್ಘಾನಿಸ್ತಾನ ತಂಡವನ್ನು ಎದುರಿಸಲಿದೆ. ಈ ಬಳಿಕ ಇದೇ ಸುತ್ತಿನಲ್ಲಿ ಬಾಂಗ್ಲಾದೇಶ ಹಾಗೂ ಆಸ್ಟ್ರೇಲಿಯಾ ತಂಡವನ್ನು ಎದುರಿಸಲಿದೆ. ಈ ಸುತ್ತಿನಲ್ಲಿ ಭಾರತ ಕನಿಷ್ಠ 2 ಪಂದ್ಯಗಳನ್ನು ಗೆದ್ದರೆ ಮುಂದಿನ ಸುತ್ತಿಗೆ ಲಗ್ಗೆ ಇಡಲಿದೆ. ಅದು ಸಾಧ್ಯವಾಗದಿದ್ದರೆ, ರೋಹಿತ್ ಪಡೆ ಈ ಬಾರಿಯೂ ಖಾಲಿ ಕೈಯಲ್ಲಿ ಟೂರ್ನಿಯಿಂದ ವಾಪಸ್ಸಾಗಬೇಕಾಗುತ್ತದೆ. ಹೀಗಾಗಿ ಸೂಪರ್ 8 ಸುತ್ತನ್ನು ಗಂಭೀರವಾಗಿ ಪರಿಗಣಿಸಿರುವ ರೋಹಿತ್ ಪಡೆ ಪ್ರತಿ ಪಂದ್ಯವನ್ನು ಗೆಲ್ಲಲು ನಾನಾ ತಂತ್ರಗಳನ್ನು ಹೆಣೆಯುತ್ತಿದೆ. ಈ ನಡುವೆ ಟಿ20 ವಿಶ್ವಕಪ್ ಬಳಿಕ ಟೀಂ ಇಂಡಿಯಾ ಯಾವ ತಂಡಗಳನ್ನು ಎದುರಿಸಲಿದೆ ಎಷ್ಟು ಪಂದ್ಯಗಳು ನಡೆಯಲ್ಲಿವೆ ಎಂಬುದರ ಬಗ್ಗೆ ಬಿಸಿಸಿಐ ಖಚಿತ ಮಾಹಿತಿ ನೀಡಿದೆ. ಅಂದರೆ ಮುಂದಿನ ಫೆಬ್ರವರಿ 2025 ರವರೆಗಿನ ಭಾರತ ತಂಡದ ವೇಳಾಪಟ್ಟಿಯನ್ನು ಬಿಸಿಸಿಐ ಬಹಿರಂಗಪಡಿಸಿದೆ.

ಟೀಮ್ ಇಂಡಿಯಾ ಕೋಚ್ ಹುದ್ದೆ

ಬಾಂಗ್ಲಾದೇಶ ತಂಡ ಈ ವರ್ಷ ಸೆಪ್ಟೆಂಬರ್‌ನಿಂದ ಅಕ್ಟೋಬರ್‌ವರೆಗೆ ಭಾರತದ ಪ್ರವಾಸ ಮಾಡಲಿದೆ. ಈ ಪ್ರವಾಸದಲ್ಲಿ ಬಾಂಗ್ಲಾದೇಶ ತಂಡ ಎರಡು ಟೆಸ್ಟ್ ಹಾಗೂ ಮೂರು ಟಿ20 ಪಂದ್ಯಗಳನ್ನು ಭಾರತದ ವಿರುದ್ಧ ಆಡಲಿದೆ.

ಭಾರತ ಮತ್ತು ಬಾಂಗ್ಲಾದೇಶ ನಡುವಿನ ಮೊದಲ ಟೆಸ್ಟ್ ಪಂದ್ಯ ಸೆಪ್ಟೆಂಬರ್ 19 ರಿಂದ ಚೆನ್ನೈನಲ್ಲಿ ಆರಂಭವಾಗಲಿದೆ. ಇದಾದ ಬಳಿಕ ಎರಡನೇ ಟೆಸ್ಟ್ ಪಂದ್ಯ ಅಕ್ಟೋಬರ್ 1 ರಿಂದ ಕಾನ್ಪುರದಲ್ಲಿ ನಡೆಯಲಿದೆ. ಇನ್ನು ಮೂರು ಟಿ20 ಪಂದ್ಯಗಳ ಸರಣಿ ಅಕ್ಟೋಬರ್ 6, 9 ಮತ್ತು 12 ರಂದು ನಡೆಯಲಿದೆ. ಈ ಪಂದ್ಯಗಳ ಆತಿಥ್ಯವನ್ನು ಧರ್ಮಶಾಲಾ, ದೆಹಲಿ ಮತ್ತು ಹೈದರಾಬಾದ್ ವಹಿಸುತ್ತಿವೆ.

ಭಾರತ- ಬಾಂಗ್ಲಾದೇಶ ವೇಳಾಪಟ್ಟಿ		
ಟೆಸ್ಟ್ ಸರಣಿ		
ಮೊದಲ ಟೆಸ್ಟ್	ಸೆ. 19-23ರವರೆಗೆ	ಚೆನ್ನೈ
ಎರಡನೇ ಟೆಸ್ಟ್	ಸೆ. 27-ಅ.1 ರವರೆಗೆ	ಕಾನ್ಪುರ
ಟಿ20 ಸರಣಿ		
ಮೊದಲ ಟಿ20	6 ಅ. 2024	ಧರ್ಮಶಾಲಾ
ಎರಡನೇ ಟಿ20	9 ಅ.2024	ದೆಹಲಿ
ಮೂರನೇ ಟಿ20	12 ಅ.2024	ಹೈದರಾಬಾದ್

ಭಾರತಕ್ಕೆ ಬರಲಿದೆ ನ್ಯೂಜಿಲೆಂಡ್ ತಂಡ

ಭಾರತ- ನ್ಯೂಜಿಲೆಂಡ್ ವೇಳಾಪಟ್ಟಿ		
ಟೆಸ್ಟ್ ಸರಣಿ		
ಮೊದಲ ಟೆಸ್ಟ್	ಅ. 16-20, 2024	ಬೆಂಗಳೂರು
ಎರಡನೇ ಟೆಸ್ಟ್	ಅ. 24-28, 2024	ಪುಣೆ
ಮೂರನೇ ಟೆಸ್ಟ್	ನ.1-5, 2024	ಮುಂಬೈ

ಬಾಂಗ್ಲಾದೇಶ ವಿರುದ್ಧದ ಸರಣಿ ಮುಗಿದ ಬಳಿಕ ಭಾರತ, ನ್ಯೂಜಿಲೆಂಡ್ ತಂಡದ ವಿರುದ್ಧ ತವರಿನಲ್ಲಿ ಮುಖಾಮುಖಿಯಾಗಲಿದೆ. ಇದಕ್ಕಾಗಿ ಕಿವೀಸ್ ಪಡೆ ಅಕ್ಟೋಬರ್‌ನಿಂದ ನವೆಂಬರ್‌ವರೆಗೆ ಭಾರತ ಪ್ರವಾಸ ಕೈಗೊಳ್ಳಲಿದೆ. ಈ ಸರಣಿಯಲ್ಲಿ ಮೂರು ಟೆಸ್ಟ್ ಪಂದ್ಯಗಳು ನಡೆಯಲಿವೆ. ಸರಣಿಯ ಮೊದಲ ಪಂದ್ಯ ಅಕ್ಟೋಬರ್ 16 ರಿಂದ ಬೆಂಗಳೂರಿನಲ್ಲಿ ನಡೆಯಲಿದೆ. ಎರಡನೇ ಟೆಸ್ಟ್ ಅಕ್ಟೋಬರ್ 24 ರಿಂದ ಪುಣೆಯಲ್ಲಿ ನಡೆಯಲಿದ್ದು, ಮೂರನೇ ಮತ್ತು ಕೊನೆಯ ಪಂದ್ಯ ನವೆಂಬರ್ 1 ರಿಂದ ಮುಂಬೈನಲ್ಲಿ ನಡೆಯಲಿದೆ. ಇದರೊಂದಿಗೆ ಈ ಸರಣಿ ಕೊನೆಗೊಳ್ಳಲಿದೆ.

● ಈ ವರ್ಷ ಎಷ್ಟು ಪಂದ್ಯಗಳು ನಡೆಯಲಿವೆ ಎಂಬುದರ ಬಗ್ಗೆ ಮಾಹಿತಿ

ಇಂಗ್ಲೆಂಡ್ ತಂಡದ ಭಾರತ ಪ್ರವಾಸ

ಮುಂದಿನ ವರ್ಷ ಅಂದರೆ 2025ರ ಜನವರಿಯಲ್ಲಿ ಇಂಗ್ಲೆಂಡ್ ತಂಡ ಭಾರತಕ್ಕೆ ಭೇಟಿ ನೀಡಲಿದೆ. ಈ ಸರಣಿಯಲ್ಲಿ 5 ಟಿ20 ಪಂದ್ಯಗಳ ಸರಣಿ ಮತ್ತು ಮೂರು ಏಕದಿನ ಪಂದ್ಯಗಳು ನಡೆಯಲಿವೆ. ಜನವರಿ 22 ರಂದು ಚೆನ್ನೈನಲ್ಲಿ ಮೊದಲ ಟಿ20 ಪಂದ್ಯ ನಡೆಯಲಿದೆ. ಸರಣಿಯ ಎರಡನೇ ಪಂದ್ಯ ಜನವರಿ 25 ರಂದು ಕೋಲ್ಕತ್ತಾದಲ್ಲಿ ಮತ್ತು ಮೂರನೇ ಪಂದ್ಯ ಜನವರಿ 28 ರಂದು ರಾಜ್ ಕೋಟ್‌ನಲ್ಲಿ ನಡೆಯಲಿದೆ. ಸರಣಿಯ ನಾಲ್ಕನೇ ಪಂದ್ಯ ಜನವರಿ 31 ರಂದು ಪುಣೆಯಲ್ಲಿ ನಡೆಯಲಿದೆ. ಕೊನೆಯ ಮತ್ತು ಐದನೇ ಟಿ20 ಪಂದ್ಯ ಫೆಬ್ರವರಿ 2 ರಂದು ಮುಂಬೈನಲ್ಲಿ ನಡೆಯಲಿದೆ. ಸರಣಿಯ ಮೊದಲ ಏಕದಿನ ಪಂದ್ಯ ಫೆಬ್ರವರಿ 6 ರಂದು ನಾಗ್ಪುರದಲ್ಲಿ, ಎರಡನೇ ಪಂದ್ಯ ಫೆಬ್ರವರಿ 9 ರಂದು ಕಟಕ್‌ನಲ್ಲಿ ಮತ್ತು ಕೊನೆಯ ಪಂದ್ಯ ಫೆಬ್ರವರಿ 12 ರಂದು ಅಹಮದಾಬಾದ್‌ನಲ್ಲಿ ನಡೆಯಲಿದೆ. ಇದರೊಂದಿಗೆ ಸರಣಿ ಕೊನೆಗೊಳ್ಳಲಿದೆ.

ಭಾರತ- ಇಂಗ್ಲೆಂಡ್ ವೇಳಾಪಟ್ಟಿ		
ಟಿ20 ಸರಣಿ		
ಮೊದಲನೇ ಟಿ20	22 ಜ. 2025	ಚೆನ್ನೈ
ಎರಡನೇ ಟಿ20	25 ಜ. 2025	ಕೋಲ್ಕತ್ತಾ
ಮೂರನೇ ಟಿ20	28 ಜ. 2025	ರಾಜ್‌ಕೋಟ್
ನಾಲ್ಕನೇ ಟಿ20	31 ಜ. 2025	ಪುಣೆ
ಐದನೇ ಟಿ20	2 ಫೆ. 2025	ಮುಂಬೈ
ಏಕದಿನ ಸರಣಿ		
ಮೊದಲನೇ ಏಕದಿನ	6 ಫೆ. 2025	ನಾಗ್ಪುರ
ಎರಡನೇ ಏಕದಿನ	9 ಫೆ. 2025	ಕಟಕ್
ಮೂರನೇ ಏಕದಿನ	12 ಫೆ. 2025	ಅಹಮದಾಬಾದ್

ತೆಲುಗು ನಿರ್ದೇಶಕನ ಜೊತೆ ಕೈಜೋಡಿಸಿದ ಸನ್ನಿ ಡಿಯೋಲ್

'ಗದರ್ 2' ಸಿನಿಮಾ ಕಮ್ ಬ್ಯಾಕ್ ಆಗಿ ಗೆದ್ದು ಬೀಗುತ್ತಿರುವ ಸನ್ನಿ ಡಿಯೋಲ್ ಇದೀಗ ತೆಲುಗಿನ ನಿರ್ದೇಶಕ ಗೋಪಿಚಂದ್ ಮಲಿನೇನಿರ ಜೊತೆ ಕೈಜೋಡಿಸಿದ್ದಾರೆ. ಹೊಸ ಸಿನಿಮಾಗಾಗಿ ಇಬ್ಬರೂ ಜೊತೆಯಾಗಿದ್ದಾರೆ. ಕ್ಲ್ಯಾಕ್, ವೀರ ಸಿಂಹ ರೆಡ್ಡಿ, ವಿನ್ನರ್ ಸಿನಿಮಾಗಳ ಮೂಲಕ ಸಂಚಲನ ಮೂಡಿಸಿರುವ ಗೋಪಿಚಂದ್ ಮಲಿನೇನಿ ಬರೆದಿರುವ ಕಥೆ ಕೇಳಿ ಥ್ರಿಲ್ ಆಗಿ ಸಿನಿಮಾ ಮಾಡಲು ಸನ್ನಿ ಡಿಯೋಲ್ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ. ಸನ್ನಿ ಡಿಯೋಲ್ ಜೊತೆ ಗೋಪಿಚಂದ್ ಸಿನಿಮಾ ಮಾಡುತ್ತಿರೋದಾಗಿ ಚಿತ್ರತಂಡ ಅಧಿಕೃತವಾಗಿ ಅನೌನ್ಸ್ ಮಾಡಿದೆ. 'ಎಸ್‌ಡಿಜಿಎಂ' ಎಂಬ ಟೈಟಲ್ ಇಡಲಾಗಿದೆ. ಈ ಚಿತ್ರಕ್ಕೆ ಮೈತ್ರಿ ಮೂವಿ ಮೇಕರ್ಸ್ ನಿರ್ಮಾಣ ಮಾಡುತ್ತಿದೆ.

ಅಂದಹಾಗೆ, ಗೆಲುವಿಗಾಗಿ ಸ್ಟಾರ್ ಕಲಾವಿದರು ಸೌತ್‌ನತ್ತ ಮುಖ ಮಾಡುತ್ತಿದ್ದಾರೆ. ಅದೇ ತಂತ್ರವನ್ನೇ ಸನ್ನಿ ಡಿಯೋಲ್ ಮಾಡುತ್ತಿದ್ದಾರೆ. ಪಕ್ಕಾ ಆಕ್ಷನ್ ಕಮ್ ಲವ್ ಸ್ಟೋರಿ ಕುರಿತ ಸಿನಿಮಾ ಬರಲು 'ಗದರ್ 2' ನಟ ರೆಡಿಯಾಗಿದ್ದಾರೆ.

ಹೊಸ ರೀಲ್ಸ್ ಶೇರ್ ಮಾಡಿದ ನಿವೇದಿತಾ

ರ್ಯಾಪರ್ ಚಂದನ್ ಶೆಟ್ಟಿ ಜೊತೆಗಿನ ದಾಂಪತ್ಯಕ್ಕೆ ಅಂತ್ಯ ಹಾಡಿದ ಮೇಲೆ ನಿವೇದಿತಾ ಸೋಷಿಯಲ್ ಮೀಡಿಯಾದಲ್ಲಿ ಅಂತರ ಕಾಯ್ದುಕೊಂಡಿದ್ದರು. ಈಗ ಡಿವೋರ್ಸ್ ಬಳಿಕ ಹೊಸ ರೀಲ್ಸ್ ಅನ್ನು ನಿವೇದಿತಾ ಇನ್ಸ್ಟಾಗ್ರಾಂ ಖಾತೆಯಲ್ಲಿ ಹಂಚಿಕೊಂಡಿದ್ದಾರೆ.

ನಗುತ್ತಿರುವ ವಿಡಿಯೋವನ್ನು ನಟಿ ಶೇರ್ ಮಾಡಿದ್ದಾರೆ. 30 ಸಾವಿರಕ್ಕೂ ಅಧಿಕ ಲೈಕ್ಸ್ ಪಡೆದುಕೊಂಡಿದೆ. ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬರುತ್ತಿದೆ. ಜೂನ್ 7ರಂದು ಕಾನೂನು ಬದ್ಧವಾಗಿ ಪರಸ್ಪರ ಒಪ್ಪಂದದಿಂದ ಸಂಬಂಧ ಕೊನೆಗೊಳಿಸುವುದಾಗಿ ಸೋಷಿಯಲ್ ಮೀಡಿಯಾದಲ್ಲಿ ಚಂದನ್ ಮತ್ತು ನಿವೇದಿತಾ ಅನೌನ್ಸ್ ಮಾಡಿದ್ದರು. ನಾನು ಮತ್ತು ನಿವೇದಿತಾ ಮದುವೆಯಾಗಿ ನಾಲ್ಕು ವರ್ಷಗಳ ನಂತರ ಕಾನೂನುಬದ್ಧವಾಗಿ ಬೇರೆಯಾಗಲು ನಿರ್ಧರಿಸಿದ್ದೇವೆ. ನಮ್ಮ ಸ್ವಂತ ಸಂತೋಷ ಮತ್ತು ಬೆಳವಣಿಗೆಯ ಮೇಲೆ ಕೇಂದ್ರೀಕರಿಸುವುದು ಮುಖ್ಯ ಎಂದು ಅರ್ಥಮಾಡಿಕೊಳ್ಳುವ ಮೂಲಕ ನಾವು ನಮ್ಮ ಮದುವೆಯನ್ನು ಉತ್ತಮ ರೀತಿಯಲ್ಲಿ ಕೊನೆಗೊಳಿಸುತ್ತಿದ್ದೇವೆ. ಈ ಕಷ್ಟದ ಸಮಯದಲ್ಲಿ ನಾವು ಮಾಧ್ಯಮಗಳು, ನಮ್ಮ ಸ್ನೇಹಿತರು ಮತ್ತು ಅಭಿಮಾನಿಗಳಿಂದ ಬೆಂಬಲವನ್ನು ಕೇಳುತ್ತೇವೆ. ನಾವು ನಮ್ಮ ದಾರಿಯಲ್ಲಿ ಹೋಗುತ್ತಿದ್ದರೂ ಸಹ, ನಾವು ಇನ್ನೂ ಪರಸ್ಪರ ಬಲವಾದ ಸ್ನೇಹ ಮತ್ತು ಗೌರವವನ್ನು ಹೊಂದಿದ್ದೇವೆ. ಈ ಸವಾಲಿನ ಅವಧಿಯಲ್ಲಿ ನಿಮ್ಮ ಬೆಂಬಲ ನಮ್ಮಿಬ್ಬರ ಮೇಲಿರಲಿ ಎಂದು ಪೋಸ್ಟ್ ಮಾಡಿದ್ದರು. ಅಂದಹಾಗೆ, ಇಬ್ಬರೂ ಜೊತೆಯಾಗಿ 'ಕ್ಯಾಂಡಿಕ್ರಶ್' ಚಿತ್ರದ ಮೂಲಕ ಬರುತ್ತಿದ್ದಾರೆ. ಇನ್ನೂ ಕೆಲ ದಿನಗಳ ಚಿತ್ರೀಕರಣ ಬಾಕಿದ್ದು, ಚಿತ್ರತಂಡಕ್ಕೆ ಚಂದನ್ ಮತ್ತು ನಿವೇದಿತಾ ಸಾಥ್ ನೀಡುತ್ತಿದ್ದಾರೆ. ಈ ವರ್ಷದ ಅಂತ್ಯದಲ್ಲಿ ಸಿನಿಮಾ ರಿಲೀಸ್ ಆಗಲಿದ